

# ಬೆಳಗಾವಿ ವರದಿ


ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 244 ₹ ಬೆಲೆ: 4 Tuesday, 21, November,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23


## ಅರಣ್ಯ ಇಲಾಖೆ ಕಚೇರಿಯಲ್ಲೇ ಶ್ರೀಗಂಧ ಕಳವು: ಇಬ್ಬರು ಅರೆಸ್ಟ್



ಯಾದಗಿರಿ: ಅರಣ್ಯ ಇಲಾಖೆ ಕಚೇರಿಯಲ್ಲೇ ಶ್ರೀಗಂಧ ಕಳವು ಮಾಡಿದ್ದ ಶಿವಮೊಗ್ಗ ಜಿಲ್ಲೆಯ ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಯಾದಗಿರಿಯ ಅರಣ್ಯ ಇಲಾಖೆ ಪ್ರಾದೇಶಿಕ ವಲಯ ಕಚೇರಿಯಲ್ಲಿ ಶ್ರೀಗಂಧದ ಕಟ್ಟಿಗೆಗಳನ್ನು ಕಳವು ಮಾಡಿದ ಶಿವಮೊಗ್ಗದ ಸೂಳೆಬೈಲ್ ನಿವಾಸಿ ಬಾಬಾಜಾನ್ ಮೌಲಾಸಾಬ್ ಮತ್ತು ಶಿಕಾರಿಪುರದ ಪಾಲಾಕ್ಷಪ್ಪ ಅವರನ್ನು ಬಂಧಿಸಲಾಗಿದೆ. ಬಂಧಿತರಿಂದ 2.87 ಲಕ್ಷ ರೂ. ಮೌಲ್ಯದ 40 ಕೆಜಿ ಶ್ರೀಗಂಧದ ತುಂಡುಗಳು, ಕೃತ್ಯಕ್ಕೆ ಬಳಸಿದ ಇನೋವಾ ಕಾರ್ ವಶಕ್ಕೆ ಪಡೆಯಲಾಗಿದೆ. ಕಚೇರಿಯಲ್ಲಿದ್ದ ಶ್ರೀಗಂಧ ಕಟ್ಟಿಗೆಗಳ ಕಲವು ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ತವ್ಯಲೋಪ ಎಸಗಿದ ಇಬ್ಬರನ್ನು ಅಮಾನತು ಮಾಡಲಾಗಿತ್ತು. ಅ. 1 ಮತ್ತು 3ರಂದು ಕಚೇರಿಯ ಹಿಂಬದಿಯಲ್ಲಿದ್ದ ಕಿಟಕಿಯ ಗ್ರಿಲ್ ಮುರಿದು ಜಪ್ತಿ ಜ್ಯೋತಿ ಮಾಡಿ ಇಡಲಾಗಿದ್ದ 6.16 ಲಕ್ಷ ರೂ. ಮೌಲ್ಯದ 88 ಕೆಜಿ ಶ್ರೀಗಂಧ ಕಟ್ಟಿಗೆಗಳು ಕಳುವಾಗಿದ್ದವು. ಈ ಕುರಿತು ಅರಣ್ಯಾಧಿಕಾರಿ ಎಂ. ಲಕ್ಷ್ಮಣ ದೂರು ನೀಡಿದ್ದರು. ಆರೋಪಿಗಳನ್ನು ಬಂಧಿಸಿದ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

### ಅಧಿವೇಶನ ಪೂರ್ವಸಿದ್ಧತೆ ಸಭೆ: ಅನಧಿಕೃತ ಜಾಹೀರಾತು ಫಲಕ ತೆರವಿಗೆ ಕಟ್ಟುನಿಟ್ಟಿನ ಸೂಚನೆ

## ಕಾಲಮಿತಿಯಲ್ಲಿ ಸಿದ್ಧತೆ ಪೂರ್ಣಗೊಳಿಸಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ

ಬೆಳಗಾವಿ: ಮುಂಬರುವ ವಿಧಾನಮಂಡಳ ಚಳಿಗಾಲ ಅಧಿವೇಶನಕ್ಕೆ ಸಂದರ್ಭದಲ್ಲಿ ವಸತಿ, ಊಟೋಪಹಾರ, ಸಾರಿಗೆ ಸೇರಿದಂತೆ ಯಾವುದೇ ರೀತಿಯ ಅನಾನುಕೂಲ ಆಗದಂತೆ ಪ್ರತಿಯೊಂದು ಸಿದ್ಧತೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಅಧಿಕಾರಿಗಳಿಗೆ ತಿಳಿಸಿದರು.



ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಸೋಮವಾರ(ನ.20) ನಡೆದ ಅಧಿವೇಶನ ಪೂರ್ವಸಿದ್ಧತೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಧಿವೇಶನ ವೇಳೆ ಸಚಿವರು, ಗಣ್ಯರು, ಉನ್ನತಮಟ್ಟದ ಅಧಿಕಾರಿಗಳು ನಗರದಲ್ಲಿ ವಾಸ್ತವ್ಯ ಮಾಡಲಿದ್ದಾರೆ. ಇದಲ್ಲದೇ ಸುವರ್ಣ ವಿಧಾನಸೌಧ ಬಳಿ ವಿವಿಧ ಸಂಘ–ಸಂಸ್ಥೆಗಳು ಪ್ರತಿಭಟನೆಯನ್ನು ಹಮ್ಮಿಕೊಳ್ಳಲಿವೆ. ಆದ್ದರಿಂದ ಪ್ರತಿವರ್ಷದಂತೆ ಪ್ರತಿಭಟನಾ ಸ್ಥಳಗಳಲ್ಲಿ ಕುಡಿಯುವ ನೀರು ಮತ್ತಿತರ ಮೂಲಸೌಕರ್ಯಗಳನ್ನು ಒದಗಿಸಬೇಕು ಎಂದು ತಿಳಿಸಿದರು.

ಅಂತರ್ಜಾಲ ಸಂಪರ್ಕ, ವಿದ್ಯುತ್ ಸಂಪರ್ಕ, ಶಾಮಿಯಾನಾ, ಬ್ಯಾರಿಕೇಡ್, ಪಾರ್ಕಿಂಗ್ ಮತ್ತಿತರ ವ್ಯವಸ್ಥೆಗಳು ಸಮರ್ಪಕವಾಗಿರಬೇಕು.

ಸಂಬಂಧಿಸಿದ ಸಮಿತಿಯ ಅಧಿಕಾರಿಗಳು ಮುಂಚಿತವಾಗಿಯೇ ಪ್ರತಿಯೊಂದನ್ನು ಪರಿಶೀಲಿಸಿ ಖಚಿತಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

**ಅನಧಿಕೃತ ಜಾಹೀರಾತು ಫಲಕ ತೆರವುಗೊಳಿಸಲು ಸೂಚನೆ:** ಬೆಳಗಾವಿ ನಗರದ ಪ್ರಮುಖ ವೃತ್ತಗಳು ಮತ್ತು ರಸ್ತೆಗಳಲ್ಲಿರುವ ವಿದ್ಯುತ್ ಕಂಬಗಳು, ಮರ–ಗಿಡಗಳು, ಗೋಡೆಗಳು ಸೇರಿದಂತೆ ವಿವಿಧ ಕಡೆಗಳಲ್ಲಿ ಅನಧಿಕೃತ ಜಾಹೀರಾತು ಫಲಕಗಳನ್ನು ಹಾಕಲಾಗಿರುತ್ತದೆ. ಅಂತಹ ಅನಧಿಕೃತ ಜಾಹೀರಾತು ಫಲಕಗಳನ್ನು ಕೂಡಲೇ ತೆರವುಗೊಳಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದಲ್ಲಿ ಅನೇಕ ಕಡೆಗಳಲ್ಲಿ ವಿದ್ಯುತ್ ಕಂಬಗಳು ಮತ್ತು ಗೋಡೆ, ಮರಗಳ ಮೇಲೆ ಕೋಚಿಂಗ್ ಸೆಂಟರ್, ಖಾಸಗಿ ಮಳಿಗೆಗಳು, ವಾಣಿಜ್ಯ ವಹಿವಾಟುಗಳಿಗೆ ಸಂಬಂಧಿಸಿದಂತಹ ಜಾಹೀರಾತುಗಳನ್ನು ಹಾಕಲಾಗಿರುತ್ತದೆ.

ಇದರಿಂದ ವಿದ್ಯುತ್ ತಂತಿ ಹರಿದು ಅನಾಹುತವಾಗುವ ಸಾಧ್ಯತೆಗಳಿವೆ. ಆದ್ದರಿಂದ ಅನಧಿಕೃತ ಜಾಹೀರಾತುಗಳನ್ನು ಹಾಕುವ ಕಂಪನಿ ಅಥವಾ ಸಂಸ್ಥೆಗಳಿಗೆ ದಂಡ ವಿಧಿಸಬೇಕು ಎಂದು ಮಹಾನಗರ ಪಾಲಿಕೆಯ ಆಯುಕ್ತರಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಪೊಲೀಸ್ ಆಯುಕ್ತರಾದ ಎಸ್.ಎನ್.ಸಿದ್ದರಾಮಪ್ಪ ಅವರು ಮಾತನಾಡಿ, ಭದ್ರತೆ ದೃಷ್ಟಿಯಿಂದ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ಸಾವಿರಾರು ಸಂಖ್ಯೆಯಲ್ಲಿ ಆಗಮಿಸಲಿದ್ದು, ಅವರಿಗೆ ಸಮರ್ಪಕ ವಸತಿ ಹಾಗೂ ಊಟೋಪಹಾರದ ವ್ಯವಸ್ಥೆಯನ್ನು ಕಲ್ಪಿಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷಲ್ ಭೋಯರ್, ಮಹಾನಗರ ಪಾಲಿಕೆಯ ಆಯುಕ್ತರಾದ ಅಶೋಕ ದುಡಗುಂಟಿ, ಅಪರ ಜಿಲ್ಲಾಧಿಕಾರಿ ವಿಜಕುಮಾರ್ ಹೊನಕೇರಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವೇಣುಗೋಪಾಲ್ ಮತ್ತಿತರರು ಉಪಸ್ಥಿತರಿದ್ದರು.

## ಇನ್ನು 20 ವರ್ಷ ಬಿಜೆಪಿ ವಿಪಕ್ಷದಲ್ಲೇ ಇರಲಿದೆ: ಲಕ್ಷ್ಮಣ ಸವದಿ



ವಿಜಯಪುರ: ಮನೆ ಒಂದು ಮೂರು ಬಾಗಿಲು ಆಗಿರುವ ಹಾಗೂ ರಾಜಕೀಯ ಭವಿಷ್ಯ ಇಲ್ಲದ ಬಿಜೆಪಿ ಇನ್ನು 20 ವರ್ಷಗಳ ಕಾಲ ವಿಪಕ್ಷದಲ್ಲೇ ಇರಲಿದೆ ಎಂದು ಶಾಸಕ ಲಕ್ಷ್ಮಣ ಸವದಿ ವಾಗ್ದಾಳಿ ನಡೆಸಿದ್ದಾರೆ.

ನಗರದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಬಿಜೆಪಿ ಪಕ್ಷದಲ್ಲಿ ತತ್ವ, ಸಿದ್ಧಾಂತ ಗಾಳಿಗೆ ತೋರಲಾಗಿದೆ ಎಂದು ಕಾಂಗ್ರೆಸ್ ಶಾಸಕನಾಗಿ ನಾನು ಹೇಳಿದ್ದಲ್ಲ, ಅದೇ ಪಕ್ಷದ ಹಿರಿಯ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರೇ ಹೇಳಿರುವುದು ಎಂದು ಕುಟುಕಿದರು. ರಾಮಕೃಷ್ಣ ಹೆಗಡೆ ಅವರ ಅಪ್ಪಟ ಬೆಂಬಲಿಗರಾಗಿದ್ದ ನಾವು, ಅವರು ಇರುವ ವರೆಗೆ ಜತೆಯಲ್ಲಿದ್ದೆವು.

ತಮ್ಮ ಅನಾರೋಗ್ಯದ ಪರಿಸ್ಥಿತಿ ಸಂದರ್ಭದಲ್ಲಿ ಲಾಲಕೃಷ್ಣ ಅಡ್ವಾಣಿ ಅವರು ನಮ್ಮನ್ನು ಸಂಪರ್ಕಿಸಿ ಬಿಜೆಪಿ ಸೇರ್ಪಡೆ ಮಾಡಿಸಿದ್ದರು. ಆಗ ಬಿಜೆಪಿ ಪಕ್ಷದಲ್ಲಿ ಅನಂತಕುಮಾರರ್ ಅವರಂಥಹ ನಾಯಕರಿದ್ದರು. ಈಗ ಬಿಜೆಪಿ ಪಕ್ಷದಲ್ಲಿ ಅಂಥ ನಾಯಕರಿಲ್ಲ.

ಕುಟುಂಬ ರಾಜಕೀಯ ಮತ್ತು ಆಂತರಿಕ ಸಂಘರ್ಷದಿಂದ ಬಿಜೆಪಿ ತತ್ತರಿಸಿದೆ ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ 135 ಶಾಸಕ ಬಲದೊಂದಿಗೆ ಸಿದ್ದರಾಮಯ್ಯ ಸರ್ಕಾರ ಸುಭದ್ರವಾಗಿದೆ. ಹೀಗಾಗಿ ಯಾವ ಪಕ್ಷವನ್ನು ಯಾರು ತೊರೆಯಲಿದ್ದಾರೆ ಎಂದು ಕಾದು ನೋಡಿ.ಕಾಂಗ್ರೆಸ್ ಸರ್ಕಾರದ ಜನಪರ ಯೋಜನೆಗಳಾದ ಗ್ಯಾರಂಟಿ ಯೋಜನೆಗಳಿಂದ ಜನರು ಸಂತೃಪ್ತರಾಗಿದ್ದಾರೆ. ಇದನ್ನು ಸಹಿಸಲಾಗದ ಬಿಜೆಪಿ ನಾಯಕರು ಟೀಕೆ ಮಾಡುತ್ತಿದ್ದಾರೆ ಎಂದರು.

## ಕಾಂಗ್ರೆಸ್ ನಾಯಕಿ ವೀಣಾ ಕಾಶಪ್ಪನವರ್ ಕಾರು ಅಪಘಾತ



ವಿಜಯಪುರ: ಹುನಗುಂದ ಶಾಸಕ ವಿಜಯಯಾನಂದ ಕಾಶಪ್ಪನವರ ಪತ್ನಿ, ಕಾಂಗ್ರೆಸ್ ನಾಯಕಿ ವೀಣಾ ಕಾಶಪ್ಪನವರ ಪ್ರಯಾಣಿಸುತ್ತಿದ್ದ ಕಾರು ಅಪಘಾತವಾಗಿರುವಂತಹ ಘಟನೆ ನಗರದ ಹೊರ ವಲಯದ ವಿಜಯಪುರ ಕಲಬುರಗಿ ರಾಷ್ಟ್ರೀಯ ಹೆದ್ದಾರಿ 52 ರಲ್ಲಿ ನಡೆದಿದೆ.

ಕೈ, ಎದೆ ಭಾಗಕ್ಕೆ ಪೆಟ್ಟಾಗಿದ್ದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಸದ್ಯ ಖಾಸಗಿ ಆಸ್ಪತ್ರೆಗೆ ದಾಖಲು ಮಾಡಿ ಚಿಕಿತ್ಸೆ ನೀಡಲಾಗಿದೆ. ವಿಜಯಪುರದಿಂದ ಸಿಂದಗಿ ಕಡೆಗೆ ಕಾರಿನಲ್ಲಿ ಹೊರಟಿದ್ದ ವೇಳೆ ಅವಘಡ ಸಂಭವಿಸಿದೆ. ವೀಣಾ ಕಾಶಪ್ಪನವರ ಕಾರಿಗೆ ಅಡ್ಡಲಾಗಿ ಬಂದ ಸ್ಕೂಟಿ ಡಿಕ್ಕಿ ತಪ್ಪಿಸಲು ಹೋಗಿ ರಸ್ತೆ ಬದಿ ನಿಂತಿದ್ದ ಮತ್ತೊಂದು ಕಾರಿಗೆ ಡಿಕ್ಕಿ ಹೊಡೆದಿದೆ. ವಿಜಯಪುರ ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿ ಪ್ರಕರಣ ದಾಖಲಾಗಿದೆ.


## ನಾನು ಸಿಎಂ ಅಭ್ಯರ್ಥಿಯಾಗಬೇಕಿತ್ತು ಆದರೆ ವಾತಾವರಣ ಕೂಡಿಬಂದಿಲ್ಲ: ಶ್ರೀರಾಮುಲು



ಹಾವೇರಿ:" ವಿಜಯೇಂದ್ರ ಒಂದೇ ಬಾರಿಗೆ ರಾಜ್ಯಾಧ್ಯಕ್ಷ ಸ್ಥಾನದಲ್ಲಿ ಬಂದು ಕುಳಿತಿಲ್ಲಾ ಹಂತ ಹಂತವಾಗಿ ಬಂದಿದ್ದಾರೆ. ನಾನು ಸಿಎಂ ಅಭ್ಯರ್ಥಿಯಾಗಬೇಕಿತ್ತು ಆದರೆ ವಾತಾವರಣ ಕೂಡಿಬಂದಿಲ್ಲ ಆದರೆ ವಿಶ್ವಾಸವಿದೆ ಎಂದು ಶ್ರೀರಾಮುಲು ಅಚ್ಚರಿ ಹೇಳಿಕೆಯನ್ನ ನೀಡಿದ್ದಾರೆ.

ಬಿಜೆಪಿಯಲ್ಲಿ ಕುಟುಂಬ ರಾಜಕಾರಣಕ್ಕೆ ಮಣಿಹಾಕಲಾಯಿತು ಎಂಬ ಮಾಧ್ಯಮಗಳ ಪ್ರಶ್ನೆಗೆ ಶ್ರೀರಾಮುಲು ಉತ್ತರಿಸಿ, ವಿಜಯೇಂದ್ರ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಮಗನಾಗಿ ಹುಟ್ಟಿದ್ದೆ ತಪ್ಪಾ ಎಂದು ರಾಮುಲು ಪ್ರಶ್ನಿಸಿದರು. ಕಾಂಗ್ರೆಸ್‌ನವರು ದೊಡ್ಡ ಸಂಖ್ಯೆಯಲ್ಲಿದ್ದಾರೆ 132 ಸ್ಥಾನ ಬಂದಿದ್ದು ನಾವು ಕೆಡವಲು ಹುಚ್ಚರಾ ಅವರ ಸರ್ಕಾರ ನಾವು ಬೀಳಿಸುವದಿಲ್ಲ. ಐದು ವರ್ಷ ಅವರ ಅಧಿಕಾರ ಪೂರೈಸಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ. ಸುಮ್ಮನೆ ಜನರ ಡೈವರ್ಟ ಮಾಡಲು ಆ ಶಾಸಕನ ಸಂಪರ್ಕಿಸಿದ್ದಾರೆ ಈ ಶಾಸಕನ ಸಂಪರ್ಕಿಸಿದ್ದಾರೆ ಎಂದು ಸುದ್ದಿ ಹಬ್ಬಿಸುತ್ತಾರೆ. ಅವರು ತಮ್ಮ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಈ ರೀತಿ ಡೈವರ್ಟ ಮಾಡಲು ಈ ರೀತಿ ಮಾಡುತ್ತಾರೆ ಎಂದು ರಾಮುಲು ಆರೋಪಿಸಿದರು. ಸರ್ಕಾರದಲ್ಲಿ ಅಭಿವೃದ್ಧಿಗೆ ಹಣ ನೀಡಲಾಗುತ್ತಿಲ್ಲಾ ಅವರಲ್ಲಿ ಮೂರು ಗುಂಪುಗಳಿವೆ ನಾವೇನು ಮಾಡುವದಿಲ್ಲಾ ಅವರೇ ಒಡೆದು ಹೋಗುತ್ತಾರೆ. ಜನ ನಮ್ಮನ್ನ ತಿರಸ್ಕಾರ ಮಾಡಿದ್ದಾರೆ ಅವರನ್ನ ಅಧಿಕಾರಕ್ಕೆ ತಂದಿದ್ದಾರೆ ಅವರು ಅದನ್ನ ಪೂರೈಸಲಿ. ಸರ್ಕಾರದಲ್ಲಿರುವ ಒಬ್ಬ ಶಾಸಕನನ್ನು ನಾವು ಸಂಪರ್ಕಿಸಿಲ್ಲಾ. ಅಷ್ಟು ದೊಡ್ಡ ಸಂಖ್ಯೆಯಲ್ಲಿದ್ದರು ಅವರಿಂದ ಏನು ಮಾಡಲಿಕ್ಕೆ ಆಗುತ್ತಿಲ್ಲಾ. ಸರ್ಕಾರದಲ್ಲಿ ನೌಕರಿ ಮಾಡಿದವರಿಗೆ ವೇತನ ನೀಡಲು ಹಣವಿಲ್ಲಾ ಬಹಳ ಹೀನಾಯವಾಗಿ ಸರ್ಕಾರ ನಡೆಯುತ್ತಿದೆ.

## ವಿಶ್ವಕಪ್ ಟ್ರೋಫಿ ಮೇಲೆ ಕಾಲಿಟ್ಟು ಕುಳಿತ ಮಿಚೆಲ್ ಮಾರ್ಷ




ನವದೆಹಲಿ: ವಿಶ್ವಕಪ್ 2023 ರಲ್ಲಿ ಆಸ್ಟ್ರೇಲಿಯಾ ಗೆಲುವಿನ ನಗೆ ಬೀರಿದ ಬೆನ್ನಲ್ಲೇ ಇದೀಗ ತಂಡದ ಆಟಗಾರ ಮಿಚೆಲ್ ಮಾರ್ಷ್ ವಿರುದ್ಧ ಭಾರೀ ಆಕ್ರೋಶ ವ್ಯಕ್ತಪಡಿಸಿ, ಛೀಮಾರಿ ಹಾಕಿದ್ದಾರೆ.

ಮಿಚೆಲ್ ಟ್ರೋಫಿ ಮೇಲೆ ಕಾಲಿಟ್ಟು ಕುಳಿತ ಫೋಟೋವೊಂದು ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದೆ. ಟ್ರೋಫಿಗೆ ಅಗೌರವ ಸೂಚಿಸಿರುವ ಮಿಚೆಲ್ ನಡೆಯನ್ನು ಜನ ಖಂಡಿಸಿದ್ದು, ಹಿಗ್ಗಾಮುಗ್ಗ ತರಾಟೆಗೆ ತೆಗೆದುಕೊಳ್ಳುತ್ತಿದ್ದಾರೆ.

ಫೋಟೋದಲ್ಲಿ ಮಿಚೆಲ್ ಅವರು ತಮ್ಮ ಎರಡೂ ಕಾಲುಗಳನ್ನು ವಿಶ್ವಕಪ್ ಟ್ರೋಫಿಯ ಮೇಲೆ ಇಟ್ಟು ಗೆದ್ದು ಬೀಗಿದ್ದೇವೆ ಎಂಬ ಸಿಂಬಲ್ ತೋರಿಸಿದ್ದಾರೆ. ಈ ಫೋಟೋವನ್ನು ಆರಂಭದಲ್ಲಿ ಆಸ್ಟ್ರೇಲಿಯಾ ನಾಯಕ ಪ್ಯಾಟ್ ಕಮ್ಮಿನ್ಸ್ ಅವರು ತಮ್ಮ ಇನ್ಸ್ಟಾಗ್ರಾಂ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಕಮ್ಮಿನ್ಸ್ ಫೋಟೋ ಶೇರ್ ಮಾಡುತ್ತಿದ್ದಂತೆಯೇ ಇದು ಭಾರೀ ವೈರಲ್ ಆಯಿತು. ಮಿಚೆಲ್ ವಿಶ್ವಕಪ್ಗೆ ಅಗೌರವ ತೋರಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿ ಟ್ರೋಲ್ ಮಾಡಲಾಗುತ್ತಿದೆ.

## ಜಾಮೀನು ಪಡೆದು ನಾಲ್ಕೇ ದಿನದಲ್ಲಿ ಮತ್ತೆ ಮುರುಘಾ ಶ್ರೀ ಅರೆಸ್ಟ್



ದಾವಣಗೆರೆ: ಪೋಕ್ಸೋ ಪ್ರಕರಣದಲ್ಲಿ ಚಿತ್ರದುರ್ಗ ಮುರುಘಾ ಮಠದ ಮುರುಘಾಶ್ರೀಗಳು ಮತ್ತೆ ಬಂಧನವಾಗಿದ್ದಾರೆ.

2ನೇ ಕೇಸಲ್ಲಿ ಶ್ರೀಗಳ ಅರೆಸ್ಟ್ ಆಗಿದೆ. ಇಂದು ಮಧ್ಯಾಹ್ನ ಕೋರ್ಟ್ ಶ್ರೀಗಳ ವಿರುದ್ಧ ಅರೆಸ್ಟ್ ವಾರೆಂಟ್ ಜಾರಿ ಮಾಡಿತ್ತು. ಈ ಬೆನ್ನಲ್ಲೇ ಪೊಲೀಸರು ದಾವಣಗೆರೆಯ ವಿರಕ್ತ ಮಠಕ್ಕೆ ಆಗಮಿಸಿ ಶ್ರೀಗಳನ್ನು ಬಂಧಿಸಿದ್ದಾರೆ. ಸಂಜೆ ಶ್ರೀಗಳನ್ನು ಕೋರ್ಟ್ ಮುಂದೆ ಹಾಜರುಪಡಿಸುವ ಸಾಧ್ಯತೆ ಇದೆ.

ಇತ್ತೀಚೆಗೆ ಪ್ರಕರಣವೊಂದಕ್ಕೆ ಹೈಕೋರ್ಟ್ ಜಾಮೀನು ನೀಡಿತ್ತು. ಈ ಹಿನ್ನೆಲೆಯಲ್ಲಿ ಶ್ರೀಗಳು ಜೈಲಿನಿಂದ ಹೊರಬಂದಿದ್ದರು. ಆದರೆ ಇದಕ್ಕೆ ಸರ್ಕಾರಿ ವಕೀಲರು ಆಕ್ಷೇಪ ವ್ಯಕ್ತಪಡಿಸಿದ್ದರು. 2ನೇ ಪೋಕ್ಸೋ ಕೇಸಲ್ಲಿ ಬಂಧನ ವಾರೆಂಟ್ ಕೋರಿ ಸರ್ಕಾರಿ ವಕೀಲ ಜಗದೀಶ್ ಕೋರ್ಟ್‌ಗೆ ಮನವಿ ಮಾಡಿದ್ದರು. ಇದಕ್ಕೆ ಮುರುಘಾ ಶ್ರೀ ಪರ ವಕೀಲರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. 1ನೇ ಪೋಕೆಚ್ಸೋ ಕೇಸಲ್ಲಿ ಹೈಕೋರ್ಟ್ ನಿಂದ ಷರತ್ತುಬದ್ಧ ಜಾಮೀನು ಹಿನ್ನೆಲೆಯಲ್ಲಿ ಮುರುಘಾಶ್ರೀ ಚಿತ್ರದುರ್ಗ ಜಿಲ್ಲೆ ಪ್ರವೇಶಿಸುವಂತಿಲ್ಲ. ಮುರುಘಾಶ್ರೀ ಮತ್ತೆ ಬಂಧನದ ಅಗತ್ಯವಿಲ್ಲ. ಬಂಧನ ವಾರೆಂಟ್ ಹೈಕೋರ್ಟ್ ಆದೇಶ ಉಲ್ಲಂಘನೆ ಆಗುತ್ತದೆಂದು ಮುರುಘಾಶ್ರೀ ಪರ ವಕೀಲ ಉಮೇಶ್ ವಾದಿಸಿದ್ದರು. ಎರಡೂ ಕಡೆಯ ವಾದ ಆಲಿಸಿದ್ದ ಕೋರ್ಟ್ ಅರೆಸ್ಟ್ ವಾರೆಂಟ್ ಜಾರಿ ಮಾಡುವಂತೆ ಕೋರ್ಟ್ ಚಿತ್ರದುರ್ಗ ಗ್ರಾಮಾಂತರ ಠಾಣೆ ಪೊಲೀಸರಿಗೆ ಖಡಕ್ ಸೂಚನೆ ನೀಡಿದ್ದು, ಇದೀಗ ಶ್ರೀಗಳನ್ನು ಬಂಧಿಸಲಾಗಿದೆ.

## ಕೆಲಸಕ್ಕಿದ್ದ ಅಂಗಡಿಯಲ್ಲಿ 1 ಕೋಟಿ ರೂ. ಮೌಲ್ಯದ ಚಿನ್ನಾಭರಣ ಕಳವು: ಇಬ್ಬರ ಬಂಧನ



ಬೆಂಗಳೂರು: ಕೆಲಸ ಕೊಟ್ಟಿದ್ದ ಚಿನ್ನಾಭರಣ ವ್ಯಾಪಾರಿಯ ಕಣ್ತಪ್ಪಿಸಿ ಅಂಗಡಿ ಕೀ ಕಳ್ಳತನ ಮಾಡಿ ಇಬ್ಬರು ಸ್ನೇಹಿತರೊಂದಿಗೆ ಸೇರಿಕೊಂಡು ಪುರಾತನ ಚಿನ್ನಾಭರಣಗಳನ್ನು ಕಳ್ಳತನ ಮಾಡಿದ್ದ ರಾಜಸ್ಥಾನದ ಪ್ರಮುಖ ಆರೋಪಿ ಸೇರಿದಂತೆ ಇಬ್ಬರನ್ನು ಹಲಸೂರು ಗೇಟ್ ಠಾಣೆ ಪೊಲೀಸರು ಬಂಧಿಸಿ 1 ಕೋಟಿ 2 ಲಕ್ಷ ಮೌಲ್ಯದ ಚಿನ್ನಾಭರಣ, 5.50 ಲಕ್ಷ ನಗದು ವಶಪಡಿಸಿ ಕೊಂಡಿದ್ದಾರೆ.

ರಾಜಸ್ಥಾನ ಮೂಲದ ಕೇತರಾಮ್, ಈತನ ಸ್ನೇಹಿತ ರಾಕೇಶ್ ಬಂಧಿತ ಆರೋಪಿಗಳು. ಮತ್ತೊಬ್ಬ ತಲೆಮರೆಸಿಕೊಂಡಿದ್ದು, ಈತನ ಪತ್ತೆಕಾರ್ಯ ಮುಂದುವರೆದಿದೆ.

ನಗರತ್ಪೇಟೆಯ ಕಾಂಚನಾ ಜ್ಯುವೆಲರ್ಸ್ ಅಂಗಡಿ ಮಾಲೀಕರಾದ ಅರವಿಂದ್ ಕುನೂರ್ ತಾಡೆ ಅವರ ಬಳಿ ಆರೋಪಿ ಕೇತರಾಮ್ ಎರಡು ತಿಂಗಳ ಹಿಂದೆ ಕೆಲಸಕ್ಕೆ ಸೇರಿಕೊಂಡಿದ್ದನು.

ಆ ಸಂದರ್ಭದಲ್ಲಿ ಮಾಲೀಕನ ನಂಬಿಕೆ–ವಿಶ್ವಾಸ ಗಳಿಸಿ ಅವರ ವ್ಯವಹಾರಗಳನ್ನೆಲ್ಲ ತಿಳಿದುಕೊಂಡಿದ್ದಾನೆ.

ಹೇಗಾದರೂ ಮಾಡಿ ಚಿನ್ನಾಭರಣಗಳನ್ನು ಕಳ್ಳತನ ಮಾಡಿಕೊಂಡು ಊರಿಗೆ ಹೋಗಿ ಐಷಾರಾಮಿ ಜೀವನ ನಡೆಸಬಹುದು ಎಂದು ಯೋಚಿಸಿದ್ದಾನೆ.

ಈ ನಡುವೆ ದಸರಾ ಹಬ್ಬದ ನಿಮಿತ್ತ ಅರವಿಂದ್ಕುಮಾರ್ ಅವರು ಮುಂಬೈಗೆ ತೆರಳುವ ಸಂದರ್ಭದಲ್ಲಿ ಅವರ ಬ್ಯಾಗ್ನಲ್ಲಿದ್ದ ಅಂಗಡಿಯ ಬೀಗವನ್ನು ಆರೋಪಿ ಕೇತರಾಮ್ ಕಳವು ಮಾಡಿದ್ದಾನೆ.

## ಬಸವಣ್ಣನವರ ಸಮಾನತೆಯ ಕನಸು ನನಸು ಮಾಡೋಣ



ಬೆಳಗಾವಿ: ವಿಶ್ವಗುರು ಬಸವಣ್ಣ 12ನೇ ಶತಮಾನದಲ್ಲಿ ಕಂಡ ಸಮಾನತೆಯ ಕನಸನ್ನು ನನಸು ಮಾಡಲು ನಾವೆಲ್ಲ ಒಟ್ಟಾಗಿ ಕೆಲಸ ಮಾಡಬೇಕಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

ಇಲ್ಲಿಯ ಬಾಳೇಕುಂದ್ರಿ ಕೆ ಎಚ್ ಗ್ರಾಮದಲ್ಲಿ ಬಸವ ಮೂರ್ತಿಯ ಪ್ರತಿಷ್ಠಾಪನೆ ಹಾಗೂ ವಿಶ್ವಗುರು ಬಸವ ಮಂಟಪದ ಉದ್ಘಾಟನೆಯಯನ್ನು ಭಾನುವಾರ ನೆರವೇರಿಸಿ ಅವರು ನೆರವೇರಿಸಿದರು.

ಜಾತೀಯತೆಯನ್ನು ಹೋಗಲಾಡಿಸಿ, ಮಹಿಳಾ ಸಮಾನತೆ ಸಾಧಿಸುವ ಮೂಲಕ ಸಮಾಜದಲ್ಲಿ ಮೇಲು ಕೀಳೆಂಬ ಭಾವವನ್ನು ಹೋಗಲಾಡಿಸಬೇಕೆಂದು ಬಸವಣ್ಣನವರು ಕರೆ ನೀಡಿದ್ದರು. ಆ ದಿಸೆಯಲ್ಲಿ ಸಾಕಷ್ಟು ಕೆಲಸಗಳನ್ನೂ ಮಾಡಿದ್ದರು. ಆದರೆ ಇಂದಿಗೂ ಅವರ ಕನಸನ್ನೂ ನನಸಾಗಿಸಲು ನಮ್ಮಿಂದ ಸಾಧ್ಯವಾಗಿಲ್ಲ.

ಈಗ ಲೋಕಸಭೆಯಲ್ಲಿ ಮಹಿಳೆಯರಿಗೆ ರಾಜಕೀಯ ಮೀಸಲಾತಿ ನೀಡುವ ಮಸೂದೆ ಅಂಗೀಕಾರವಾಗಿದೆ.

ಅದು ಬೇಗ ಜಾರಿಯಾಗಿ ಚುನಾಯಿತ ಪ್ರತಿನಿಧಿಗಳಲ್ಲಿ ಮಹಿಳೆಯರ ಸಂಖ್ಯೆ ಹೆಚ್ಚಾಗಬೇಕು ಎಂದು ಹೆಬ್ಬಾಳಕರ್ ಹೇಳಿದರು.

ಕಾರ್ಯಕ್ರಮದಲ್ಲಿ ಕಿತ್ತೂರಿನ ರಾಜಗುರುಕಲ್ಮಠ ಮಹಾಸಂಸ್ಥಾನದ ಶ್ರೀ ಮಡಿವಾಳೇಶ್ವರ ಮಹಾಸ್ವಾಮಿಗಳು, ಕುಂಬಳಗೋಡಿನ ಶ್ರೀ ಚನ್ನಬಸವೇಶ್ವರ ಜ್ಞಾನ ಪೀಠದ ಡಾ. ಚನ್ನಬಸವಾನಂದ ಸ್ವಾಮೀಜಿ, ಬೆಳಗಾವಿಯ ಶ್ರೀ ಪ್ರಭುಲಿಂಗ ಸ್ವಾಮೀಜಿ, ಮಲ್ಲಾಪುರ ಗಾಳೇಶ್ವರ ಮಠದ ಶ್ರೀ ಚಿದಾನಂದ ಸ್ವಾಮೀಜಿ, ತಾರೀಹಾಳ ಶ್ರೀ ಅಡವೀಶ್ವರ ಮಹಾಸ್ವಾಮೀಜಿ, ನಮಸಯ್ಯಾ ಹಿರೇಮಠ, ಶಿವಾನಂದ ಜಾಮದಾರ್, ವಿವಿಧ ಸಮಾಜದ ಮುಖಂಡರು, ಗ್ರಾಮದ ಹಿರಿಯರು ಉಪಸ್ಥಿತರಿದ್ದರು.

## ಭಾರತಕ್ಕೆ ಸೋಲು; ಕುಸಿದು ಬಿದ್ದು ಅಭಿಮಾನಿ ಸಾವು



ಹೈದರಾಬಾದ್: ಕೋಟ್ಯಂತರ ಕ್ರಿಕೆಟ್ ಅಭಿಮಾನಿಗಳು ಭಾರತದ ಸೋಲಿನಿಂದ ಹತಾಶರಾಗಿದ್ದು, ಅಭಿಮಾನಿಗಳ ಕನಸು ನುಚ್ಚುನೂರಾಗಿದೆ. ಆದರೆ ಸೋಲಿನ ಹತಾಶೆಯಲ್ಲಿ ಅಭಿಮಾನಿಯೊಬ್ಬನ ಪ್ರಾಣ ಹೋಗಿರುವ ಘಟನೆ ತಿರುಪತಿಯಲ್ಲಿ ನಡೆದಿದೆ. ಬೆಂಗಳೂರಿನಲ್ಲಿ ಸಾಫ್ಟ್‌ವೇರ್ ಇಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದ ಜ್ಯೋತಿಶ್ ಕುಮಾರ್ ಯಾದವ್ (35) ದೀಪಾವಳಿ ರಜೆಯ ಪ್ರಯುಕ್ತ ತನ್ನ ಊರಾದ ತಿರುಪತಿಗೆ ಬಂದಿದ್ದರು. ಕ್ರಿಕೆಟ್ ಅಭಿಮಾನಿಯಾಗಿದ್ದ ಜ್ಯೋತಿಶ್ ಭಾನುವಾರ(ನ.19 ರಂದು) ಭಾರತ– ಆಸೀಸ್‌ನ ಡುವಿನ ವಿಶ್ವಕಪ್ ಫೈನಲ್ ಪಂದ್ಯವನು ವೀಕ್ಷಣೆ ಮಾಡುತ್ತಿದ್ದರು. ಇತ್ತ ಗೆಲುವಿನ ನಿರೀಕ್ಷೆಯಲ್ಲಿದ್ದ ಪಂದ್ಯದಲ್ಲಿ ಭಾರತ ಸೋಲಿನ ಹಂತಕ್ಕೆ ಬಂದಾಗ, ಟಿವಿ ನೋಡುತ್ತಿದ್ದ ಜ್ಯೋತಿಶ್ ಇದ್ದಕ್ಕಿದ್ದಂತೆ ಕುಸಿದು ಬಿದ್ದಿದ್ದಾರೆ. ಕೂಡಲೇ ಅವರನ್ನು ಹತ್ತಿರದ ತಿರುಪತಿಯ ಶ್ರೀ ವೆಂಕಟೇಶ್ವರ ರಾಮನಾರಾಯಣ್ ರುಯಿಯಾ ಸರ್ಕಾರಿ ಜನರಲ್ ಆಸ್ಪತ್ರೆಗೆ ಕರೆದುಕೊಂಡು ಹೋಗಲಾಗಿದೆ. ಆದರೆ ಅವರು ಹೃದಯಾಘಾತವಾಗಿ ಆದಾಗಲೇ ಮೃತಪಟ್ಟಿರುವುದಾಗಿ ವೈದ್ಯರು ಹೇಳಿರುವುದಾಗಿ ವರದಿ ತಿಳಿಸಿದೆ.

## ಶ್ರೀಮಠದ ಅಭಿವೃದ್ಧಿಗೆ ಲಿಂ. ಸಿದ್ಧಲಿಂಗ ಮಹಾಸ್ವಾಮಿಗಳ ಕನಸಿನಂತೆ ಗುರುಬಸವಲಿಂಗ ಮಹಾಸ್ವಾಮಿಗಳು ಶ್ರಮಿಸಲಿ : ನಿಡಸೋಶಿ ಶ್ರೀಗಳು

ಅರಭಾವಿ ದುರದುಂಡೀಶ್ವರ ಪುಣ್ಯಾರಣ್ಯ ಮಠದ ಪೀಠಾಧಿಪತಿಯಾಗಿ ಗುರುಬಸವಲಿಂಗ ಮಹಾಸ್ವಾಮಿಗಳ ಪೀಠಾರೋಹಣ

ಮೂಡಲಗಿ: ದುರದುಂಡೀಶ್ವರರ ಆಶೀರ್ವಾದ ಫಲವಾಗಿ ಅರಭಾವಿ ದುರದುಂಡೀಶ್ವರ ಪುಣ್ಯಾರಣ್ಯ ಮಠವು ಧಾರ್ಮಿಕವಾಗಿ, ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಬೆಳೆದಿದ್ದು, ಹಿಂದಿನ ಪೀಠಾಧಿಪತಿಯಾಗಿದ್ದ ಲಿಂ. ಸಿದ್ಧಲಿಂಗ ಮಹಾಸ್ವಾಮಿಗಳ ಕನಸಿನಂತೆ ಶ್ರೀಮಠದ ಅಭಿವೃದ್ಧಿಗಾಗಿ ಮಠದ ನೂತನ ಪೀಠಾಧಿಪತಿಯಾಗಿ ಪೀಠಾರೋಹಣಗೈದಿರುವ ಗುರುಬಸವಲಿಂಗ ಮಹಾಸ್ವಾಮಿಗಳು ಶ್ರಮಿಸಲಿ. ಶ್ರೀಮಠವು ಹೊಸ ಆಯಾಮದತ್ತ ಮುನ್ನಡೆಯಲಿ ಎಂದು ನಿಡಸೋಶಿ ಸಿದ್ಧಸಂಸ್ಥಾನ ಮಠದ ಜಗದ್ಗುರು ಪಂಚಮ ಶಿವಲಿಂಗೇಶ್ವರ ಮಹಾಸ್ವಾಮಿಗಳು ಆಶಿಸಿದರು.

ಸೋಮವಾರದಂದು ಜಗದ್ಗುರು ದುರದುಂಡೀಶ್ವರ ಸಿದ್ಧಸಂಸ್ಥಾನ ಅರಭಾವಿ ಮಠದಲ್ಲಿ ಜರುಗಿದ ಗುರುಬಸವಲಿಂಗ ಮಹಾಸ್ವಾಮಿಗಳವರ ಪೀಠಾರೋಹಣ ಸಮಾರಂಭದ ದಿವ್ಯ ಸಾನಿಧ್ಯವಹಿಸಿ ಆಶೀರ್ವಚನ ನೀಡಿದ ಅವರು, ದುರದುಂಡೀಶ್ವರ ಮಠ ಮತ್ತು ನಿಡಸೋಶಿ ಮಠಗಳಿಗೆ ತಮ್ಮದೆಯಾದ ಹಲವು ಇತಿಹಾಸಗಳಿವೆ ಎಂದು ಹೇಳಿದರು.



ಲಿಂ. ಸಿದ್ಧಲಿಂಗ ಮಹಾಸ್ವಾಮಿಗಳು ಶ್ರೀಮಠದ ಪ್ರಗತಿಗಾಗಿ ಕಳೆದ ನಾಲ್ಕೈದು ದಶಕದಿಂದ ಅವಿರತವಾಗಿ ಶ್ರಮಿಸಿದ್ದರು. ಸರಳ, ಶಿಸ್ತಿನ ವ್ಯಕ್ತಿಯಾಗಿದ್ದ ಅವರು ಕಳೆದ ತಿಂಗಳಲ್ಲಿ ಲಿಂಗೈಕ್ಯರಾದರು. ಅವರು ಬಿಟ್ಟು ಹೋದ ಆಚಾರ, ವಿಚಾರ ಹಾಗೂ ಈಗಿರುವ ಹೊಸ ಪೀಠಾಧಿಪತಿಗಳು ಅಳವಡಿಸಿಕೊಂಡು ಶ್ರೀಮಠವನ್ನು ಯಶಸ್ವಿಯಾಗಿ ಮುನ್ನಡೆಸಿಕೊಂಡು ಹೋಗಬೇಕು. ಸಿದ್ಧಲಿಂಗ ಮಹಾಸ್ವಾಮಿಗಳಿಗೆ ನೀಡಿರುವ ತನು, ಮನ, ಧನ ಸೇವೆಯನ್ನು ಗುರುಬಸವಲಿಂಗ ಮಹಾಸ್ವಾಮಿಗಳಿಗೆ ಸಕಲ ಸದ್ಭಕ್ತರು ನೀಡುವ ಮೂಲಕ ಶ್ರೀಮಠದ ಭವ್ಯ ಪರಂಪರೆಗೆ ಮುಂದಾಗಬೇಕು. ಮಠಗಳ ಬೆಳವಣಿಗೆಗಳಲ್ಲಿ ಭಕ್ತರ ಜೊತೆಗೆ ರಾಜಕಾರಣಿಗಳ ಪಾತ್ರವೂ ಕೂಡ ದೊಡ್ಡದಿದೆ. ಮಠಗಳನ್ನು ಉಳಿಸಿ ಬೆಳೆಸುವ ಶಕ್ತಿ ಭಕ್ತರಿಗಿದೆ ಎಂದು ಹೇಳಿದರು.

ಲಿಂ. ಸಿದ್ಧಲಿಂಗ ಮಹಾಸ್ವಾಮಿಗಳ ಸದಿಚ್ಛೆಯಂತೆ ಈ ಭಾಗದ ಜನಪ್ರೀಯ ಶಾಸಕರಾಗಿರುವ ಬಾಲಚಂದ್ರ ಜಾರಕಿಹೊಳಿ ಅವರು ತಮ್ಮ ತಾಯಿ–ತಂದೆಯವರ ಸ್ಮರಣಾರ್ಥವಾಗಿ ಶ್ರೀಮಠದಲ್ಲಿ ಸುಸಜ್ಜಿತವಾದ ಸಭಾ ಭವನವನ್ನು ನಿರ್ಮಿಸಿ ಕೊಟ್ಟಿದ್ದಾರೆ. ಬಾಲಚಂದ್ರ ಜಾರಕಿಹೊಳಿ ಅವರು ಶ್ರೀಮಠದ ಅಭಿವೃದ್ಧಿಯ ಜೊತೆಗೆ ಇಡೀ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಬಾಲಚಂದ್ರ ಅವರಿಗೆ ದುರದುಂಡೀಶ್ವರನು ಸದಾ ಒಳ್ಳೆಯದನ್ನು ಮಾಡಲಿ ಎಂದು ಅವರು ಆಶಿಸಿದರು. ಗುರುಬಸವಲಿಂಗ ಮಹಾಸ್ವಾಮಿಗಳವರ ಪೀಠಾರೋಹಣಕ್ಕಿಂತ ಮುಂಚೆ ಶ್ರೀಮಠದಲ್ಲಿ ಹನ್ನೊಂದು ದಿನಗಳ ಕಾಲ ಶೂನ್ಯ ಸಂಪಾದನೆ ಪ್ರವಚನವನ್ನು ಹಮ್ಮಿಕೊಂಡು ಭಕ್ತರಿಗೆ ಧಾರ್ಮಿಕ ವಾತಾವರಣವನ್ನು ನಿರ್ಮಿಸಿದ್ದಾರೆ. ಶೂನ್ಯದಿಂದ ಕನ್ನಡ ಅಕ್ಷರದಲ್ಲಿ ಒಂಬತ್ತೂ ಅಕ್ಷರಗಳು ಹುಟ್ಟಿಕೊಳ್ಳುತ್ತಿವೆ. ಶೂನ್ಯದಿಂದ ಅಧಿಕವಾಗಿ ಸಂಪಾದನೆ ಮಾಡುವುದೇ ಶೂನ್ಯ ಸಂಪಾದನೆ ಅನ್ನುತ್ತಾರೆ. ಮಠದ ಭಕ್ತರ ಆಶಯದಂತೆ ಹೊಸ ಪೀಠಾಧಿಪತಿಗಳು ಸೇವೆ ಸಲ್ಲಿಸಲಿ. ಆ ದುರದುಂಡೀಶ್ವರನ ಆಶೀರ್ವಾದ ಗುರುಬಸವಲಿಂಗ ಮಹಾಸ್ವಾಮಿಗಳಿಗೆ ಸದಾ ಇರುತ್ತದೆ ಎಂದು ಆಶಿಸಿದರು.

# ಅರಭಾವಿ ಶ್ರೀಮಠದ ಅಭಿವೃದ್ಧಿಗೆ ಎಲ್ಲ ರೀತಿಯ ಸಹಕಾರ : ಶಾಸಕ ಬಾಲಚಂದ್ರ ಜಾರಕಿಹೊಳಿ



ಅರಭಾವಿ: ಲಿಂ. ಸಿದ್ಧಲಿಂಗ ಮಹಾಸ್ವಾಮಿಗಳು ಲಿಂಗೈಕ್ಯರಾದ ನಂತರ ಈ ಭಾಗದ ಸಕಲ ಭಕ್ತರಿಗೆ ಅಪಾರ ದುಃಖವಾಗಿದೆ. ಅತೀ ಸರಳತೆಯಿಂದ ಜೀವನ ಸಾಗಿಸಿರುವ ಹಿಂದಿನ ಶ್ರೀಗಳ ಸೇವೆಯನ್ನು ಎಷ್ಟು ಹೊಗಳಿದರು ಸಾಲದು. ಅವರು ಎಂದಿಗೂ ಆಡಂಬರದ ಜೀವನ ಸಾಗಿಸಲಿಲ್ಲ. ಎಂದಿಗೂ ಲಿಂಗಪೂಜೆಯನ್ನು ತಪ್ಪಿಸಲಿಲ್ಲ. ಅದಕ್ಕೆಂದೇ ಅವರು ಈ ಭಾಗದ ನಡೆದಾಡುವ ದೇವರು ಎಂದು ನಾವೆಲ್ಲರೂ ವ್ಯಾಖ್ಯಾನಿಸುತ್ತೇವೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಹೇಳಿದರು.

ಈ ದಿನದ ಶುಭ ಘಳಿಗೆಯನ್ನು ನೋಡಿದಾಗ ಲಿಂ. ಸಿದ್ಧಲಿಂಗ ಮಹಾಸ್ವಾಮಿಗಳು ನಮ್ಮ ಮಧ್ಯೆಯೇ ಇದ್ದಾರೆ. ಸ್ವರ್ಗದಿಂದ ನಮಗೆ ಆಶೀರ್ವಾದ ಮಾಡುತ್ತಿದ್ದಾರೆ ಎಂದು ಭಾವವಾಗುತ್ತದೆ ಎಂದು ಸ್ಮರಿಸಿಕೊಂಡರು.

ಶ್ರೀಮಠದ ಅಭಿವೃದ್ಧಿಗೆ ನಾವು ಸದಾ ಬದ್ಧರಿದ್ದೇವೆ. ಗುರುಬಸವಲಿಂಗ ಮಹಾಸ್ವಾಮಿಗಳಿಗೆ ಶ್ರೀಮಠವನ್ನು ಮುಂದುವರೆಸಿಕೊಂಡು ಹೋಗಲು ಎಲ್ಲ ರೀತಿಯ ಸಹಾಯ ಸಹಕಾರ ನೀಡುತ್ತೇವೆ. ಹಿಂದಿನ ಮಹಾಸ್ವಾಮಿಗಳಂತೆ ಶ್ರೀಮಠದ ಪ್ರಗತಿಗೆ ಶ್ರಮಿಸಿ ಅರಭಾವಿ ಮಠವನ್ನು ಅಭಿವೃದ್ಧಿಗೊಳಿಸಲಿ. ಲಿಂ. ಸಿದ್ಧಲಿಂಗ ಮಹಾಸ್ವಾಮಿಗಳ ಕನಸುಗಳನ್ನು ಇಡೇರಿಸುವ ಶಕ್ತಿಯನ್ನು ದೇವರು ದಯಪಾಲಿಸಲಿ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಆಶಿಸಿದರು.

ಅರಭಾವಿ ಮಠದ ನೂತನ ಪೂಜ್ಯರಾಗಿ ಪೀಠಾರೋಹಣ ಮಾಡಿದ ಗುರುಬಸವಲಿಂಗ ಮಹಾಸ್ವಾಮಿಗಳು ತಮ್ಮ ಭಾಷಣದುದ್ದಕ್ಕೂ ಲಿಂ. ಸಿದ್ಧಲಿಂಗ ಮಹಾಸ್ವಾಮಿಗಳನ್ನು ನೆನೆದು ಭಾವುಕರಾದರು. ಹಲವು ಸಂದರ್ಭಗಳಲ್ಲಿ ಕಣ್ಣೀರು ಹಾಕುತ್ತ ತಮ್ಮ ಭಾಷಣವನ್ನು ಮುಂದುವರೆಸಿದರು. ಇದೊಂದು ವಿಶೇಷ ಘಳಿಗೆ. ನನ್ನ ಜೀವನದಲ್ಲಿ ಎಂದೂ ಮರೆಯದ ಸ್ಮರಣೀಯ ಘಟನೆ. ಈ ಘಳಿಗೆಯನ್ನು ನಾನೆಂದಿಗೂ ಊಹಿಸಿರಲಿಲ್ಲ. ಶ್ರೀಮಠದ ಪೀಠಾರೋಹಣ ಮಾಡುತ್ತೇನೆ ಎಂದು ಕನಸು ಮನಸಿನಲ್ಲಿಯೂ ಊಹಿಸಿರಲಿಲ್ಲ ಎಂದು ಪೂಜ್ಯರನ್ನು ನೆನೆದು ಭಾವುಕರಾದರು.

ದುರದುಂಡೀಶ್ವರನ ಪಾವನ ಸಾನಿಧ್ಯದಲ್ಲಿ ಅರಭಾವಿ ಶ್ರೀಮಠವು ಹೆಮ್ಮರವಾಗಿ ಬೆಳೆದಿದೆ. ಈ ಮಠವು ಶೂನ್ಯ ಸಿಂಹಾಸನ ಮಠವಾಗಿದ್ದು, ಭಕ್ತರ ಪಾಲಿನ ಕಾಮಧೇನು, ಕಲ್ಪವೃಕ್ಷವಾಗಿದೆ. ತಮ್ಮ ಹಾಗೂ ಸಿದ್ಧಲಿಂಗ ಮಹಾಸ್ವಾಮಿಗಳ ಜೊತೆಗಿನ ಸಂಬಂಧಗಳನ್ನು ಮೆಲುಕು ಹಾಕಿದ ಅವರು ಸಿದ್ಧಲಿಂಗ ಮಹಾಸ್ವಾಮಿಗಳು ತಮ್ಮ ಪಾಲಿನ ಗುರುಗಳು ಅಷ್ಟೇ ಅಲ್ಲ. ಅವರೊಬ್ಬ ದೇವರು ಎಂದು ಹೇಳಿದರು.

ಈ ಭಾಗದ ಸದ್ಭಕ್ತರ ಭಾವನೆಗಳನ್ನು ಅರ್ಥ ಮಾಡಿಕೊಂಡು ಹಿಂದಿನ ಜಗದ್ಗುರುಗಳ ಆಶಯದಂತೆ ಪೀಠಾಧಿಪತಿಯಾಗಿ ಸೇವೆ ಸಲ್ಲಿಸುವ ಸೌಭಾಗ್ಯ ಒದಗಿಬಂದಿದೆ. ಇದನ್ನು ಯಶಸ್ವಿಯಾಗಿ ನಿಭಾಯಿಸಿಕೊಂಡು ಮಠದ ಉಳಿವಿಗಾಗಿ ಶ್ರಮಿಸುತ್ತೇನೆ. ದುರದುಂಡೀಶ್ವರನು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನಡೆಯುತ್ತೇನೆ. ನಾನೂ ಕೂಡ ಅರಭಾವಿ ಸಮೀಪದ ದುರದುಂಡಿ ಗ್ರಾಮದವನಾಗಿದ್ದರಿಂದ ಎಲ್ಲರ ಪರಿಚಯ ನನಗಿದೆ. ಹೀಗಾಗಿ ಶ್ರೀಮಠದ ಅಭಿವೃದ್ಧಿಯೊಂದೇ ನನ್ನ ಗುರಿಯಾಗಿದೆ. ನಿಡಸೋಶಿ ಜಗದ್ಗುರು ಪಂಚಮ ಶಿವಲಿಂಗೇಶ್ವರ ಹಾಗೂ ಗದಗ–ಢಂಬಳ ಪೀಠದ ಜಗದ್ಗುರು ಡಾ.ಸಿದ್ಧರಾಮ ಮಹಾಸ್ವಾಮಿಗಳ ಮಾರ್ಗದರ್ಶನದಲ್ಲಿ ಭಕ್ತರ ಸೇವೆಯನ್ನು ಮಾಡುವುದಾಗಿ ತಿಳಿಸಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಹಂದಿಗುಂದ–ಆಡಿ ಸಿದ್ಧೇಶ್ವರ ಮಠದ ಶಿವಾನಂದ ಮಹಾಸ್ವಾಮಿಗಳು ಮಾತನಾಡಿ, ನೋಡೋಕೆ ಸಿಂಹಾಸನ, ವೈಭವ ಆದರೆ ಇದರ ಹಿಂದೆ ಸಾಕಷ್ಟು ಸಮಸ್ಯೆಗಳು ಎದುರಾಗುತ್ತಿವೆ. ಈ ಪೀಠದ ಹಾಸಿಗೆ ಹೂವಿನ ಹಾಸಿಗೆಯಲ್ಲ. ಇದೊಂದು ಮುಳ್ಳಿನ ಹಾಸಿಗೆ. ಶ್ರೀಮಠದ ಸಿಂಹಾಸನ ಅಲಂಕರಿಸಿರುವ ಗುರುಬಸವಲಿಂಗ ಮಹಾಸ್ವಾಮಿಗಳು ಭಕ್ತರ ಆಶಯದಂತೆ ಸೇವೆ ಸಲ್ಲಿಸಲಿ. ಅರಭಾವಿ ದುರದುಂಡೀಶ್ವರ ಮಠಕ್ಕೆ ತನ್ನದೇಯಾದ ಇತಿಹಾಸವಿದೆ. ದುರದುಂಡೀಶ್ವರನು ತನ್ನನ್ನು ತಾನು ಕಾಪಾಡಿಕೊಳ್ಳದೇ ಇಡೀ ಭಕ್ತರನ್ನು ಕಾಪಾಡಿಕೊಂಡಿರುವ ಉದಾಹರಣೆಗಳು ಸಾಕಷ್ಟಿವೆ. ಪೀಠಾಧಿಪತಿಗಳಾದವರು ಭಕ್ತರ ಭಾವನೆಗಳಿಗೆ ಸ್ಪಂದಿಸಬೇಕೇ ಹೊರತು ಐಶಾರಾಮಿ ಜೀವನ ಮಾಡುವುದಕ್ಕಲ್ಲ. ಇದಕ್ಕೆ ಲಿಂ. ಸಿದ್ಧಲಿಂಗ ಮಹಾಸ್ವಾಮಿಗಳು ತಕ್ಕ ಉದಾಹರಣೆಯಾಗಿದ್ದಾರೆ. ಅತೀ ಸರಳವಾಗಿ ಜೀವನ ಸಾಗಿಸಿ ಸಮಾಜಕ್ಕೆ ಮಾದರಿಯಾಗಿದ್ದರು ಎಂದು ಹೇಳಿದರು.

ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ, ಪೃಥ್ವಿ ಕತ್ತಿ, ನಿವೃತ್ತ ಪ್ರಾದೇಶಿಕ ಆಯುಕ್ತ ಡಾ. ಮಹಾಂತೇಶ ಹಿರೇಮಠ, ಅಶೋಕ ಪೂಜಾರಿ ಮುಂತಾದವರು ಮಾತನಾಡಿ, ಶ್ರೀಮಠದ ಪರಂಪರೆಯನ್ನು ಶ್ಲಾಘಿಸಿದರು. ಶ್ರೀಮಠದ ಏಳ್ಗೆಗೆ ಎಲ್ಲ ರೀತಿಯ ಸಹಕಾರ ನೀಡುವುದಾಗಿ ತಿಳಿಸಿದರು.

ಅಥಣಿ ಮೋಟಗಿಮಠದ ಪ್ರಭು ಚನ್ನಬಸವ ಮಹಾಸ್ವಾಮಿಗಳು ನುಡಿ ನೈವೇದ್ಯಗೈದರು.

ನೇತೃತ್ವವನ್ನು ನಾಗನೂರು ರುದ್ರಾಕ್ಷಿ ಮಠದ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು, ಹುಬ್ಬಳ್ಳಿಯ ಅಭಿನವ ಸಿದ್ಧಾರೂಢ ಮಹಾಸ್ವಾಮಿಗಳು, ಬೆಳಗಾವಿ ಕಾರಂಜಿ ಮಠದ ಗುರುಸಿದ್ಧ ಮಹಾಸ್ವಾಮಿಗಳು, ಹುಬ್ಬಳ್ಳಿ ರುದ್ರಾಕ್ಷಿ ಮಠದ ಬಸವಲಿಂಗ ಮಹಾಸ್ವಾಮಿಗಳು, ಗುಬ್ಬಲಗುಡ್ಡದ ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಯಮಕನಮರಡಿಯ ರಾಚೋಟೇಶ್ವರ ಮಹಾಸ್ವಾಮಿಗಳು, ರಾಮದುರ್ಗದ ಶಾಂತವೀರ ಮಹಾಸ್ವಾಮಿಗಳು, ನಿಚ್ಚಳಿಕೆ ಪಂಚಾಕ್ಷರಿ ಮಹಾಸ್ವಾಮಿಗಳು, ಬಬಲಾದಿ ಮಠದ ಕರಿಗಿರೇಶ್ವರ ಸಂಗಮ ಶಿವಲಿಂಗೇಶ್ವರ ಮಹಾಸ್ವಾಮಿಗಳು, ವಿರುಪಾಕ್ಷ ಮಹಾಸ್ವಾಮಿಗಳು, ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಮಹಾಂತ ರುದ್ರೇಶ್ವರ ಮಹಾಸ್ವಾಮಿಗಳು, ಸದಾನಂದ ಶಿವಾಚಾರ್ಯರು, ಗುರುಪಾದ ಶಿವಾಚಾರ್ಯ ಸ್ವಾಮಿಗಳು, ಶಿವಮೂರ್ತಿ ಮಹಾಸ್ವಾಮಿಗಳು, ಗುರುದೇವ ದೇವರು, ಸದಾನಂದ ಮಹಾಸ್ವಾಮಿಗಳು, ಸಚ್ಚಿದಾನಂದ ಮಹಾಸ್ವಾಮಿಗಳು, ಚನ್ನಮ್ಮ ಕಿತ್ತೂರಿನ ಮಡಿವಾಳ ರಾಜಯೋಗಿಂದ್ರ ಮಹಾಸ್ವಾಮಿಗಳು, ನಾಗಭೂಷನ ಮಹಾಸ್ವಾಮಿಗಳು, ಸೇಗುಣಸಿಯ ಡಾ. ಮಹಾಂತಪ್ರಭು ಮಹಾಸ್ವಾಮಿಗಳು ಸೇರಿದಂತೆ ನಾಡಿನ ಹಲವಾರು ಮಹಾಸ್ವಾಮಿಗಳು ಉಪಸ್ಥಿತರಿದ್ದರು.

ಶಾಸಕ ಬಾಲಚಂದ್ರ ಜಾರಕಿಹೊಳಿ ಅವರನ್ನು ಇದೇ ಸಂದರ್ಭದಲ್ಲಿ ನಿಡಸೋಶಿ ಅರಭಾವಿ ಮಠದ ಮಹಾಸ್ವಾಮಿಗಳು ಜಂಟಿಯಾಗಿ ಸತ್ಕರಿಸಿದರು. ಎಸ್.ಕೆ. ಮಠ ಕಾರ್ಯಕ್ರಮ ನಿರೂಪಿಸಿದರು.

## ನ.22 ರಂದು ಕವಿಗೋಷ್ಠಿ ಆಯೋಜನೆ

ಧಾರವಾಡ: ಡಾ.ದ.ರಾ. ಬೇಂದ್ರೆ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ವತಿಯಿಂದ ಕರ್ನಾಟಕ ಸಂಭ್ರಮ–50 ವಿಶೇಷ ಕವಿಗೋಷ್ಠಿ ಕಾರ್ಯಕ್ರಮವನ್ನು ನವೆಂಬರ್ 22 ರಂದು ಸಂಜೆ 5–30 ಗಂಟೆಗೆ ಸಾಧನಕೇರಿಯ ಡಾ. ದ.ರಾ. ಬೇಂದ್ರೆ ಭವನದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ಅಧ್ಯಯನಾಂಗ ವಿಬಾಗದ ನಿರ್ದೇಶಕ ಪ್ರೊ. ಬಸವರಾಜ ಡೋಣೂರ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿನಿರ್ದೇಶಕ ಬಸವರಾಜ ಹೂಗಾರ ಆಶಯ ನುಡಿಗಳನ್ನಾಡುವರು.

ಡಾ. ದ.ರಾ. ಬೇಂದ್ರೆ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ನ ಅಧ್ಯಕ್ಷ ಡಾ. ಡಿ.ಎಮ್. ಹಿರೇಮಠ ಅಧ್ಯಕ್ಷತೆ ವಹಿಸುವರು. ಡಾ. ದ.ರಾ. ಬೇಂದ್ರೆ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ನ ಸದ್ಯಸರಾದ ಡಾ. ಕೆ.ಎಸ್. ಶರ್ಮಾ, ಡಾ.ಶ್ಯಾಮ ಸುಂದರ ಬಿದರಿಕುಂದಿ, ಡಾ. ಕೆ.ಆರ್. ದುರ್ಗಾದಾಸ್, ಡಾ. ಕೃಷ್ಣ ನಾಯಕ ಭಾಗವಹಿಸುವರು ಎಂದು ಟ್ರಸ್ಟ್ ಪ್ರಕಟಣೆ ತಿಳಿಸಿದೆ.

## ವಿಮಾ ಹಣ ವಿತರಿಸದ ಚೋಳಮಂಡಲ ವಿಮಾ ಕಂಪನಿಗೆ ರೂ.15 ಲಕ್ಷ ಆಯೋಗದಲ್ಲಿ ಡಿಪಾಸಿಟ ಇಡಲು ಆದೇಶ

ಧಾರವಾಡ: ನವಲಗುಂದ ತಾಲೂಕಿನ ಹಾಳ ಕುಸುಗಲ್ಲ ಗ್ರಾಮದ ಬಸವರಾಜ ಶಂಕರಪ್ಪಾ ಸವದಿ ಅನ್ನುವವರು ಕೆ.ಎ–25 ಎಎ–4536 ಗೂಡ್ಸ ವಾಹನಕ್ಕೆ ಮಾಲೀಕರಾಗಿದ್ದರು. ಅವರು ಆ ವಾಹನಕ್ಕೆ ಎದುರುದಾರ ಚೋಳಮಂಡಲ ವಿಮಾ ಕಂಪನಿಯಿಂದ ವಿಮೆ ಮಾಡಿಸಿದ್ದರು. ವಾಹನದ ಮಾಲೀಕ/ಚಾಲಕನಿಗೆ ರೂ.15,00,000/– ವೈಯಕ್ತಿಕ ಅಪಘಾತದ ವಿಮೆ ಒಳಗೊಂಡಿತ್ತು. ದಿ.21/03/2021 ರಂದು ಆ ವಾಹನ ಹುಬ್ಬಳ್ಳಿ/ವಿಜಯಪುರ ರಸ್ತೆ ಮೇಲೆ ಅಪಘಾತಕ್ಕೆ ಈಡಾಗಿತ್ತು. ಆಗ ವಾಹನದ ಮಾಲೀಕ/ ಚಾಲಕ ಬಸವರಾಜ ತೀವ್ರಗಾಯಗೊಂಡು ಮೃತರಾಗಿದ್ದರು. ತಂದೆಗೆ ಸಂಬಂಧಿಸಿದ ವಿಮಾ ಹಣ ರೂ.15 ಲಕ್ಷ ನೀಡುವಂತೆ ಅಲ್ಪವಯಿ ಮಗ ಸಿದ್ದಪ್ಪನ ಪರವಾಗಿ ಅವರ ತಾಯಿ ಪ್ರಸುತಿ ಎದುರುದಾರ ವಿಮಾ ಕಂಪನಿಗೆ ದಾಖಲೆಗಳ ಸಮೇತ ಕ್ಲೇಮ ಅರ್ಜಿ ಕೊಟ್ಟಿದ್ದರು.

ಮೃತ ಬಸವರಾಜನಿಗೆ ತಾನು ಹೆಂಡತಿಯಂತ ಇನ್ನೊಬ್ಬ ಮಾಲಾಶ್ರೀ ಎಂಬುವವರು ವಿಮಾ ಪರಿಹಾರ ತನಗೂ ಕೊಡುವಂತೆ ಆಕ್ಷೇಪಣೆ ಹಾಕಿದ್ದರು. ಮತ್ತೊಬ್ಬ ಬಸವ್ವ ಸವದಿ ಅನ್ನುವವರು ತಾನು ಮೃತ ಬಸವರಾಜನ ಅವಿವಾಹಿತ ಸಹೋದರಿ ಇದ್ದು ತನಗೂ ವಿಮಾ ಹಣ ಸೇರತಕ್ಕದೆಂದು ಆಕ್ಷೇಪಿಸಿದ್ದರು.

ಈ ಎಲ್ಲ ಆಕ್ಷೇಪಗಳನ್ನು ಪರಿಗಣಿಸಿದ ವಿಮಾ ಕಂಪನಿ ಪರಿಹಾರ ಯಾರಿಗೆ ಕೊಡುವುದು ಅಂತ ಗೊತ್ತಾಗುತ್ತಿಲ್ಲ ಎಂದು ದೂರುದಾರ ಕ್ಲೇಮನ್ನು ತಿರಸ್ಕರಿಸಿದ್ದರು. ಅಂತಹ ವಿಮಾಕಂಪನಿಯ ನಡಾವಳಿಕೆ ಗ್ರಾಹಕರ ಹಿತರಕ್ಷಣಾ ಕಾಯಿದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ವಿಮಾಕಂಪನಿಯವರ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರುದಾರ ದಿ.17/12/2020 ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಮೃತನ ಸಹೋದರಿ ಬಸವ್ವ ಮತ್ತು ಮೃತನ ಹೆಂಡತಿ ಅನ್ನುವ ಮಾಲಾಶ್ರೀರವರು ಮೃತನ ಸಾವಿನಿಂದ ಬರಬಹುದಾದ ಪರಿಹಾರದ ಹಣವನ್ನು ತಮಗೆ ಕೊಡುವಂತೆ ಕೋರಿ ಧಾರವಾಡ ಮತ್ತು ಬೆಳಗಾವಿಯ ಕೋರ್ಟುಗಳಲ್ಲಿ ಪ್ರತ್ಯೇಕ ಪ್ರಕರಣಗಳನ್ನು ದಾಖಲಿಸಿದ್ದರು.

ಈ ಪ್ರಕರಣದ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ. ಭೂತೆ ಹಾಗೂ ಸದಸ್ಯರುಗಳಾದ ವಿಶಾಲಾಕ್ಷಿ. ಅ. ಬೋಳಶೆಟ್ಟಿ ಮತ್ತು ಪ್ರಭು. ಸಿ. ಹಿರೇಮಠ ಮೃತ ವಿಮಾದಾರ ಹಾಗೂ ಎದುರುದಾರ ವಿಮಾಕಂಪನಿಯವರ ಮಧ್ಯೆ ಆಗಿರುವ ಒಪ್ಪಂದದಂತೆ ಅವರು ಸತ್ತ ಮೇಲೆ ವೈಯಕ್ತಿಕ ಅಪಘಾತ ವಿಮೆ ರೂ.15 ಲಕ್ಷ ಅವಲಂಬಿತರಿಗೆ ಕೊಡಬೇಕಾದುದು ಅವರ ಕರ್ತವ್ಯವಾಗಿದೆ ಅಂತ ಆಯೋಗ ಅಭಿಪ್ರಾಯ ಪಟ್ಟು ತೀಪು ನೀಡಿದೆ.

ತೀಪು ನೀಡಿದ 1 ತಿಂಗಳೊಳಗಾಗಿ 15 ಲಕ್ಷ ಹಣವನ್ನು ಗ್ರಾಹಕರ ರಕ್ಷಣಾ ಆಯೋಗದಲ್ಲಿ ಡಿಪಾಸಿಟ ಮಾಡುವಂತೆ ಎದುರುದಾರ ವಿಮಾ ಕಂಪನಿಗೆ ಆಯೋಗ ನಿರ್ದೇಶಿಸಿದೆ.

ದೂರುದಾರ ಮೃತನ ಮಗನಿದ್ದು, ಒಬ್ಬ ಸಹೋದರಿ ಹಾಗೂ ಇನ್ನೊಬ್ಬ ಹೆಂಡತಿಯ ಮಧ್ಯೆ ಮೃತನ ಅವಲಂಬಿತರಾರು ಎನ್ನುವ ಬಗ್ಗೆ ತಂಟೆ ತಕರಾರು ಇದೆ. ಅಂತಹ ಗಂಭೀರ ಸಂಗತಿಗಳನ್ನು ನಿರ್ಣಯಿಸುವ ಅಧಿಕಾರ ವ್ಯಾಪ್ತಿ ಗ್ರಾಹಕರ ಆಯೋಗಕ್ಕೆ ಬರುವುದಿಲ್ಲ. ಕಾರಣ ಅವರು ಸಂಬಂದಿಸಿದ ಸಿವಿಲ್ ಕೋರ್ಟು ಅಥವಾ ಅಧಿಕಾರಯುತ ಪ್ರಾಧಿಕಾರದ ಮುಂದೆ ಪ್ರಕರಣ ದಾಖಲಿಸಿ ಆ ಹಣ ಪಡೆಯಲು ತಾವೇ ಹಕ್ಕುದಾರರು ಅಂತಾ ಆದೇಶ ತರುವಂತೆ ಆಯೋಗ ಆ ಮೂವರಿಗೂ ನಿರ್ದೇಶನ ನೀಡಿದೆ.

ಅಂತಹ ಆದೇಶ ತರುವವರೆಗೆ ವಿಮಾ ಕಂಪನಿ ಡಿಪಾಸಿಟ ಮಾಡಿದರೂ 15 ಲಕ್ಷ ಅನ್ನು ರಾಷ್ಟ್ರೀಕೃತ ಬ್ಯಾಂಕನಲ್ಲಿ ಕಾಯಂ ಠೇವಣಿ ಇಡುವಂತೆ ತೀರ್ಪಿನಲ್ಲಿ ಹೇಳಿದೆ. ಸಿವಿಲ್ ಕೋರ್ಟು ಅಥವಾ ಅಧಿಕಾರಯುತ ಪ್ರಾಧಿಕಾರದಿಂದ ಆದೇಶ ತಂದ ವ್ಯಕ್ತಿ ಅಥವಾ ವ್ಯಕ್ತಿಗಳು ಸದರಿ ಆದೇಶದಂತೆ ಬಡ್ಡಿ ಸಮೇತ ಡಿಪಾಸಿಟ ಹಣ ಪಡೆಯಲು ಅರ್ಹರಿದ್ದಾರೆ ಅಂತಾ ಆಯೋಗ ತನ್ನ ತೀರ್ಪಿನಲ್ಲಿ ಹೇಳಿದೆ.

# 23ರಂದು ಹುಕ್ಕೇರಿಯಲ್ಲಿ ಅದ್ದೂರಿ ಕರ್ನಾಟಕ ರಾಜ್ಯೋತ್ಸವ ಆಚರಣೆ



ಹುಕ್ಕೇರಿ: ಕನ್ನಡಿಗರ ಸ್ವಾಭಿಮಾನದ ಸಂಕೇತವಾದ ಕರ್ನಾಟಕ ರಾಜ್ಯೋತ್ಸವವನ್ನು ಹುಕ್ಕೇರಿಯಲ್ಲಿ ಇದೇ ತಿಂಗಳು ನ. 23 ರಂದು ಅತ್ಯಂತ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಯಿತು.

ತಾಲೂಕಿನ ಬೆಲ್ಲದ ಬಾಗೇವಾಡಿಯಲ್ಲಿ ರವಿವಾರ ಮಾಜಿ ಸಂಸದರೂ ಆದ ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ ಕತ್ತಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಭಾವೈಕ್ಯತೆಗೆ ಹೆಸರುವಾಸಿಯಾದ ಹುಕ್ಕೇರಿಯಲ್ಲಿ ಕರ್ನಾಟಕ ರಾಜ್ಯೋತ್ಸವವನ್ನು ಸಡಗರ–ಸಂಭ್ರಮದಿಂದ ಆಚರಿಸಲು ತೀರ್ಮಾನಿಸಲಾಯಿತು.

ಪ್ರತಿ ವರ್ಷದಂತೆ ಈ ಬಾರಿಯೂ ಕರ್ನಾಟಕ ರಾಜ್ಯೋತ್ಸವ ಉತ್ಸಾಹಿ ಸಮಿತಿಯ ಯಶಸ್ವಿ 3ನೇ ವರ್ಷದ ಅದ್ದೂರಿ ರಾಜ್ಯೋತ್ಸವ ಕಾರ್ಯಕ್ರಮದ ರೂಪರೇಷೆಗಳ ಕುರಿತು ಚರ್ಚಿಸಿ ಅಂತಿಮಗೊಳಿಸಲಾಯಿತು. ಈ ಸಲದ ರಾಜ್ಯೋತ್ಸವವನ್ನು ವಿಶಿಷ್ಟ ಹಾಗೂ ವಿಶೇಷವಾಗಿ ಆಚರಿಸುವ ಕುರಿತು ನಿರ್ಣಯ ಕೈಗೊಳ್ಳಲಾಯಿತು.

ನ.23 ರಂದು ಬೆಳಗ್ಗೆ 9 ಕ್ಕೆ ಅಡವಿಸಿದ್ದೇಶ್ವರ ಮಠದಿಂದ ಕೋರ್ಟ್ ಸರ್ಕಲ್‌ವರೆಗೆ ನಡೆಯುವ ವಿವಿಧ ಕಲಾ ತಂಡಗಳ ಮೆರವಣಿಗೆಗೆ ಶಾಸಕ ನಿಖಿಲ ಕತ್ತಿ ಚಾಲನೆ ನೀಡುವರು. ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ವಿರಕ್ತಮಠದ ಶಿವಬಸವ ಸ್ವಾಮೀಜಿ, ಕ್ಯಾರಗುಡ್ ಅವುಜೀಕರ ಆಶ್ರಮದ ಅಭಿನವ ಮಂಜುನಾಥ ಸ್ವಾಮೀಜಿ ಸಾನಿಧ್ಯ ವಹಿಸುವರು. ನಾಡು–ನುಡಿ, ನೆಲ–ಜಲ, ಭಾಷೆ–ಸಂಸ್ಕೃತಿ ಬಿಂಬಿಸುವ ರೂಪಕಗಳು ಮತ್ತು ಡೊಳ್ಳು, ಗೊಂಬೆ, ಕುದುರೆ ಕುಣಿತ, ವೀರಗಾಸೆ ಸೇರಿದಂತೆ 20ಕ್ಕೂ ಹೆಚ್ಚು ಕಲಾ ತಂಡಗಳು ಭಾಗವಹಿಸಲಿವೆ.

ಮಧ್ಯಾಹ್ನ 12 ರಿಂದ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸುವ ಭುವನೇಶ್ವರಿ ಭಾವಚಿತ್ರದ ಭವ್ಯ ಮೆರವಣಿಗೆಗೆ ಯುವ ನಾಯಕರಾದ ಪೃಥ್ವಿ ಕತ್ತಿ, ಪವನ ಕತ್ತಿ ಚಾಲನೆ ನೀಡುವರು. ಈ ಭವ್ಯ ಡಾಲ್ಬಿ (ಡಿಜೆ) ಮೆರವಣಿಗೆಯಲ್ಲಿ ತಾಲೂಕಿನ ವಿವಿಧ ಹಳ್ಳಿಗಳು ಸೇರಿದಂತೆ ಬೆಳಗಾವಿ ಜಿಲ್ಲೆಯ ವಿವಿಧ ಭಾಗಗಳಿಂದ ಸುಮಾರು 10 ಸಾವಿರಕ್ಕೂ ಹೆಚ್ಚು ಯುವ ಸಮೂಹ ಭಾಗವಹಿಸುವ ನಿರೀಕ್ಷೆ ಇದೆ.

ಸ್ಮರಣೀಯ ರಾಜ್ಯೋತ್ಸವಕ್ಕೆ ಪಟ್ಟಣದ ಪ್ರಮುಖ ಬೀದಿ, ಆಯಕಟ್ಟಿನ ಸ್ಥಳಗಳನ್ನು ವಿದ್ಯುತ್ ದೀಪಾಲಂಕಾರ ಮತ್ತು ತಳಿರು–ತೋರಣಗಳಿಂದ ಶೃಂಗಾರ, ಕಟೌಟ್–ಬ್ಯಾನರ್‌ಗಳ ಅಳವಡಿಕೆ, ಪ್ರತಿ ಮನೆ ಮೇಲೆ ಕನ್ನಡ ಧ್ವಜಗಳ ಹಾರಾಟದ ವ್ಯವಸ್ಥೆ ಮಾಡಲಾಗುವುದು. ಇಡೀ ಹುಕ್ಕೇರಿಯಲ್ಲಿ ಕನ್ನಡದ ಅಸ್ಮಿತೆ ಅನಾವರಣವಾಗಲಿದೆ. ರಾಜ್ಯೋತ್ಸವಕ್ಕೆ ಯುವ ಸಮೂಹ, ಅನೇಕ ಸಂಘ–ಸಂಸ್ಥೆಗಳು ಟೊಂಕ ಕಟ್ಟಿ ನಿಂತು ಹಗಲಿರುಳು ಕೆಲಸ ಮಾಡಲಿವೆ. ಇದೇ ವೇಳೆ ಕನ್ನಡ ಹೋರಾಟಗಾರರು, ಪ್ರತಿಭಾನ್ವಿತ ವಿದ್ಯಾರ್ಥಿಗಳು ಮತ್ತು ವಿವಿಧ ವಲಯಗಳ ಅದ್ವಿತೀಯ ಸಾಧನೆಗೈದವರನ್ನು ಸನ್ಮಾನಿಸಲಾಗುವುದು.

ಸಭೆಯಲ್ಲಿ ಪುರಸಭೆ ಮಾಜಿ ಅಧ್ಯಕ್ಷರಾದ ಜಯಗೌಡ ಪಾಟೀಲ, ಎ.ಕೆ.ಪಾಟೀಲ, ಸದಸ್ಯರಾದ ಮಹಾವೀರ ನಿಲಜಗಿ, ರಾಜು ಮುನ್ನೋಳಿ, ಭೀಮಶಿ ಗೋರಖನಾಥ, ಮಧುಕರ ಕರನಿಂಗ, ಕುಮಾರ ಜುಟಾಳೆ, ಹಿರಣ್ಯಕೇಶಿ ಕಾರ್ಖಾನೆ ನಿರ್ದೇಶಕ ಅಶೋಕ ಪಟ್ಟಣಶೆಟ್ಟಿ, ಮುಖಂಡರಾದ ಅಪ್ಪುಶ ತುಬಚಿ, ಸುಹಾಸ ನೂಲಿ, ಗುರುರಾಜ ಕುಲಕರ್ಣಿ, ಜ್ಯೋತಿಬಾ ದುಪ್ಪಟ್ಟಿ, ರಮೇಶ ಬೋಳಗಾಂವಿ, ಸುಭಾಶ ಹಾವನ್ನವರ, ಸಂತೋಷ ಸುಣಗಾರ, ವೈಭವ ಶಿವಮೊಗ್ಗಿಮಠ, ಹಾಲಪ್ಪಾ ಗಡದವರ ಮತ್ತಿತರರು ಉಪಸ್ಥಿತರಿದ್ದರು.

## ಕೇಂದ್ರ ಸರ್ಕಾರದಿಂದ ಕುಶಲಕರ್ಮಿಗಳಿಗಾಗಿ ಪಿ.ಎಂ.ವಿಶ್ವಕರ್ಮ ನೂತನ ಯೋಜನೆ ಜಾರಿ ; ನೋಂದಣಿ ಮಾಡಿಕೊಳ್ಳಲು ಅವಕಾಶ: ಸಿಇಓ ಸ್ವರೂಪ ಟಿ.ಕೆ



ಧಾರವಾಡ: ನಗರ ಹಾಗೂ ಗ್ರಾಮೀಣ ಭಾಗದ ಕುಶಲಕರ್ಮಿಗಳ ಉದ್ಯೋಗ ಹೆಚ್ಚಿಸಲು ಮತ್ತು ಉತ್ಪನ್ನ ಹೆಚ್ಚಿಸಲು ಕೇಂದ್ರ ಸರ್ಕಾರವು ಪಿ.ಎಂ. ವಿಶ್ವಕರ್ಮ ಎಂಬ ಹೊಸ ಯೋಜನೆ ಜಾರಿಗೊಳಿಸಿದ್ದು, ಜಿಲ್ಲೆಯ ವಿವಿಧ ಗುಡಿ ಕೈಗಾರಿಕೆಗಳಲ್ಲಿ ತೊಡಗಿಸಿಕೊಂಡಿರುವ ಕುಶಲಕರ್ಮಿಗಳು ಪಿ.ಎಂ. ವಿಶ್ವಕರ್ಮ ಯೋಜನೆಗೆ ಆನ್ಲೈನ್ ಮೂಲಕ ನೊಂದಾಯಿಸಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ. ಅವರು ಹೇಳಿದರು.

ಅವರು ಬೆಳಿಗ್ಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ಗ್ರಾಮಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಕಾರ್ಯದರ್ಶಿಗಳಿಗೆ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಆಯೋಜಿಸಿದ್ದ ಪಿ.ಎಂ. ವಿಶ್ವಕರ್ಮ ನೂತನ ಯೋಜನೆ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕೇಂದ್ರ ಸರ್ಕಾರದ ಹೊಸ ಯೋಜನೆಯಾದ ಪಿ.ಎಂ. ವಿಶ್ವಕರ್ಮ ಯೋಜನೆಯಡಿಯಲ್ಲಿ ಒಂದು ಲಕ್ಷದವರೆಗೆ ಶೇ.5 ರ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ದೊರೆಯುತ್ತದೆ ಮತ್ತು 15 ಸಾವಿರ ರೂಪಾಯಿಯ ಉಚಿತ ಟೂಲ್ ಕಿಟ್ ನೀಡಲಾಗುತ್ತದೆ. ಭಾರತೀಯ ಆರ್ಥಿಕತೆಯು ಹಲವಾರು ಕುಶಲಕರ್ಮಿಗಳನ್ನು ಒಳಗೊಂಡಿದೆ ಕಮ್ಮಾರರು, ಅಕ್ಕಸಾಲಿಗ, ಕುಂಬಾರರು, ಬಡಗಿಗರು, ಶಿಲ್ಪಿಗಳು ಮುಂತಾದ ಉದ್ಯೋಗಗಳಲ್ಲಿ ತೊಡಗಿಸಿಕೊಂಡಿದ್ದಾರೆ ಅಂತಹ ಅರ್ಹ ಕುಶಲಕರ್ಮಿಗಳನ್ನು ಗುರುತಿಸಿ ಆಯ್ಕೆ ಮಾಡಿ ಎಂದು ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಅವರು ತಿಳಿಸಿದರು.

ಪಿ.ಎಂ. ವಿಶ್ವಕರ್ಮ ಯೋಜನೆಯಲ್ಲಿ 18 ಚಟುವಟಿಕೆಳನ್ನು ಗುರುತಿಸಲಾಗಿದೆ, ಒಂದು ವೇಳೆ ಇದರಲ್ಲಿ ಇಲ್ಲದ ಚಟುವಟಿಕೆಗಳು ಇದ್ದರೆ, ರಾಜ್ಯ ಮಟ್ಟದ ಆಯ್ಕೆ ಸಮಿತಿ ಗಮನಕ್ಕೆ ತರಲಾಗುವುದು. 18 ವರ್ಷ ಮೇಲ್ಪಟ್ಟವರು ಈ ಯೋಜನೆಗೆ ನೋಂದಣಿಯನ್ನು ಮಾಡಿಕೊಳ್ಳಬಹುದು, ಒಂದು ಕುಟುಂಬಕ್ಕೆ ಒಬ್ಬರನ್ನು ಮಾತ್ರ ಅರ್ಹರೆಂದು ಆಯ್ಕೆ ಮಾಡಲಾಗುತ್ತದೆ. ಸರ್ಕಾರಿ ನೌಕರರ ಕುಟುಂಬಗಳು ಈ ಯೋಜನೆಗೆ ಅನರ್ಹರಾಗಿರುತ್ತಾರೆ. ಉಚಿತವಾಗಿ ನೋಂದಣಿ ಮಾಡಿಕೊಳ್ಳಬಹುದು ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕಿ ರೇಖಾ ಡೊಳ್ಳಿನ ಅವರು ಉಪಸ್ಥಿತರಿದ್ದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಶಿವಪುತ್ರಪ್ಪ ಹೊಸಮನಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಕೈಗಾರಿಕಾ ಕೇಂದ್ರದ ಉಪನಿರ್ದೇಶಕ ಡಾ. ಭೀಮಪ್ಪ ಎಂ.ಎನ್. ಅವರು ನಿರೂಪಿಸಿ, ಸ್ವಾಗತಿಸಿ, ವಂದಿಸಿದರು.

ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಪಿಡಿಓಗಳ ಈ ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

## ಎಥೆನಾಲ್ ಉತ್ಪಾದನೆಗೆ ಚಾಲನೆ



ಹುಕ್ಕೇರಿ: ತಾಲೂಕಿನ ಸಂಕೇಶ್ವರ ಹಿರಣ್ಯಕೇಶಿ ಸಹಕಾರಿ ಸಕ್ಕರೆ ಕಾರಖಾನೆಯ 2023–24ನೇ ಸಾಲಿನ ಡಿಸ್ಟಿಲರಿ ಘಟಕದ ಎಥೆನಾಲ ಉತ್ಪಾದನಾ ಕಾರ್ಯಾಚರಣೆಯ ಪ್ರಾರಂಭೋತ್ಸವ ಸೋಮವಾರ ನಡೆಯಿತು.

ಹುನ್ನೂರ ವಿಠ್ಠರಾಯದೇವರ ಸಿದ್ದಪ್ಪಾ ಪೂಜೇರಿ ದಂಪತಿ, ನಿರ್ದೇಶಕ ಸುರೇಶ ಬೆಲ್ಲದ ದಂಪತಿ ಮಹಾಲಕ್ಷ್ಮೀ ಪೂಜೆ ನೆರವೇರಿಸಿ ಡಿಸ್ಟಿಲರಿ ಘಟಕದ ಎಥೆನಾಲ್ ಉತ್ಪಾದನಾ ಕಾರ್ಯಾಚರಣೆಗೆ ಚಾಲನೆ ನೀಡಿದರು.

ಉಪಾಧ್ಯಕ್ಷ ಶ್ರೀಶೈಲಪ್ಪ ಮಗದುಮ್ಮ, ನಿರ್ದೇಶಕರಾದ ಶಿವನಾಯಿಕ ನಾಯಿಕ, ಶಿವಪುತ್ರ ಶಿರಕೋಳಿ, ಪ್ರಭುದೇವ ಪಾಟೀಲ, ಬಾಬಾಸಾಹೇಬ ಅರಬೋಳೆ, ಅಶೋಕ ಪಟ್ಟಣಶೆಟ್ಟಿ, ಬಸವರಾಜ ಮರಡಿ, ಬಸವರಾಜ ಕಲ್ಲಟ್ಟಿ, ಸುರೇಂದ್ರ ದೊಡ್ಡಲಿಂಗನವರ, ವ್ಯವಸ್ಥಾಪಕ ನಿರ್ದೇಶಕ ಸಾತಪ್ಪ ಕರ್ಕಿನಾಯಿಕ, ಕಾರ್ಯಾಲಯ ಅಧೀಕ್ಷಕ ಸುಭಾಸ ನಾಶಿಪುಡಿ, ಡಿಸ್ಟಿಲರಿ ಚೀಫ್ ಕೆಮಿಸ್ಟ ಎಂ.ಆರ್.ಪಾಟೀಲ, ಪರಿಸರ ವಿಜ್ಞಾನಿ ಎ.ಆರ್.ಚಾಟೆ, ಡೆಪ್ಯುಟಿ ಜ.ಮ್ಯಾನೇಜರ (ಪ್ರೊಸೆಸ್) ವಿ.ವಿ.ಪಾಟೀಲ, ವೆಹಿಕಲ್ ಎಂಜನೀಯರ ವಿ.ಎಂ.ಬೆಲ್ಲದ, ಲೇಖಾಧಿಕಾರಿ ಕೆ.ಆರ್. ಬೆಟಗೇರಿ, ಪರಿಚೇಜ ಆಫೀಸರ ಸಿ.ಎ.ಪೂಜಾರ, ಡಿಸ್ಟಿಲರಿ ಅಕೌಂಟಂಟ ಎಂ.ಎಸ್.ಉತ್ತೂರ, ಕಬ್ಬಿನ ಲೇಖಾಧಿಕಾರಿ ಎಂ.ವೈ.ಪಾಟೀಲ, ಅಸಿಸ್ಟಂಟ ಅಕೌಂಟಂಟ್ ಸಿ.ಬಿ.ಮರೇದಿ, ಸಂರಕ್ಷಣ ಅಧಿಕಾರಿ ಬಾಬಾಸಾಹೇಬ ನಾಗನೂರಿ ಸೇರಿದಂತೆ ಸಿಬ್ಬಂದಿ ಹಾಗೂ ಕಾರ್ಮಿಕರು ಉಪಸ್ಥಿತರಿದ್ದರು.

## ಡಿಪ್ಲೋಮಾ ಪಾಸಾದ ಅಭ್ಯರ್ಥಿಗಳಿಗೆ ಜಿ.ಟಿ.ಟಿ.ಸಿಯಲ್ಲಿ ಉಚಿತ ಪೋಸ್ಟ್ ಡಿಪ್ಲೋಮಾ ಕೋರ್ಸ್ ಕಲಿಗೆ ಅರ್ಜಿ ಆಹ್ವಾನ

ಧಾರವಾಡ: ಈ ವರ್ಷ ವಿವಿಧ ಡಿಪ್ಲೋಮಾಗಳಲ್ಲಿ ಪಾಸಾದ ಅಭ್ಯರ್ಥಿಗಳಿಗೆ ಸರಕಾರದ ವತಿಯಿಂದ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ರಾಯಾಪುರ, ಧಾರವಾಡದಲ್ಲಿ ಪೋಸ್ಟ್ ಡಿಪ್ಲೋಮಾ ಇನ್ ಟೂಲ್ ಡಿಸೈನ್ (ಪಿಡಿಟಿಡಿ) ಕೋರ್ಸ್ನ ಉಚಿತ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಕೋರ್ಸ್ನಲ್ಲಿ 30 ಅಭ್ಯರ್ಥಿಗಳಿಗೆ ಅವಕಾಶವಿದ್ದು, ಮೊದಲು ಬಂದವರಿಗೆ ಮೊದಲ ಪ್ರಾಶಸ್ತ್ಯ ಆಧಾರದ ಮೇಲೆ ಪ್ರವೇಶ ಕಲ್ಪಿಸಲಾಗುತ್ತಿದೆ. ಈಗಾಗಲೇ ಅಭ್ಯರ್ಥಿಗಳು ಪ್ರವೇಶ ಪಡೆಯುತ್ತಿದ್ದು ಇನ್ನುಳಿದ ಸೀಟುಗಳಿಗೆ ಅರ್ಹ ಅಭ್ಯರ್ಥಿಗಳು ಪ್ರವೇಶ ಪಡೆಯಬಹುದಾಗಿದೆ. ಟೂಲ್ಡಿಸೈನ್ ಮುಗಿಸಿರುವ ಅಭ್ಯರ್ಥಿಗಳಿಗೆ ಕೈಗಾರಿಕೆಗಳಲ್ಲಿ ಬಹು ಬೇಡಿಕೆ ಇದ್ದು ಕೋರ್ಸ್ ಮುಗಿಸಿದ ಅಭ್ಯರ್ಥಿಗಳಿಗೆ ಕ್ಯಾಂಪಸ್ ಸಂದರ್ಶನ ಮೂಲಕ ಉದ್ಯೋಗಾವಕಾಶ ಕಲ್ಪಿಸಿ ಕೊಡಲಾಗುವುದು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ಮಾಸಿಕ ರೂ.2,500/– ಸ್ಟೈಫಂಡ್ ಕೊಡಲಾಗುವುದು. ಇತರ ವರ್ಗದ ಅಭ್ಯರ್ಥಿಗಳಿಗೆ ಶುಲ್ಕ ಮರುಪಾವತಿ ವ್ಯವಸ್ಥೆ ಇದೆ. ಅರ್ಹ ವಿದ್ಯಾರ್ಥಿಗಳು ಈ ಅವಕಾಶದ ಸದುಪಯೋಗ ಪಡೆದುಕೊಳ್ಳಬೇಕು.

ಹೆಚ್ಚಿನ ವಿವರಗಳಿಗಾಗಿ **gttc.karnataka.gov.in** ವೆಬ್ಸೈಟ್ ಲಿಂಕ್ ಅನ್ನು ಬಳಸಬಹುದು ಅಥವಾ ಪ್ರಾಂಶುಪಾಲರು ಶಿವಾನಂದ ಕುಂಬಾರ, ಜಿ.ಟಿ.ಟಿ.ಸಿ ಪ್ಲಾಟ್ ಸಂಖ್ಯೆ: 38 ರಿಂದ 45, ಮೊದಲನೇ ಹಂತ, ಕೆ.ಐ.ಎ.ಡಿ.ಬಿ ಕೈಗಾರಿಕಾ ಪ್ರದೇಶ, ರಾಯಾಪುರ, ಧಾರವಾಡ–580009. ದೂರವಾಣಿ ಸಂಖ್ಯೆ: 8050401115, 9035630312 ಇವರನ್ನು ಸಂಪರ್ಕಿಸಬಹುದೆಂದು ಜಿಟಿಟಿಸಿ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಿನ್ನಿಸು ಕಟ್ಟೆ ಮಳಿಗೆ ನಿರ್ಮಾಣ, ಹಂಚಿಕೆಯಲ್ಲಿ ಅಕ್ರಮ

### ಬೆಂಗಳೂರಿನಿಂದ ಆಗಮಿಸಿ ತನಿಖೆ ನಡೆಸಿದ ಅಧಿಕಾರಿಗಳ ತಂಡ

ಬೆಳಗಾವಿ: ಇಲ್ಲಿನ ಬಸವೇಶ್ವರ ವೃತ್ತದ ಬಳಿ ಇರುವ ತಿನ್ನಿಸು ಕಟ್ಟೆ ಮಳಿಗೆ ಹಂಚಿಕೆಯಲ್ಲಿ ಅವ್ಯವಹಾರ ಹಾಗೂ ನಾಲಾ ಪಕ್ಕದಲ್ಲೇ ಕಟ್ಟಡ ನಿರ್ಮಾಣ ಸೇರಿದಂತೆ ಸಾಕಷ್ಟು ಭ್ರಷ್ಟಾಚಾರ ನಡೆದಿರುವ ಆರೋಪದ ಹಿನ್ನೆಲೆಯಲ್ಲಿ ಸೋಮವಾರ ಲೋಕೋಪಯೋಗಿ ಇಲಾಖೆಯ ಹಿರಿಯ ಅಧಿಕಾರಿಗಳು ತಿನ್ನಿಸು ಕಟ್ಟೆಯ ಪ್ರತಿಯೊಂದು ಮಳಿಗೆ ತಪಾಸಣೆ ಮಾಡಿ ಲೋಕೋಪಯೋಗಿ ಇಲಾಖೆ ಬೆಂಗಳೂರು ದಕ್ಷಿಣ ಮುಖ್ಯ ಎಂಜಿನಿಯರ್ ದುರ್ಗಪ್ಪ ನೇತೃತ್ವದ ನಾಲ್ಕು ಜನ ತನಿಖಾ ತಂಡ ಮಾಹಿತಿ ಕಲೆ ಹಾಕಿದರು.

ಬೆಳಗಾವಿ ಬಸವೇಶ್ವರ ನಗರದಲ್ಲಿರುಗ ತಿನ್ನಿಸು ಕಟ್ಟೆಯ ಕಟ್ಟಡವೇ ಅವೈಜ್ಞಾನಿಕವಾಗಿದೆ. ನಾಲೆ ಹರಿಯುವ ಜಾಗದಿಂದ ಇಂತಿಷ್ಟು ಕಿ.ಮೀ ದೂರ ಇರಬೇಕೆಂಬ ನಿಯಮ ಇದ್ದರೂ ಕಾನೂನು ಬಾಹಿರವಾಗಿ ಕಟ್ಟಡ ನಿರ್ಮಾಣ ಮಾಡಿದ್ದಾರೆ. ಲೋಕೋಪಯೋಗಿ ಇಲಾಖೆಯಿಂದ ಕಟ್ಟಲ್ಪಟ್ಟಿರುವ ಈ ಕಟ್ಟಡದಲ್ಲಿ ವಿಧವೆಯರು, ಬಡವರು, ದೀನ ದಲಿತರಿಗೆ ತೆರಿಗೆ ಕಟ್ಟದ ಕಡು ಬಡವರಿಗೆ ಕಡಿಮೆ ಬಾಡಿಗೆಯಲ್ಲಿ ಮಳಿಗೆಗಳನ್ನು ಹಂಚಬೇಕು ಎಂಬ ಕಾನೂನು ಇದ್ದರೂ ಇದನ್ನೆಲ್ಲ ಗಾಳಿಗೆ ತೂರಿ




ಕೇವಲ ಬಿಜೆಪಿಯ ಕಾರ್ಯಕರ್ತರಿಗೆ ಹಂಚಿಕೆ ಮಾಡಿದ್ದಾರೆ ಎನ್ನುವ ಆರೋಪ ಹಾಗೂ ದೂರಿನ ಮೇರೆಗೆ ಸರಕಾರ ಲೋಕೋಪಯೋಗಿ ಇಲಾಖೆಯ ಉನ್ನತ ಮಟ್ಟದ ಅಧಿಕಾರಿಗಳ ಕಮಿಟಿ ರಚನೆ ಮಾಡಿ ತನಿಖೆಗೆ ಆದೇಶ ನೀಡಿತ್ತು. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಇಲ್ಲಿನ ಪ್ರತಿಯೊಂದು ಮಳಿಗೆಯನ್ನು ತಪಾಸಣೆ ನಡೆಸಿದರು.

ತಿನ್ನಿಸು ಕಟ್ಟೆಯ ಕಟ್ಟಡವನ್ನು ನಿರ್ಮಾಣ ಮಾಡಿದ ಗುತ್ತಿಗೆದಾರನ ಪತ್ನಿಯ ಹೆಸರಿನಲ್ಲಿಯೂ ಮಳಿಗೆ ಇದೆ. ಯಾವ ಆಧಾರದ ಮೇಲೆ ಇವರಿಗೆ ಹಂಚಿಕೆಯಾಗಿದೆ. ಸರಕಾರದಿಂದ ನಿರ್ಮಾಣ ಮಾಡಿರುವ ಈ ಕಟ್ಟಡದಲ್ಲಿ ಸರಕಾರದ ನಾಮಫಲಕ ಇರಬೇಕು. ವೈಯಕ್ತಿಕ ಸ್ಥಳೀಯ ಶಾಸಕ ಅಭಯ ಪಾಟೀಲ ನಾಮಫಲಕ ಇರುವುದನ್ನು ಸಾಮಾಜಿಕ ಕಾರ್ಯಕರ್ತರು ಆಕ್ಷೇಪ ವ್ಯಕ್ತಪಡಿಸಿದರು.

ಇದರ ಸತ್ಯಾಸತ್ಯತೆ ಹೊರಗೆ ಬರಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಇತ್ತೀಚೆಗೆ ಬೃಹತ್ ಹೋರಾಟ ನಡೆಸಿ ದೂರು ನೀಡಿದ್ದನ್ನು ಇಲ್ಲಿ ಸ್ಮರಿಸಬಹುದು. ತನಿಖೆ ನಡೆಸಲು ಬಂದ ತಂಡಕ್ಕೆ ತಿನ್ನಿಸು ಕಟ್ಟೆ ಪ್ರಾರಂಭವಾಗಿ ಇಷ್ಟು ವರ್ಷವಾದರೂ ನನ್ನ ಹೆಸರಿನಲ್ಲಿ ಮಳಿಗೆ ಇದೆ. ಆದರೆ ಇದೇ ನನ್ನ ಮಳಿಗೆ ಎಂದು ತಿಳಿದಿಲ್ಲ. ಹೆಸರು ನನ್ನ ಪತ್ನಿಯ ಹೆಸರಿನಲ್ಲಿದೆ. ಆದರೆ ಇದನ್ನು ಬೇರೆಯವರಿಗೆ ನೀಡಿದ್ದಾರೆ ಎಂದು ದೂರಿದರು.

ತನಿಖೆಗೆ ಆಗಮಿಸಿದ ಅಧಿಕಾರಿಗಳ ಎದುರು ಉಭಯ ನಾಯಕರ ಬೆಂಬಲಿಗರ ನಡುವೆ ಮಾತಿನ ಚಕಮಕಿ ನಡೆಯಿತು. ಅಧಿಕಾರಿಗಳು ತನಿಖೆ ನಡೆಸುತ್ತಾರೆ ನೀವು ಯಾಕೆ ಇಲ್ಲಿ ಬಂದಿರಿ? ಎಂದು ಸಚಿವ ಸತೀಶ್ ಜಾರಕಿಹೊಳಿ ಬೆಂಬಲಿಗರಿಗೆ ಅಭಯ್ ಪಾಟೀಲ್ ಬೆಂಬಲಿಗರು ಪ್ರಶ್ನಿಸಿದ್ದಾರೆ. ಇದರಿಂದ ಇಬ್ಬರು ನಾಯಕರ ಬೆಂಬಲಿಗರ ನಡುವೆ ಗಲಾಟೆ, ವಾಗ್ವಾದ ನಡೆಯಿತು. ಇದನ್ನು ಕಂಡ ಪೊಲೀಸರು ಇಬ್ಬರು ಬೆಂಬಲಿಗರನ್ನು ಹೊರ ಕಳುಹಿಸಿದರು.

# ಬದುಕಿಗೆ ಸಾಮಾಜಿಕ ಸಾಮರಸ್ಯ ತರಬಲ್ಲ ಶಕ್ತಿ ಸಾಹಿತ್ಯಕ್ಕಿದೆ

ಬೆಳಗಾವಿ: ಒಂದು ದೇಶದ ಜನರ ನಿತ್ಯದ ಬದುಕಿಗೆ ಮಿಡಿಯುತ್ತ ಸಾಮಾಜಿಕ ಸಾಮರಸ್ಯತರಬಲ್ಲ ಶಕ್ತಿ ಸಾಹಿತ್ಯಕ್ಕಿದೆ. ಹೀಗಾಗಿ ಮುಂದಿನ ಪೀಳಿಗೆಯನ್ನು ಸಾಹಿತ್ಯದತ್ತ ಸೆಳೆಯುವ ಕಾರ್ಯವನ್ನು ಸಾಂಸ್ಕೃತಿಕ ಸಂಘಗಳು ಮಾಡಬೇಕಿದೆ. ಆ ನಿಟ್ಟಿನಲ್ಲಿ ಬಿ. ಎ. ಸನದಿ ಸಾಂಸ್ಕೃತಿಕ ಪ್ರತಿಷ್ಠಾನ ಬೆಳಗಾವಿ ಪರಿಸರದಲ್ಲಿ ಉತ್ತಮಕಾರ್ಯ ಮಾಡುತ್ತಿರುವುದು ಶ್ಲಾಘನೀಯ" ಎಂದು ಬೆಳಗಾವಿಯ ನಾಗನೂರುರು ದ್ರಾಕ್ಷಿ ಮಠದಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ಅಭಿಪ್ರಾಯ ಪಟ್ಟರು.

ನಗರದ ಕನ್ನಡ ಸಾಹಿತ್ಯ ಸಾಹಿತ್ಯ ಭವನದಲ್ಲಿ ಬಿ. ಎ. ಸನದಿ ಸಾಂಸ್ಕೃತಿಕ ಪ್ರತಿಷ್ಠಾನದ ವತಿಯಿಂದ ಜರುಗಿದ 68ನೇ ಕರ್ನಾಟಕ ರಾಜ್ಯೋತ್ಸವ ಹಾಗೂ ಕನ್ನಡಗಡಿ ತಿಲಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, "ನಾಡು-ನುಡಿ-ನೆಲ-ಜಲದ ವಿಷಯ ಬಂದಾಗ ಇಂದಿನ ರಾಜಕಾರಣಿಗಳು ಅಲಕ್ಷತೋರುತ್ತಿರುವುದು ವಿಷಾದನೀಯ ಸಂಗತಿಯಾಗಿದ್ದು, ರಾಜಕೀಯ ಅಧಿಕಾರಕ್ಕಾಗಿ ಸಮಾಜ ಸೇವೆಯ ಮುಖವಾಡತೊಟ್ಟಿದ್ದಾರೆ. ಅಂಥ ರಾಜಕಾರಣಿಗಳ ಕುರಿತು ಜನಜಾಗರುಕರಾಗಬೇಕು" ಎಂದರು.

2023 ನೇ ಸಾಲಿನ 'ಕನ್ನಡಗಡಿತಿಲಕ' ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಬೆಳಗಾವಿಯ ಹಿರಿಯಕನ್ನಡ ಹೋರಾಟಗಾರರಾದ ಅಶೋಕ ಚಂದರಾಗಿಅವರು, "ನಾಡು-ನುಡಿಯರಕ್ಷಣೆ ವಿಚಾರದಲ್ಲಿ ಸರ್ಕಾರವನ್ನು ಎಚ್ಚರಿಸುವಜವಾಬ್ದಾರಿ ಕೇವಲ ಕನ್ನಡ ಹೋರಾಟಗಾರರು ಮತ್ತು ಪತ್ರಕರ್ತರ ಕೆಲಸ ಮಾತ್ರವಲ್ಲ. ಸಾಹಿತಿಗಳ ಪಾತ್ರವೂ ಅಗತ್ಯವಾಗಿದೆ. ನಾಡು-ನುಡಿ-ನೆಲ-ಜಲಕ್ಕೆಧಕ್ಕೆ



ಬಂದಾಗ ಬೆರಳೆಣಿಕೆಯ ಸಾಹಿತಿಗಳು ಮಾತ್ರಧ್ವನಿ ಎತ್ತುತ್ತಿರುವುದು ಖೇದಕರ ಸಂಗತಿಯಾಗಿದ್ದು, ತಮ್ಮ ಸಾಮಾಜಿಕ ಜವಾಬ್ದಾರಿಯಿಂದ ನುಣುಚಿ ಕೊಳ್ಳಬಾರದು' ಎಂದಅವರು ಮುಂದುವರೆದು ಬೆಳಗಾವಿಯಲ್ಲಿ ರೂ 500 ಕೋಟಿ ವ್ಯಯಿಸಿ ಕಟ್ಟಿದ ಸುವರ್ಣ ವಿಧಾನಸೌಧಕ್ಕೆಗಡಿಗೆ ಸಂಬಂಧಿಸಿದ ಕಚೇರಿಗಳ ಸ್ಥಳಾಂತರಕ್ಕೆ ರಾಜ್ಯ ಸರ್ಕಾರಕ್ರಮ ವಹಿಸಬೇಕು. 'ಪ್ರಶಸ್ತಿಗಳು ತಾವಾಗಿಯೇ ಸಾಧಕರನ್ನು ಹುಡುಕಿಕೊಂಡು ಬಂದಾಗ ಪ್ರಶಸ್ತಿಯ ಹಾಗೂ ಪಡೆದವರ ಮೌಲ್ಯ ಹೆಚ್ಚಾಗುತ್ತದೆ. ಆ ನಿಟ್ಟಿನಲ್ಲಿ ಪ್ರತಿಷ್ಠಾನ ನೀಡಿದಗೌರವಕ್ಕೆ ಅಭಿನಂದನೆಸಲ್ಲಿಸಿದರು".

ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾ.ದಯಾನಂದ ನೂಲಿ ಅವರು ಮಾತನಾಡಿ," 'ಬಿ.ಎ.ಸನದಿ ತಮ್ಮಕಾವ್ಯದುದ್ದಕ್ಕೂ ಮಾನವೀಯ ಪ್ರೀತಿ, ಜೀವನಮೌಲ್ಯ ಪ್ರತಿಷ್ಠಾಪಿಸಿದ್ದಾರೆ. ಗಡಿನಾಡಿನಲ್ಲಿಉತ್ಕೃಷ್ಟದರ್ಜೆಯ ಸಾಹಿತ್ಯ ರಚಿಸಿದ್ದಾರೆ. ಅವರ ಹೆಸರಿನಲ್ಲಿ ಪ್ರತಿಷ್ಠಾನ ಅರ್ಥಪೂರ್ಣವಾಗಿಕಾರ್ಯ ಮಾಡುತ್ತಿದೆ' ಎಂದು ಶ್ಲಾಘಿಸಿದರು.

ಪ್ರತಿಷ್ಠಾನದ ಅಧ್ಯಕ್ಷ ಡಾ. ರಾಮಕೃಷ್ಣ ಮರಾಠೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರೊ.ಪಿ.ಜಿ.ಕೆಂಪಣ್ಣವರ ಅಭಿನಂದನಾ ನುಡಿಗಳನ್ನಾಡಿದರು. ಶಿಕ್ಷಣ ತಜ್ಞ ಪ್ರೊ.ಶಿವಶಂಕರ ಹಿರೇಮಠ ಪ್ರಶಸ್ತಿ ಪ್ರದಾನ ಮಾಡಿದರು.

ಕಾರ್ಯಕ್ರಮದಲ್ಲಿಬಿ.ಎಸ್. ಗವಿಮಠ, ಡಾ.ಎಚ್.ಬಿ. ರಾಜಶೇಖರ, ಆರ್.ಬಿ.ಕಟ್ಟಿ, ಪ್ರೊ.ಎಂ.ಎಸ್.ಇಂಚಲ, ಪ್ರೇಮಾ ತಹಶೀಲ್ದಾರ್, ಸುನಂದಾಎಮ್ಮಿ, ಶಂಕರ ಬಾಗೇವಾಡಿ, ಬಸವರಾಜಗಾರ್ಗಿ, ರಮಾಕಾಂತ ಬನಶಂಕರಿ, ಎಂ. ವೈ. ಮೆಣಸಿನಕಾಯಿ, ಮೈನೂದ್ದೀನ ಮಕಾನದಾರ, ಸಿದ್ದಣ್ಣ ಕುರುಬರ, ಶಿವಾನಂದ ತಲ್ಲೂರ, ಇತರರಿದ್ದರು.

ಆಶಾ ಯಮಕನಮರಡಿಅವರು ಹಾಡಿದ ನಾಡಗೀತೆಯೊಂದಿಗೆ ಆರಂಭದಲ್ಲಿ ಇತ್ತೀಚಿಗೆ ನಿಧನರಾದ ಚಿಂಚಣಿ ಮಠದ ಅಲ್ಲಮಪ್ರಭು ಶ್ರೀಗಳಿಗೆ ಶ್ರದ್ಧಾಂಜಲಿ ಅರ್ಪಿಸಲಾಯಿತು. ಪ್ರತಿಷ್ಠಾನದ ಉಪಾಧ್ಯಕ್ಷ ಎ.ಎ.ಸನದಿ ಸ್ವಾಗತಿಸಿದರು. ಸಿ. ಎಂ. ಬೂದಿಹಾಳ ನಿರೂಪಿಸಿದರು.ಅಕ್ಬರ ಸನದಿ ವಂದಿಸಿದರು.

## ಬಡತನ ರೇಖೆಗಿಂತ ಕೆಳಗಿರುವ ಸಾರ್ವಜನಿಕರಿಗೆ ವಿವಿಧ ಯೋಜನೆಗಳಡಿ ಸಹಾಯದಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2023-24 ನೇ ಸಾಲಿನಲ್ಲಿ "ದೀನದಯಾಳ್ ಅಂತ್ಯೋದಯ ಯೋಜನೆಯಡಿ" (ನಲ್ಮ್) ಪೀರನವಾಡಿ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ವಾಸಿಸುವ ಬಡತನ ರೇಖೆಗಿಂತ ಕೆಳಗ ಇರುವ ನಿರೋದ್ಯೋಗ ಅಭ್ಯರ್ಥಿಗಳಿಗೆ ವಿವಿಧ ಯೋಜನೆಗಳಡಿ ಸಹಾಯಧನ ನೀಡಲು ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ನಗರ ಸ್ವಯಂ ಉದ್ಯೋಗ ಕಾರ್ಯಕ್ರಮಯಡಿ ಕಿರು ಉದ್ಯಮ ಕೈಗೊಳ್ಳಲು ರಾಷ್ಟ್ರೀಕೃತ ಬ್ಯಾಂಕಿನಿಂದ 2 ರೂ ಲಕ್ಷ ವರೆಗೆ ಸಾಲ ಪಡೆದು ಉದ್ಯೋಗ ಕೈಗೊಳ್ಳುವುದು, ಹಾಗೂ ಯೊಜನೆಯಡಿ ಶೇ. 5 ರಷ್ಟು ಬಡ್ಡಿ ಸಹಾಯದನ ನೀಡಲಾಗುವುದು. ನಿಗದಿ ಪಡಿಸಿದ ಗುರಿ 15 ಆಗಿದು 18 ರಿಂದ 50 ವರ್ಷದೊಳಗೆ ಇರಬೇಕು.

**ಸ್ವ ಸಹಾಯ ಗುಂಪಗಳ ರಚನೆ:**

ನಗರ ಪ್ರದೇಶದಲ್ಲಿ ವಾಸಿಸುತ್ತಿರುವ ಬಡತನ ರೇಖೆಗಿಂತ ಕೆಳಗಿರುವ 10 ರಿಂದ 20 ಮಹಿಳೆಯರ ಗುಂಪು ರಚನೆ ಮಾಡುವುದು ಮತ್ತು ಗುಂಪು ಉದ್ಯೋಗಕ್ಕಾಗಿ ಅರ್ಜಿ ಸಲ್ಲಿಸಿ ರಾಷ್ಟ್ರೀಕೃತ ಬ್ಯಾಂಕುಗಳಿಂದ ಸಾಲ ಪಡೆದು ಉದ್ಯೋಗ ಕೈಗೊಳ್ಳುಬಹುದಾಗಿದೆ.

ಸಾಲದ ಮೊತ್ತ 2 ಲಕ್ಷ ರೂ ದಿಂದ ರೂ. 10 ಲಕ್ಷ ಗಳ ವರೆಗೆ ಯೋಜನೆಯಡಿ ಶೇ. 5 ರಷ್ಟು ಬಡ್ಡಿ ಸಹಾಯದನ ನೀಡಲಾಗುವುದು. ನಿಗದಿ ಪಡಿಸಿದ ಗುರಿ 10 ಆಗಿದು 18 ರಿಂದ 50 ವರ್ಷದೊಳಗೆ ಇರಬೇಕು.

**ಸ್ವ ಸಹಾಯ ಗಂಪುಗಳ ಲಿಂಕೇಜ ಯೋಜನೆ:**

ಸ್ವ ಸಹಾಯ ಗಂಪುಗಳ ಉಳಿತಾಯ ಮಾಡಿದ ಬ್ಯಾಂಕಿನಿಂದ ಸಾಲ ಪಡೆಯುವುದು ಹಾಗೂ ನಿಗದಿ ಪಡಿಸಿದ ಗುರಿ 5 ಆಗಿದು, 18 ರಿಂದ 50 ವರ್ಷದೊಳಗೆ ಇರಬೇಕು.

**ಬೀದಿ ಬದಿ ವ್ಯಾಪಾರಸ್ಥರ ಯೋಜನೆ:**

ಪಟ್ಟಣ ಪಂಚಯತಿ ಪೀರನವಾಡಿ ವ್ಯಾಪ್ತಿಯಡಿ ಬೀದಿ ಬದಿ ವ್ಯಾಪಾರ ಮಾಡುವ ವ್ಯಾಪಾರಸ್ಥರಿಗೆ ಗುರುತಿನ ಚೀಟಿ ನೀಡುವುದು ಕನಿಷ್ಟ 18 ರಿಂದ 50 ವರ್ಷದೊಳಗೆ ಇರಬೇಕು,

ನ.27 2023 ರೊಳಗಾಗಿ ನಗರಸಭೆಯ ಡೇ-ನಲ್ಮ ವಿಭಾಗಕ್ಕೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪಟ್ಟಣ ಪಂಚಾಯತಿ ಪೀರನವಾಡಿ ಕಾರ್ಯಾಲಯಕ್ಕೆ ಬೆಟ್ಟಿ ನೀಡಬಹುದಾಗಿದೆ ಎಂದು ಪೀರಣವಾಡಿ ಪಟ್ಟಣ ಪಂಚಾಯತಿ ಮುಖ್ಯಾಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂತರಾಷ್ಟ್ರಿಯ ದತ್ತು ಮಾಸಾಚರಣೆ

### ಮಗುವನ್ನು ಅನಧಿಕೃತವಾಗಿ ದತ್ತು ನೀಡುವುದು, ಪಡೆಯುವುದು ಶಿಕ್ಷಾರ್ಹ ಅಪರಾಧ

ಬೆಳಗಾವಿ: ನವೆಂಬರ್-2023ರ ಅಂತರಾಷ್ಟ್ರೀಯ ದತ್ತು ಮಾಸಾಚಾರಣೆ ಅಂಗವಾಗಿ ಮಕ್ಕಳಿಲ್ಲದವರು ಶಾಶ್ವತವಾಗಿ ಮಗುವಿನ ಹಕ್ಕು ಬಾಧ್ಯತೆಗಳೊಂದಿಗೆ ಮತ್ತು ಜವಾಬ್ದಾರಿಗಳನ್ನು ಕಾನೂನು ಬದ್ದವಾಗಿ ಪಡೆದುಕೊಳ್ಳುವುದೇ ದತ್ತು ಪ್ರಕ್ರಿಯೆಗೆ ಪರಿತ್ಯಕ್ತ, ಅನಾಥ, ಒಪ್ಪಿಸಲ್ಪಟ್ಟ ಮಕ್ಕಳು ಒಳಪಡುತ್ತಾರೆ.

ಮಕ್ಕಳ ಮಾರಾಟ ಶಿಕ್ಷಾರ್ಹ ಅಪರಾಧ, ಮಕ್ಕಳನ್ನು ಮಾರುವುದು ಅಥವಾ ಕೊಳ್ಳುವುದು ಮತ್ತು ಕಾನೂನು ಬಾಹಿರ ದತ್ತು ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವುದು ಕಾನೂನು ರೀತ್ಯಾ ಶಿಕ್ಷಾರ್ಹ ಅಪರಾಧ. ಕಾನೂನು ಬಾಹಿರವಾಗಿ ಮಕ್ಕಳನ್ನು ಮಾರುವವರಿಗೂ ಹಾಗೂ ಕೊಳ್ಳುವವರಿಗೂ ಬಾಲನ್ಯಾಯ ಕಾಯ್ದೆ 2015 ರ ಸೆಕ್ಸನ್ 81 ರನ್ವಯ 5 ವರ್ಷಗಳವರೆಗೆ ಸೆರೆಮನೆ ವಾಸದೊಂದಿಗೆ 1 ಲಕ್ಷ ದಂಡ ವಿಧಿಸಲಾಗುವುದು.

ಈ ಅಪರಾಧದಲ್ಲಿ ಯಾವುದೇ ಆಸ್ಪತ್ರೆ, ನರ್ಸಿಂಗ್, ಹೋಮಿನ ಅಥವಾ ಹೆರಿಗೆ ಕೇಂದ್ರದ ಸಿಬ್ಬಂದಿಯವರು ಶಾಮೀಲಾದರೆ ಮೂರು ವರ್ಷಗಳಿಗೆ ಕಡಿಮೆ ಇಲ್ಲದಂತೆ 7 ವರ್ಷಗಳವರೆಗೆ ವಿಸ್ತರಣೆಯಾಗುವುದು. ದತ್ತು ಪಡೆಯಲು ಇಚ್ಛಿಸುವ ದಂಪತಿಗಳು ಕೇಂದ್ರ ಸರ್ಕಾರದ ವೆಬ್ ಸೈಟ್ **www.cara.nic.in** ಗೆ ಸಂರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ವಿಶೇಷ ದತ್ತು ಕೇಂದ್ರ, ರಾಮತೀರ್ಥ ನಗರ, ಹಾಗೂ ಸ್ವಾಮಿ ವಿವೇಕಾನಂದ ದತ್ತು ಸ್ವೀಕಾರ ಕೇಂದ್ರ, ಸುಭಾಷ ನಗರ, ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸುವರ್ಣ ವಿಧಾನಸೌಧ ದೂ.ಸಂ : 0831-2474111 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಮಹಾಂತೇಶ ಭಜಂತ್ರಿ, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಬೆಳಗಾವಿ: 2023-24 ನೇ ಸಾಲಿನಲ್ಲಿ ಎಸ್.ಎಫ್. ಸಿ ಹಾಗೂ ಪಟ್ಟಣ ಪಂಚಾಯಿತಿಯ ಶೇ 24.10, 7.25 ಹಾಗೂ 5 ರಡಿ ಕಾಯ್ದಿರಿಸಿದ ಅನುದಾನದಲ್ಲಿ ವಿವಿಧ ಸೌಲಭ್ಯಗಳನ್ನು ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜಿಲ್ಲೆಯ ಮಚ್ಚೆ ಪಟ್ಟಣದ ವ್ಯಾಪ್ತಿಯಲ್ಲಿ ಬರುವಂತಹ ಅರ್ಹ ಫಲಾನುಭವಿಗಳು ನವೆಂಬರ್ 30, 2023 ಸಂಜೆ 5 ಗಂಟೆ ಒಳಗಾಗಿ ಅಗತ್ಯ ದಾಖಲೆಗಳೊಂದಿಗೆ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬಹುದು. ಅಪೂರ್ಣ ಹಾಗೂ ವಿಳಂಬವಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕಚೇರಿಯ ವೇಳೆಯಲ್ಲಿ ವಿಷಯನಿರ್ವಾಹಕರಿಗೆ ಸಂಪರ್ಕಿಸಬಹುದು ಹಾಗೂ ಪಟ್ಟಣ ಪಂಚಾಯಿತಿ ವೆಬ್ ಸೈಟ್ ವಿಳಾಸ ತಿತಿತಿ.ಟಚಿಛಿಛಿಜಣಂತಿಟ. ಟಡಿಛಿ.ರಂತ. ುಟ ಅಥವಾ ದೂರವಾಣಿ ಸಂಖ್ಯೆ 0831-2411494 ಈ ಸಂಪರ್ಕಿಸಬಹುದು. ಶೇ 24.10% ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಕಲ್ಯಾಣ ಕಾರ್ಯಕ್ರಮ: ಪ.ಜಾ ಮತ್ತು ಪ.ಪಂ ವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ ವಿಶೇಷ ಆರ್ಥಿಕ ನೆರವು ನೀಡಲಾಗುವುದು, ಪ.ಜಾ ಮತ್ತು ಪ.ಪಂ ಬಿಇ ಮತ್ತು ವೈದ್ಯಕೀಯ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ಖರೀದಿಸಿ ವಿತರಿಸಲಾಗುವುದು. ಶೇ 7.25% ಇತರ ಬಡ ಜನರ ಕಲ್ಯಾಣ ಕಾರ್ಯಕ್ರಮ: ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ಆರ್ಥಿಕ ಸಹಾಯ ನೀಡಲಾಗುವುದು. ಶೇ 5% ವಿಕಲಚೇತನರ ಕಲ್ಯಾಣ ಕಾರ್ಯಕ್ರಮ : ವಿಕಲಚೇತನರಿಗೆ ಜೀವ ವಿಮೆ ಅಥವಾ ಆರೋಗ್ಯ ವಿಮೆ ಮಾಡಿಸಲಾಗುವುದು. ಅನುದಾನ ಲಭ್ಯತೆ ಹಾಗೂ ಆದ್ಯತೆಯನ್ನು ಆಧಾರಿಸಿ ಅರ್ಹ ಫಲನುಭವಿಗಳನ್ನು ಆಯ್ಕೆ ಮಾಡಲಾಗುವುದು ಎಂದು ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೇಂದ್ರ ಕಾರಾಗೃಹದಲ್ಲಿ ನಿವಾಸಿಗಳಿಗಾಗಿ ವೈಜ್ಞಾನಿಕ ಕೋಳಿ ಸಾಕಾಣಿಕೆ ತರಬೇತಿ

ಬೆಳಗಾವಿ: ಕೇಂದ್ರ ಕಾರಾಗೃಹ ಬೆಳಗಾವಿಯಲ್ಲಿ ಕೈದಿಗಳಿಗಾಗಿ ದಿನಾಂಕ:16-11-2023 ರಿಂದ 18-11-2023 ರವರೆಗೆ ಮೂರು ದಿನಗಳ ವೈಜ್ಞಾನಿಕ ಕೋಳಿ ಸಾಕಾಣಿಕೆ ತರಬೇತಿ ಆಯೋಜಿಸಲಾಗಿತ್ತು ಸದರಿ ತರಬೇತಿಯು ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಬೆಳಗಾವಿ ಇವರ ಸಹಯೋಗದಲ್ಲಿ ಆಯೋಜಿಸಲಾಗಿತ್ತು.ದಿನಾಂಕ-18-11-2023 ರಂದು ತರಬೇತಿಯ ಸಮಾರೋಪ ಸಮಾರಂಭ ಜರುಗಿತು ಮುಖ್ಯ ಅತಿಥಿಗಳಾಗಿ ಮುಖ್ಯ ಪಶು ವೈದ್ಯಾಧಿಕಾರಿಗಳಾದ ಡಾ॥ ಅಶೋಕ ದುರಗನ್ನರ ಹಾಗೂ ಸಹಾಯಕ ನಿರ್ದೇಶಕರಾದ ಡಾ॥ ಈರಣ್ಣ ಕೋಲ್ಹಾರ ಆಗಮಿಸಿದ್ದರು. ಅಧ್ಯಕ್ಷತೆಯನ್ನು ಕಾರಾಗೃಹದ ಮುಖ್ಯ ಅಧೀಕ್ಷಕರಾದ ಶ್ರೀ ಕೃಷ್ಣಕುಮಾರ್ ವಹಿಸಿದ್ದರು.

ಕೈದಿಗಳಿಗೆ ಪ್ರಮಾಣ ಪತ್ರ ವಿತರಿಸಿ, ಡಾ॥ ಈರಣ್ಣ ಕೋಲ್ಹಾರ ಮಾತನಾಡಿ, ತರಬೇತಿಗಳು ನಿವಾಸಿಗಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುತ್ತವೆ ಹಾಗೂ ಒತ್ತಡದಿಂದ ಹೊರಬರಲು ಸಹಾಯ ಮಾಡುತ್ತವೆ. ತಾವು ಯಾರೂ ಹುಟ್ಟಿನಿಂದ ಅಪರಾಧಿಗಳಾಗಿರುವುದಿಲ್ಲ. ಜೀವನದಲ್ಲಿ ನಡೆದ ಆಕಸ್ಮಿಕ ಘಟನೆಯಿಂದಾಗಿ ಕಾರಾಗೃಹಕ್ಕೆ ಬಂದಿರುತ್ತೀರಿ. ಇಲ್ಲಿನ



ಸಮಯದ ಸದುಪಯೋಗ ಪಡೆದು ಇಂತಹ ತರಬೇತಿಗಳಲ್ಲಿ ಭಾಗವಹಿಸಿ ತಮ್ಮ ಜ್ಞಾನವನನ್ನು ಹೆಚ್ಚಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮ ಉದ್ದೇಶಿಸಿ ಡಾ॥ ಡಾ॥ ಅಶೋಕ ದುರಗನ್ನರ ಮಾತನಾಡಿ ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಬೆಳಗಾವಿ ವತಿಯಿಂದ ವಿವಿಧ ತರಬೇತಿಗಳನ್ನು ನೀಡಲಾಗಿದ್ದು ಈಗ ಕೋಳಿ ಸಾಕಾಣಿಕೆ ತರಬೇತಿಯು ಪೂರ್ಣಗೊಂಡಿದ್ದು ಈ ತರಬೇತಿಯಲ್ಲಿ ಪಡೆದ ಜ್ಞಾನದ ಸದುಪಯೋಗವಾಗಬೇಕು ಬಿಡುಗಡೆ ನಂತರ ಸಮಾಜದಲ್ಲಿ ತಮ್ಮ ಕುಟುಂಬದವರಿಗೆ ಹಾಗೂ ಇತರರಿಗೆ ಕೋಳಿ ಸಾಕಾಣಿಕೆಯ ಮಹತ್ವ ತಿಳಿಸಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶ್ರೀ ಕೃಷ್ಣಕುಮಾರ್, ಕಾರಾಗೃಹದ ಇಲಾಖೆಯು ಬಂದಿಗಳಿಗಾಗಿ ವಿವಿಧ ಕೌಶಲ್ಯ ಅಭಿವೃದ್ಧಿ ತರಬೇತಿಗಳನ್ನು ಆಯೋಜಿಸುತ್ತಿದ್ದು, ಬಿಡುಗಡೆ ನಂತರ ತಾವೆಲ್ಲ ಆರ್ಥಿಕವಾಗಿ ಸಬಲರಾಗಿ ಸ್ವಾವಲಂಬಿ ಜಿವನ ಸಾಗಿಸುವಂತೆ ಮಾಡುವುದೇ ಈ ತರಬೇತಿಯ ಮುಖ್ಯ ಉದ್ದೇಶ ಇಂದಿನ ಆದುನಿಕ ಜಗತ್ತಿನ ಮಾಂಸಾಹಾರಿಗಳ ಸಂಖ್ಯೆ ಅಧಿಕವಾಗುತ್ತಿದ್ದು ಮೊಟ್ಟೆ ಹಾಗೂ ಕೋಳಿ ಮಾಂಸಕ್ಕೆ ಬೇಡಿಕಡ ಹೆಚ್ಚಾಗಿದೆ ಹಾಗೂ ಕೋಳಿ ಸಾಕಾಣಿಕೆಯು ಉತ್ತಮ ಉದ್ಯಮವಾಗುತ್ತಲಿದೆ ಕಾರಣ ಈ ತರಬೇತಿಯು ಅತ್ಯಂತ ಉಪಯುಕ್ತವಾಗಿದೆ ಇಂತಹ ತರಬೇತಿ ಆಯೋಜಿಸಿದ ಪಶು ಸಂಗೋಪನಾ ಇಲಾಖೆಗೆ ಧನ್ಯವಾದಗಳನ್ನು ತಿಳಿಸಿದರು.

ಮೂರು ದಿನಗಳ ತರಬೇತಿಯಲ್ಲಿ ಡಾ॥ ವೆಂಕಟೇಶ ನಾಟೇಕರ, ಡಾ॥ ಮಹಾದೇವ ತೇಲಿ, ಶ್ರೀ ವಿಠ್ಠಲ ಸಗರೇಕರ ತರಬೇತಿಯ ಸಮಗ್ರ ಮಾಹಿತಿ ನೀಡಿದರು ತರಬೇತಿಯಲ್ಲಿ (60)ಅರವತ್ತು ಜನ ಕೈದಿಗಳು ಭಾಗವಹಿಸಿದ್ದರು. ಎಲ್ಲರಿಗೂ ಪ್ರಮಾಣ ಪತ್ರ ವಿತರಿಸಲಾಯಿತು. ಕೈದಿಗಳಾದ ಪಿ ಎಮ್ ಇಸೂಬ, ಹಾಸಿಮ್ ಅಲಿ ಹಾಗೂ ಮೋಜಸ ವಿನುಕೊಂಡ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

ವೇದಿಕೆಯಲ್ಲಿ ಜೈಲರ್ ಫಕೀರಪ್ಪ ದಂಡ್ಯೆನವರ, ಶಿಕ್ಷಕ ಎಸ ಎಸ್ ಯಾದಗೂಡೆ, ಹಾಗೂ ಪಶು ಪರಿಕ್ಷಕರಾದ ಶ್ರೀ ಮುಡಿರಾಜ ಹಿರೇಮಠ ಉಪಸ್ಥಿತರಿದ್ದರು. ಉಪಾದ್ಯಾಯರಾದ ಶ್ರೀ ಶಶಿಕಾಂತ ಕಾರ್ಯಕ್ರಮ ನಿರುಪಿಸಿ ಸ್ವಾಗತಿಸಿದರು.

## ಕಟ್ಟಡ ನಿರ್ಮಾಣ ಮುಕ್ತಾಯ ಪ್ರಮಾಣ ಪತ್ರ (ಸಿಸಿ) ಇಲ್ಲದೇ ನಳ ಸಂಪರ್ಕ ನೀಡುವಂತಿಲ್ಲ: ಅಶೋಕ ದುಡಗುಂಟಿ

ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಹೊಸ ನಳ ಸಂಪರ್ಕ ನೀಡಬೇಕಾದರೆ, ಮಹಾನಗರ ಪಾಲಿಕೆಯಿಂದ ನೀಡಲಾಗುವ ಕಟ್ಟಡ ನಿರ್ಮಾಣ ಮುಕ್ತಾಯ ಪ್ರಮಾಣಾ ಪತ್ರ (ಸಿಸಿ) ಇಲ್ಲದೇ ಹೊಸ ನಳ ಸಂಪರ್ಕವನ್ನು ನೀಡಬಾರದು ಎಂದು ಮೆ.ಎಲ್ & ಟಿ ಮತ್ತು ಕೆಯುಐಡಿಎಫ್‌ಸಿ ಅಧಿಕಾರಿಗಳಿಗೆ ತಾಕಿತು ಮಾಡಿ ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ ಅವರು ಇತ್ತೀಚೆಗೆ ನಡೆದ 24/7 ನಿರಂತರ ನೀರು ಸರಬರಾಜು ಯೋಜನೆಯ ಅಡಾಕ್ ಸಮಿತಿಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇತ್ತೀಚಿಗೆ ನಗರದಲ್ಲಿ ಬೇಕಾಬಿಟ್ಟಿ ನಳ ಸಂಪರ್ಕವಾಗುತ್ತಿರುವುದು ಮಹಾನಗರ ಪಾಲಿಕೆಯ ಗಮನಕ್ಕೆ ಬಂದಿದೆ ಹಾಗೂ ನಳ ಸಂಪರ್ಕ ನೀಡುವಲ್ಲಿ ವಿಳಂಬ ಪ್ರಕ್ರಿಯೆ, ಹಾಗೂ ಪಾರದರ್ಶಕತೆಯ ಕೊರತೆಯಿದೆ. ಇನ್ನು ಮುಂದೆ ಹೊಸ ನಳ ಸಂಪರ್ಕ ನೀಡುವಲ್ಲಿ ಸರಕಾರದ ಸುತ್ತೋಲೆ ಪ್ರಕಾರ ಹೊಸ ನಳ ಸಂಪರ್ಕ



ನೀಡಬೇಕು ಹಾಗೂ ಮಹಾನಗರ ಪಾಲಿಕೆ ನೀಡುವ ಕಟ್ಟಡ ನಿರ್ಮಾಣ ಮುಕ್ತಾಯ ಪ್ರಮಾಣ ಪತ್ರ (ಸಿಸಿ) ಇಲ್ಲದೇ ಹೊಸ ನಳ ಸಂಪರ್ಕ ನೀಡುವಂತಿಲ್ಲವೆಂದು ಹೇಳಿದರು.

ಪೋಲಿಸ ಇಲಾಖೆ ಸಹಾಯ ಆಯುಕ್ತರು ಆದ ಸ್ನೇಹಾ ಪಿ.ವಿ, ಅಧೀಕ್ಷಕ ಅಭಿಯಂತರರು ಅಧೀಕ್ಷಕ ಅಭಿಯಂತರರು ಹಾಗೂ ಟ್ರಾನ್ಸಿಟ್ ಕೋ ಆರ್ಡಿನೇಟರ್ 24/7 ಡಬ್ಲ್ಯೂ ಎಸ್ ಲಕ್ಷ್ಮಿ ಸುಳಗೇಕರ, ಅಧೀಕ್ಷಕ ಅಭಿಯಂತರರಾದ ಅಶೋಕ್ ಬುರಕುಲೆ, ಕಾರ್ಯನಿರ್ವಾಹಕ ಅಭಿಯಂತರರಾದ ವಿ.ಎಂ. ಸಾಲಿಮಠ, ಶಿರೂರ್, , ಸಾಮಾಜಿಕ ಅಭಿವೃದ್ಧಿ ವ್ಯವಸ್ಥಾಪಕರಾದ ಆಂಜನಪ್ಪ, ಮೇ ಎಲ್&ಟಿ ಹಾಗೂ ಸ್ಮೆಕ್ ಸಮಾಲೋಚಕರು, ಕಛೇರಿಯ ತಾಂತ್ರಿಕ ಮತ್ತು ಸಾಮಾಜಿಕ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಕನಿಷ್ಠ ಬೆಂಬಲ ಬೆಲೆ ಯೋಜನೆಡಿ ರೈತರಿಂದ ಭತ್ತ ಉತ್ಪನ್ನವನ್ನು ಖರೀದಿಸುವ ಕೇಂದ್ರಗಳ ಪ್ರಾರಂಭ

ಬೆಳಗಾವಿ: 2023-24ನೇ ಸಾಲಿಗೆ ಬೆಳಗಾವಿ ಜಿಲ್ಲೆಯ ರೈತರಿಂದ ಬೆಂಬಲ ಬೆಲೆ ಯೋಜನೆಯಡಿ ಬೆಳಗಾವಿ ಮತ್ತು ಖಾನಾಪೂರ ತಾಲೂಕಿನ ನಂದಗಡ ಇಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲಾಗುತ್ತಿದೆ.

ಭತ್ತ ಬೆಳೆಯುವ ಪ್ರದೇಶದ ರೈತರಿಗೆ ನವೆಂಬರ್ 15 ರಿಂದ ಡಿಸೆಂಬರ್ 31, 2023ರವರೆಗೆ ಕೃಷಿ ಇಲಾಖೆಯ "ಪ್ರೂಟ್ಸ್" ದತ್ತಾಂಶದಿಂದ ನೋಂದಣಿಯನ್ನು ಪ್ರಾರಂಭಿಸಲಾಗುತ್ತಿದೆ ಹಾಗೂ ಖರೀದಿ ಕೇಂದ್ರಗಳಲ್ಲಿ ಖರೀದಿ ಕಾಲಾವಧಿಯು ಡಿಸೆಂಬರ್ 01 2023 ರಿಂದ ಮಾರ್ಚ್ 31, 2024ರವರೆಗೆ ನಿಗದಿಪಡಿಸಿರುತ್ತದೆ. ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ಇವರಿಗೆ ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ಗುರುತಿಸಲಾಗಿದೆ. ಹಾಗೂ ಬೆಳಗಾವಿ ಜಿಲ್ಲೆಯಲ್ಲಿ ಪ್ರಧಾನ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ಬೆಳಗಾವಿಯ ವಿಭಾಗೀಯ ಕಾರ್ಯಾಲಯ ಇವರು ಖರೀದಿ ಪ್ರಕ್ರಿಯೆಯನ್ನು ಕೈಗೊಳ್ಳುವರು. ಪ್ರತಿ ರೈತರಿಂದ ಭತ್ತವನ್ನು ಪ್ರತಿ ಎಕರೆಗೆ 25 ಕ್ವಿಂಟಲ್ ರಂತೆ ಗರಿಷ್ಠ ಪ್ರಮಾಣ 40 ಕ್ವಿಂಟಲ್ ಮೀರದಂತೆ ಖರೀದಿ ಪ್ರಮಾಣ ನಿಗದಿಪಡಿಸಿದೆ.

ಭತ್ತ (ಸಾಮಾನ್ಯ) ಪ್ರತಿ ಕ್ವಿಂಟಲ್ ಗೆ ರೂ.2183 ರಂತೆ ಹಾಗೂ ಭತ್ತ (ಗ್ರೇಡ್-ಎ) ರೂ. 2203 ಪ್ರತಿ ಕ್ವಿಂಟಲ್‌ದಂತೆ ನಿಗದಿಪಡಿಸಿರುತ್ತದೆ. ಅದರ ಲಾಭವನ್ನು ರೈತರು ಪಡೆದುಕೊಳ್ಳಬಹುದು. ಖರೀದಿ ಕೇಂದ್ರಗಳ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ವಿಭಾಗೀಯ ಕಾರ್ಯಾಲಯದ ಪ್ರಧಾನ ವ್ಯವಸ್ಥಾಪಕರಾದ ಭಾಗ್ಯಲಕ್ಷ್ಮೀ ಮೊ. ಸಂ :8217777186, ಸಿ.ಎಂ. ಉಪಾಧ್ಯೆ ಮೊ ಸಂ: 7975322595 ಇವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಕೃಷಿ ಮಾರಾಟ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವ ಸಾಹಿತಿ ಜಹಗೀರದಾರಗೆ 'ಗುರುಕುಲ ವಿದ್ಯಾವಾಚಸ್ಪತಿ ಕವಿತಾ ಕೃಷ್ಣ ಪ್ರಶಸ್ತಿ'

ಹಂಪಿ: ಗುರುಕುಲ ಕಲಾ ಪ್ರತಿಷ್ಠಾನ (ರಿ) ಕೇಂದ್ರ ಸಮಿತಿ ತುಮಕೂರು ವತಿಯಿಂದ ಜಿಲ್ಲೆ ವತಿಯಿಂದ ದಿನಾಂಕ :18 ನವೆಂಬರ್ 2023 ರಂದು ಹೇಮಕೂಟ ಶೂನ್ಯ ಸಿಂಹಾಸನ ಶ್ರೀ ಜಗದ್ಗುರು ಕೊಟ್ಟೂರು ಸ್ವಾಮಿ ಸಂಸ್ಥಾನ ಮಠ ಹಂಪಿಯಲ್ಲಿ ನಡೆದ ಅಖಿಲ ಭಾರತ 3ನೇ ಗುರುಕುಲ ಮಹಾ ಸಮ್ಮೇಳನದಲ್ಲಿ ಯುವ ಸಾಹಿತಿ ಡಾ. ಬದರೀನಾಥ ಜಹಗೀರದಾರಗೆ ಸಾಹಿತ್ಯ ಕ್ಷೇತ್ರದಲ್ಲಿ ಸಲ್ಲಿಸುತ್ತಿರುವ ಸೇವೆಗಾಗಿ "ಗುರುಕುಲ ವಿದ್ಯಾವಾಚಸ್ಪತಿ ಕವಿತಾ ಕೃಷ್ಣ ಪ್ರಶಸ್ತಿ" ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದ ಉದ್ಘಾಟನೆಯನ್ನು ಶ್ರೀ ವಿದ್ಯಾರಣ್ಯ ಭಾರತಿ ಸ್ವಾಮೀಜಿ ಹೇಮಕೂಟ ಹಂಪಿ ನೆರವೇರಿಸಿ ಮಾತನಾಡಿ ಗುರುಕುಲ ಕಲಾ ಪ್ರತಿಷ್ಠಾನ ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿಯ ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಹಲವಾರು ಕಾರ್ಯಕ್ರಮ ರೂಪಿಸುವ ಮೂಲಕ ನಾಡಿನಲ್ಲಿ ಒಂದು ಬಗೆಯ ಸಂಚಲನ ಮೂಡಿಸುತ್ತಾ ಸಾಗಿದೆ. ಸಾಹಿತಿಕ ಕಾರ್ಯಕ್ರಮಗಳನ್ನು ಹಿಂದಿನಿಂದಲೂ ಅಚ್ಚುಕಟ್ಟಾಗಿ ನೆರವೇರಿಸಿಕೊಂಡು ಬಂದಿದೆ. ಇಂದಿನ ದಿನಮಾನದಲ್ಲಿ ಕಲೆ, ಸಾಹಿತ್ಯ, ಸಂಸ್ಕೃತಿಯನ್ನು ಪೋಷಿಸುವ




ಅನಿವಾರ್ಯತೆಯಿದೆ. ಯುವ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ಮೂಲಕ ಅವರ ಸಾಹಿತಿಕ ಬೆಳವಣಿಗೆಗೆ ಸಹಕಾರಿಯಾಗಿದೆ. ಹೀಗೆ ನಾಡಿನಾದ್ಯಂತ ಪರಿಷತ್ತು ತನ್ನ ಕಾರ್ಯಕ್ರಮವನ್ನು ವಿಸ್ತರಿಸಿಕೊಂಡು ಸಾಗಲಿ ಎಂದು ಹಾರೈಸಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಶ್ರೀ ಎಚ್. ಪಿ. ಕಲ್ಲಂಭಟ್, ಸಂಗೀತ ಭಾರತಿ ಹೊಸಪೇಟೆ ಅವರು ವಹಿಸಿ ಮಾತನಾಡಿ ಕನ್ನಡ ಸಂಘಟನೆಗಳು ನೆಲ ಜಲ ಭಾಷೆ ಉಳಿವಿಗಾಗಿ ಪ್ರಾಮಾಣಿಕ ಪ್ರಯತ್ನ ಮಾಡುತ್ತಿವೆ. ಕಲೆ,ಸಾಹಿತ್ಯ ತನ್ನದೇ ಆದ ವೈಶಿಷ್ಟತೆಯನ್ನು ಹೊಂದಿದೆ. ಇಂದು ಅಸಂಖ್ಯಾತ ಬರಹಗಾರರು ಪ್ರತಿ ವರ್ಷ ತಮ್ಮ ಬರವಣಿಗೆಯ ಮೂಲಕ ಸಾಹಿತ್ಯ ಸೇವೆ ಮಾಡುತ್ತಿದ್ದಾರೆ. ಅವರನ್ನು ಪ್ರೋತ್ಸಾಹಿಸಿ ಬೆಳೆಸುವ, ಸತ್ಕರಿಸುವ ಮುನ್ನಡೆಸುವ ಜವಾಬ್ದಾರಿಯನ್ನು ಕನ್ನಡ ಸಂಘ ಸಂಸ್ಥೆಗಳು ಮಾಡಿದರೆ ಕನ್ನಡದ ಕಂಪು ಪಸರಿಸಲು, ಸಾಹಿತ್ಯ ಕೃಷಿ ಹೆಚ್ಚಿಸಲು ನೇರವಾಗುತ್ತದೆ. ಸಾಧಕರನ್ನು ಗುರುತಿಸಿ ಗೌರವಿಸುವ ಜೊತೆಗೆ ಸಾಹಿತ್ಯ ಕೃತಿಗಳನ್ನು ಆಹ್ವಾನಿಸಿ ಪ್ರಶಸ್ತಿ ನೀಡುತ್ತಿರುವುದು ಬರಹಗಾರರಿಗೆ ಹುಮ್ಮಸ್ಸು ತುಂಬಿದಂತಾಗುತ್ತಿದೆ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಡಾ. ಎಂ. ಧರ್ಮನಗೌಡರು ಮಾತನಾಡಿ ಕಲೆ, ಸಾಹಿತ್ಯವನ್ನು ಸಂಭ್ರಮಿಸುವ, ಆಸ್ವಾದಿಸುವ ಇಂತಹ ಕಾರ್ಯಕ್ರಮಗಳು ಇಂದಿನ ದಿನಗಳಲ್ಲಿ ಬಹಳಷ್ಟು ಪ್ರಯೋಜನಕಾರಿ ಜೊತೆಗೆ ಮನೋಲ್ಲಾಸವನ್ನು ನೀಡುತ್ತವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಬಿ. ಜಿ. ಕನಕೇಶಮೂರ್ತಿ, ಹಿರಿಯ ಸಾಹಿತಿಗಳು ವಹಿಸಿ ಮಾತನಾಡಿ ಇಂದು ಬರಹಗಾರರು ವಾಸ್ತವಿಕ ನೆಲೆಗಟ್ಟಿನಲ್ಲಿ ಸಾಹಿತ್ಯ ರಚಿಸಿ ಆ ಮೂಲಕ ಸಮಾಜಕ್ಕೆ ಅರಿವು ಮೂಡಿಸುವ ಕಾರ್ಯ ಮಾಡಬೇಕಿದೆ. ಮೌಲ್ಯಗಳ ಉಳಿವಿಗಾಗಿ ಸದಾ ಜಾಗೃತಗೊಳ್ಳುವ ಪ್ರಮೇಯವಿದೆ. ಸತ್ವಭರಿತ ಸಮಾಜಕ್ಕೆ ಮಾನವೀಯತೆಯ ಸಂದೇಶ ನೀಡುವ, ಸಮಾಜವನ್ನು ಒಗ್ಗೂಡಿಸುವ, ಮನಸ್ಸುಗಳನ್ನು ಬೆಸೆಯುವ ಕಾರ್ಯವನ್ನು ಸಾಹಿತ್ಯ ಮತ್ತು ಸಂಘಟನೆಗಳು ನಡೆಸಿಕೊಂಡು ಬರಬೇಕಿದೆ. ಇಂದಿನ ಈ ಕಾರ್ಯಕ್ರಮವನ್ನು ಮನಃ ಪೂರ್ವಕವಾಗಿ ಶ್ಲಾಘಿಸುತ್ತೇನೆ. ಸಾಹಿತಿಗಳು, ಸಂಘಟಕರು, ಸಾಹಿತ್ಯಾಭಿಮಾನಿಗಳನ್ನು ಒಗ್ಗೂಡಿಸಿದ ಈ ಕಾರ್ಯಕ್ರಮ ಸಮಾಜಕ್ಕೆ ಆದರ್ಶವಾಗಿದೆ ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಕೊಟ್ಟೂರು ಸ್ವಾಮಿ ಮಠ ಹೊಸಪೇಟೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಶ್ರೀ ಎ. ಎನ್. ಸಿದ್ಧಾರ್ಥ ಸಿಂಗ್, ಶ್ರೀ ಹುಲಿಯೂರುದುರ್ಗ ಲಕ್ಷ್ಮೀನಾರಾಯಣ, ಶ್ರೀ ವೆಂಕಟೇಶ್ ಬಡಿಗೇರ್, ಡಾ. ಶಿವರಾಜ್ ಗೌಡ, ಡಾ. ಧರ್ಮನಗೌಡ, ಶ್ರೀ ವಿರೂಪಾಕ್ಷಯ್ಯ ಸ್ವಾಮಿ, ಗುರುಕುಲ ಕಲಾ ಪ್ರತಿಷ್ಠಾನದ ಸಂಸ್ಥಾಪಕ ಕಾರ್ಯಧ್ಯಕ್ಷರಾದ ಡಾ. ಶಿವರಾಜ್ ಗೌಡ, ಸಂಸ್ಥಾಪಕ ಅಧ್ಯಕ್ಷರಾದ ಶ್ರೀ ಹುಲಿಯೂರುದುರ್ಗ ಲಕ್ಷ್ಮೀನಾರಾಯಣ, ಜಿಲ್ಲಾಧ್ಯಕ್ಷರುಗಳು, ತಾಲೂಕಾ ಅಧ್ಯಕ್ಷರುಗಳು, ಕಾರ್ಯ ದರ್ಶಿಗಳು ಇನ್ನುಳಿದ ಎಲ್ಲ ಪದಾಧಿಕಾರಿಗಳು, ವಿವಿಧ ಭಾಗಗಳಿಂದ ಆಗಮಿಸಿದ್ದ ಸಾಹಿತಿಗಳು, ಸಾಹಿತ್ಯಾಸಕ್ತರು, ಕನ್ನಡ ಸಂಘಟಕರು, ಕಲಾವಿದರು ಉಪಸ್ಥಿತರಿದ್ದರು.

## ಕನ್ನಡಾಭಿಮಾನ ಬಡಿದೆಬ್ಬಿಸಿದವರು ಶಾಂತಕವಿ ಬಾಳಾಚಾರ್ಯ ಸಕ್ರಿ: ಡಾ.ರಾಮಕೃಷ್ಣ ಮರಾಠೆ

ಬೆಳಗಾವಿ: "ಮರಾಠಿ ಮಯವಾಗಿದ್ದ ಕರ್ನಾಟಕದಲ್ಲಿ ಕನ್ನಡದ ಅಭಿಮಾನ ಬಡಿದೆಬ್ಬಿಸಿದವರು ಶಾಂತಕವಿ ಶ್ರೀ ಬಾಳಾಚಾರ್ಯ ಸಕ್ರಿ ಅವರು, ಕರ್ನಾಟಕದಲ್ಲಿ ಪ್ರಪ್ರಥಮ ಕನ್ನಡ ನಾಟಕ ಉಷಾಹರಣ ಪ್ರದರ್ಶನ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತದೆ" ಎಂದು ಡಾ.ರಾಮಕೃಷ್ಣ ಮರಾಠೆ ಹೇಳಿದರು.

ಇಲ್ಲಿನ ಕನ್ನಡ ಸಾಹಿತ್ಯಭವನ ಆಯೋಜಿಸಿದ್ದ ರಂಗಸಂಪದ (ರಿ),




ಸಕ್ಕರಿ ಬಾಳಾಚಾರ್ಯ ಶಾಂತಕವಿ ಟ್ರಸ್ಟ್ (ರಿ), ಕನ್ನಡ ಸಾಹಿತ್ಯಭವನ ವಿಶ್ವಸ್ಥ ಇವರ ಸಂಯುಕ್ತ ಆಶ್ರಯದಲ್ಲಿ ಆಧುನಿಕ ಕನ್ನಡ ರಂಗಭೂಮಿ ದಿನ ಉದ್ದೇಶಿಸಿ ಅವರು ಮಾತನಾಡಿದರು.

ಕರ್ನಾಟಕದಲ್ಲಿ ರಂಗಭೂಮಿಯ ಎಲ್ಲ ಚಟುವಟಿಕೆಗಳು ಸಂಪೂರ್ಣ ಮರಾಠಿಯಲ್ಲಿಯೇ ನಡೆಯುತ್ತಿರುವ ಕಾಲದಲ್ಲಿ 1877 ನ.14 ರಂದು ಗದಗಿನಲ್ಲಿ ಶ್ರೀ ವೀರನಾರಾಯಣ ಕೃಪಾಪೋಷಿತ ಕೃತುಪುರ ಕರ್ನಾಟಕ ನಾಟಕ ಮಂಡಳಿ ಸ್ಥಾಪಿಸಿ ಕರ್ನಾಟಕದ ಪ್ರಪ್ರಥಮ ಕನ್ನಡ ನಾಟಕ ಉಷಾಹರಣ ಪ್ರದರ್ಶನ ಮಾಡಿದರು. ಅವತ್ತಿನಿಂದ ಕರ್ನಾಟಕದಲ್ಲಿ ಆಧುನಿಕ ರಂಗಭೂಮಿಯ ಉಗಮವಾಯಿತು, ಬಳಿಕ ಕನ್ನಡದಲ್ಲಿ ಕೀರ್ತನೆಗಳನ್ನು ಬರೆದು ಹಾಡಿದ ಉಗ್ರಭಾಷಾಭಿಮಾನ ಬೆಳೆಸಿದವರು ಎಂದರು.

ಹಿರಿಯ ನ್ಯಾಯವಾದಿ, ರಂಗಸಂಪದದ ಪೋಷಕ ಎಸ್ ಎಮ್ ಕುಲಕರ್ಣಿ ಅವರು ಮಾತನಾಡಿ, ಇವತ್ತಿನ ಬದಲಾದ ಭಾರತದಲ್ಲಿ ನಮ್ಮ ಸಂಸ್ಕೃತಿ ಮರೆಯಾಗುತ್ತಿದೆ. ಹಿರಿಯ ನಾಗರಿಕರ ಜೊತೆ ಕನ್ನಡ ರಂಗಭೂಮಿ, ಸಾಹಿತ್ಯ, ಸಂಗೀತ ಇತ್ಯಾದಿ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಬರುವವರ ಸಂಖ್ಯೆಯೂ ಅಳಿಸುತ್ತಿರುವದು ವಿಷಾದನೀಯ ಎಂದರು. ಹಿರಿಯರ ಜೊತೆಗೆ ಯುವಕರು ಮತ್ತು ಮಕ್ಕಳೂ ಸಹ ಇಂತಹ ಕಾರ್ಯಕ್ರಮಗಳಿಗೆ ಬರುವುದರಿಂದ ನಮ್ಮ ಸಂಸ್ಕೃತಿ ಉಳಿಯುವ ಬೆಳೆಯುವ ಅವಕಾಶ ಹೆಚ್ಚುವದು ಎಂದರು.

## ಅರ್ಜಿ ವಿಸ್ತರಣೆ

ಬೆಳಗಾವಿ: ಎಂ.ಫಿಲ್ ಮತ್ತು ಪಿಹೆಚ್‌ಡಿ ಫೆಲೋಶಿಪ್ ವ್ಯಾಸಗ ಮಾಡುತ್ತಿರುವ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳ ಹಿತದೃಷ್ಠಿಯಿಂದ ಹಾಗೂ ಹೆಚ್ಚಿನ ಸಂಖ್ಯೆಯ ಅರ್ಜಿಗಳನ್ನು ಸ್ವೀಕರಿಸುವ ಸದುದ್ದೇಶದಿಂದ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಲು ನ. 30.2023 ರವರೆಗೆ ವಿಸ್ತರಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುಳ್ಳುಸುದ್ದಿ, ಸಾಮಾಜಿಕ ಜಾಲತಾಣಗಳ ಮೇಲೆ ನಿಗಾವಹಿಸಲು ಗೃಹಸಚಿವ ಪರಮೇಶ್ವರ್ ಸೂಚನೆ

ಬೆಳಗಾವಿ: ಸಮಾಜದಲ್ಲಿ ಅಶಾಂತಿ ಮೂಡಿಸುವಂತಹ ಸುಳ್ಳುಸುದ್ದಿಗಳು, ಪ್ರಚೋದನಾಕಾರಿ ಹೇಳಿಕೆ ಅಥವಾ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಆಗಿರುವುದು ಕಂಡುಬಂದರೆ ತಕ್ಷಣವೇ ಕಾರ್ಯಪ್ರವೃತ್ತರಾಗಿ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಗೃಹಸಚಿವ ಜಿ.ಪರಮೇಶ್ವರ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಪೊಲೀಸ್ ಆಯುಕ್ತಾಲಯಕ್ಕೆ ಸೋಮವಾರ(ನ.20) ಭೇಟಿ ನೀಡಿದ ಅವರು, ಸಾಮಾಜಿಕ ಜಾಲತಾಣ ನಿಗಾ ಘಟಕ, ನಿಯಂತ್ರಣ ಕೊಠಡಿಗಳನ್ನು ಖುದ್ದಾಗಿ ವೀಕ್ಷಿಸಿ ಸಲಹೆ-ಸೂಚನೆಗಳನ್ನು ನೀಡಿದರು.

ಸಾಮಾಜಿಕ ಜಾಲತಾಣಗಳ ನಿಗಾ ಘಟಕಕ್ಕೆ ಭೇಟಿ ನೀಡಿದ ಅವರು, ಆಕ್ಷೇಪಾರ್ಹ ಮಾಹಿತಿ, ಸುಳ್ಳುಸುದ್ದಿಗಳು ಬಂದಾಗ ಯಾವ ರೀತಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಮಾಹಿತಿಯನ್ನು ಪಡೆದುಕೊಂಡರು.

ಸೂಕ್ತ ತಾಂತ್ರಿಕ ತರಬೇತಿ ಹೊಂದಿದ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ನಿಯೋಜಿಸಲು ಸೂಚನೆ ನೀಡಿದರು.

ಇದಾದ ಬಳಿಕ ನಗರ ನಿಯಂತ್ರಣ ಕೊಠಡಿಯನ್ನು ಹಾಗೂ ವೈರ್ ಲೆಸ್ ವಿಭಾಗದ ಕಾರ್ಯಚಟುವಟಿಕೆಗಳನ್ನು ಹಾಗೂ ದಾಖಲೆ ಕೊಠಡಿಯನ್ನು ಖುದ್ದಾಗಿ ವೀಕ್ಷಿಸಿದರು.

ನಿಯಂತ್ರಣ ಕೊಠಡಿಗೆ ಬರುವ ಕರೆಗಳು ಹಾಗೂ ಮಾಹಿತಿಯ ಲಾಗ್ ಪುಸ್ತಕವನ್ನು ಪರಿಶೀಲಿಸಿದರಲ್ಲದೇ ಪ್ರತಿಯೊಂದು ದಾಖಲೆಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ತಿಳಿಸಿದರು.

**ಸಂಚಾರ ನಿಯಮ ಉಲ್ಲಂಘನೆ ಕ್ರಮಕ್ಕೆ ನಿರ್ದೇಶನ:**

ಸಂಚಾರ ನಿಯಮ ಉಲ್ಲಂಘನೆ ಪ್ರಕರಣಕ್ಕೆ ಸಂಬಂಧಿಸಿದಂತೆ ದಂಡ ಕಟ್ಟಲು ಏಳು ದಿನಗಳ ಕಾಲಾವಕಾಶ ನೀಡಬೇಕು. ಇದಾದ ಬಳಿಕ ನ್ಯಾಯಾಲಯದಿಂದ ಸಮನ್ಸ್ ಹೋಗಬೇಕು; ದಂಡ ಕಟ್ಟದಿದ್ದರೆ ಅಥವಾ ನ್ಯಾಯಾಲಯಕ್ಕೆ



ಹಾಜರಾಗದಿದ್ದರೆ ವಾಹನ ಸೀಜ್ ಮಾಡಬೇಕು ಎಂದು ಗೃಹ ಸಚಿವ ಪರಮೇಶ್ವರ್ ನಿರ್ದೇಶನ ನೀಡಿದರು.

ಸಂಚಾರ ನಿಯಮ ಉಲ್ಲಂಘನೆ ದಂಡ ವಿಧಿಸುವ ವಿಧಾನ, ಚಲನ್ ಜನರೇಟ್ ಮಾಡುವ ವಿಧಾನವನ್ನು ಪರಿಶೀಲಿಸಿದರು.

**ಸಿಸಿಟಿವಿ ದೃಶ್ಯಾವಳಿ ವೀಕ್ಷಣೆ:**

ಬೆಳಗಾವಿ ನಗರದ ವಿವಿಧ ವೃತ್ತಗಳು ಹಾಗೂ ರಸ್ತೆಗಳಲ್ಲಿ ಅಳವಡಿಸಿರುವ ಸಿಸಿಟಿವಿ ಕ್ಯಾಮೆರಾ ದೃಶ್ಯಗಳನ್ನು ಗೃಹಸಚಿವ ಜಿ.ಪರಮೇಶ್ವರ ವೀಕ್ಷಿಸಿದರು.

ಸಿಸಿಟಿವಿ ಮೇಲೆ ನಿಗಾವಹಿಸಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಪ್ರತಿಯೊಂದು ಕ್ಯಾಮೆರಾ ಅಳವಡಿಸಿರುವ ವೃತ್ತ ಮತ್ತು ರಸ್ತೆ ಕುರಿತು ಸಂಪೂರ್ಣ ಮಾಹಿತಿ ಇರಬೇಕು.

ಇದಲ್ಲದೇ ಸ್ಮಾರ್ಟ್ ಸಿಟಿ ಯೋಜನೆಯಡಿ ಅಳವಡಿಸಿರುವ ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳ ಮೇಲೆ ಕೂಡ ನಿಗಾವಹಿಸಬೇಕು ಎಂದು ಸೂಚನೆ ನೀಡಿದರು.

ಪೊಲೀಸ್ ಆಯುಕ್ತರಾದ ಎಸ್.ಎನ್.ಸಿದ್ದರಾಮಪ್ಪ ಅವರು, ವಿವಿಧ ಘಟಕಗಳ ಕಾರ್ಯನಿರ್ವಹಣೆ ಕುರಿತು ವಿವರಿಸಿದರು.

ಸಾಮಾಜಿಕ ಜಾಲತಾಣ ನಿಗಾ ಘಟಕವು ಕ್ರಿಯಾಶೀಲವಾಗಿದ್ದು, ಪ್ರತಿಯೊಂದು ಚಟುವಟಿಕೆಗಳ ಮೇಲೆ ನಿಗಾವಹಿಸಲಾಗಿದೆ.

ಇತ್ತೀಚೆಗೆ ಪ್ರಕರಣಗಳನ್ನು ಕೂಡ ದಾಖಲಿಸಲಾಗಿದೆ ಎಂದರು.

ಇದಲ್ಲದೇ ಅಧಿವೇಶನ ಸಂದರ್ಭದಲ್ಲೂ ಯಾವುದೇ ರೀತಿಯ ಅಹಿತಕರ ಘಟನೆ ತಡೆಯಲು ಮುಂಜಾಗ್ರತಾ ಕ್ರಮವಾಗಿ ತೀವ್ರ ನಿಗಾ ವಹಿಸಲಾಗುತ್ತಿದೆ ಎಂದು ಪೊಲೀಸ್ ಆಯುಕ್ತರಾದ ಸಿದ್ದರಾಮಪ್ಪ ತಿಳಿಸಿದರು.

ನಗರದಲ್ಲಿ ಯಾವುದೇ ರೀತಿಯ ಆಕ್ಷೇಪಾರ್ಹ ಪೋಸ್ಟ್ ಗಳು, ಕೋಮುಭಾವನೆ ಕೆರಳಿಸುವ ಪೋಸ್ಟ್, ಪ್ರಚೋದಾತ್ಮಕ ಹೇಳಿಕೆ, ಘಟನೆಗಳು ಕಂಡುಬಂದರೆ ಕೂಡಲೇ ಐಟಿ ಕಾಯ್ದೆ ಪ್ರಕಾರ ಪ್ರಕರಣ ದಾಖಲಿಸಲಾಗುತ್ತಿದೆ ಎಂದು ಡಿಸಿಪಿ ರೋಹನ್ ಜಗದೀಶ್ ವಿವರಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ್ ಗುಳೇದ, ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯದ ಅಧೀಕ್ಷಕ ಡಾ.ರವೀಂದ್ರ ಗಡಾದಿ, ಬೆಳಗಾವಿ ನಗರ ಅಪರಾಧ ಹಾಗೂ ಸಂಚಾರ ವಿಭಾಗದ ಡಿಸಿಪಿ ಸ್ನೇಹಾ ಸೇರಿದಂತೆ ಪೊಲೀಸ್ ಆಯುಕ್ತಾಲಯದ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಧರ್ಮ ರಕ್ಷಣೆ ಮಾಡುವುದು ಪ್ರತಿಯೊಬ್ಬರ ಕರ್ತವ್ಯ: ಶ್ರೀ. ಪ್ರಸಂಗಸಾಗರ ಮುನಿ

ಬೆಳಗಾವಿ: ಇಂದಿನ ಯುಗದಲ್ಲಿ ಧರ್ಮವನ್ನು ಕಾಪಾಡಿ ಧರ್ಮವನ್ನು ಬೆಳೆಸುವ ಜೊತೆಗೆ ಧರ್ಮವನ್ನು ರಕ್ಷಣೆ ಮಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಜೈನ ಮುನಿ ಶ್ರೀ. 108 ಪ್ರಸಂಗಸಾಗರ ಮುನಿಗಳು ಹೇಳಿದರು.

ರವಿವಾರದಂದು ಬೆಳಗಾವಿ ಮಿಲೆನಿಯಂ ಗಾರ್ಡನ ಸಭಾಗೃಹದಲ್ಲಿ ಚಾತುರ್ಮಾಸ ವಿಸರ್ಜನೆ ಮತ್ತು ಪಿಂಛಿ ಪರಿವರ್ತನೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಆರ್ಶಿವಚನ ನೀಡಿದ ಮುನಿಗಳು ಇಂದು ಜೈನ ಧರ್ಮ ನಶಿಸಿ ಹೋಗುವ ಹಂತದಲ್ಲಿದೆ. ಧರ್ಮವನ್ನು ಕಾಪಾಡುವುದು ಮತ್ತು ಅದರ ರಕ್ಷಣೆ ಮಾಡುವುದು ಪ್ರತಿಯೊಬ್ಬ ಜೈನ ಧರ್ಮಿಯರ ಕರ್ತವ್ಯವಾಗಿದೆ ಎಂದು ಅವರು ಹೇಳಿದರು.

ಇಂದು ನಿಮ್ಮ ನಗರಗಳಿಗೆ ಮುನಿಗಳು ಬಂದರೆ ಅವರನ್ನು ಕಡೆಗೇಣಿಸಲಾಗುತ್ತದೆ. ಮುನಿಗಳು ಧರ್ಮ ಪ್ರಚಾರಕರಾದರೆ ಶ್ರಾವಕರು ಧರ್ಮ ರಕ್ಷಕರಾಗಿರುತ್ತಾರೆ. ನಗರಕ್ಕೆ ಬರುವ ಎಲ್ಲ




ಮುನಿಗಳ ಸೇವೆ ಮಾಡುವುದು ಸಹ ಧರ್ಮ ರಕ್ಷಣೆಯ ಒಂದು ಭಾಗವಾಗಿದೆ.

ಮುನಿಗಳು ಎಲ್ಲವನ್ನು ತ್ಯಾಗ ಮಾಡಿ ಧರ್ಮ ಪ್ರಚಾರದಲ್ಲಿ ನಿರತರಾಗಿತ್ತಾರೆ. ಅವರ ಧರ್ಮಕಾರ್ಯಕ್ಕೆ ಎಲ್ಲರೂ ಸಹಕರಿಸಬೇಕೆಂದು ಅವರು ಹೇಳಿದರು.

ಇಂದು ಜೈನ ಧರ್ಮ ವಿವಿಧ ಒಳಪಂಗಡದಲ್ಲಿ ಹಂಚಿ ಹೋಗಿದೆ. ಇದರಿಂದಾಗಿ ಧರ್ಮ ಬೆಳವಣಿಗೆ ಆಗುತ್ತಿಲ್ಲ. ಇಂದು ಜೈನ ಧರ್ಮ ಉಳಿಯಬೇಕಾದರೆ ಎಲ್ಲ ಒಳ ಪಂಗಡಗಳನ್ನು ಮರೆತು ನಾವೆಲ್ಲರೂ ಒಂದಾಗಿದ್ದರೆ ನಾವು ಧರ್ಮವನ್ನು ರಕ್ಷಿಸಬಹುದು ಎಂದು ಅವರು ತಿಳಿಸಿದರು,

ಸಮಾರಂಭ ವನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ಅಭಯ ಪಾಟೀಲ ಅವರು, ಶ್ರೀ.ಪ್ರಸಂಗಸಾಗರ ಮುನಿಗಳು ಕಳೆದ ಐದು ತಿಂಗಳಿನಿಂದ ಬೆಳಗಾವಿಯ ವಿವಿಧ ಬಸದಿಗಳಲ್ಲಿ ಚಾತುರ್ಮಾಸ ಆಚರಿಸುವ ಮೂಲಕ ಬೆಳಗಾವಿಯಲ್ಲಿ ವಿಶೇಷ ಧಾರ್ಮಿಕ ವಾತಾವರಣವನ್ನು ಸೃಷ್ಟಿಸಿದ್ದಾರೆ.

ಇದೇ ರೀತಿಯಲ್ಲಿ ಮುಂಬರುವ ದಿನಗಳಲ್ಲಿಯೂ ಸಹ ಬೆಳಗಾವಿಗೆ ಬರುವ ಮುನಿಗಳಿಗೆ ಸ್ವಾಗತ ಕೋರಿ ಧಾರ್ಮಿಕ ವಾತಾವರಣವನ್ನು ಮೂಡಿಸುವ ದಿಸೆಯಲ್ಲಿ ಎಲ್ಲ ಸಮಾಜ ಬಾಂಧವರು ಕಾರ್ಯತತ್ಪರಾಗಬೇಕೆಂದು ಅವರು ತಿಳಿಸಿದರು.

ಸಮಾರಂಭದ ವೇದಿಕೆ ಮೇಲೆ ಮಾಜಿ ಶಾಸಕ ಸಂಜಯ ಪಾಟೀಲ, ಉದ್ಯಮಿ ಭರತ ಪಾಟೀಲ, ಮನೋಜ ಸಂಚೇತಿ, ರಾಜೇಂದ್ರ ಜಕ್ಕನ್ನವರ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು. ಚಾತುರ್ಮಾಸ ಸಮಿತಿಯ ಅಧ್ಯಕ್ಷ ಹಿರಿಯ ನ್ಯಾಯವಾದಿ ರವಿರಾಜ ಪಾಟೀಲ ಅತಿಥಿಗಳನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಶ್ರೀ.ಗಳ ಚಾತುರ್ಮಾಸ ಯಶಸ್ವಿಗೆ ಸಹಕರಿಸಿದ ವಿವಿಧ ಬಸದಿಗಳ ಟ್ರಸ್ಟಿಗಳು, ಮಹಿಳಾ ಮಂಡಳಗಳನ್ನು, ಹಾಗೂ ಚಾತುರ್ಮಾಸ ಕಳಶ ಪಡೆದುಕೊಂಡವರನ್ನು ಸನ್ಮಾನಿಸಿ ಗೌರವಿಸಲಾಯಿತು.

# ವಿದ್ಯುತ್ ನಿಲುಗಡೆ

ಬೆಳಗಾವಿ: ಬೆಳಗಾವಿಯ 110 ಕೆ.ವ್ಹಿ ಕಣಬರ್ಗಿ ಉಪಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಕಾರ್ಯದ ಪ್ರಯುಕ್ತ ಸದರಿ ವಿದ್ಯುತ್ ಸ್ವೀಕರಣಾ ಕೇಂದ್ರದಿಂದ ವಿದ್ಯುತ ಸರಬರಾಜು ಆಗುವ ನಗರದ ಕಣಬರ್ಗಿ ವಿದ್ಯುತ್ ಉಪಕೇಂದ್ರದಿಂದ ಹೊರಡುವ ಪೂರಕಗಳ ಮೇಲೆ ಬರುವ ಪ್ರದೇಶಗಳಲ್ಲಿ ಮಂಗಳವಾರ ನವೆಂಬರ್ 21, 2023ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯ ವರೆಗೆ ವಿದ್ಯುತ್ ನಿಲುಗಡೆಯಾಗಲಿದೆ.

110 ಕೆ.ವ್ಹಿ ಕಣಬರ್ಗಿ ಉಪಕೇಂದ್ರದಿಂದ ವಿದ್ಯುತ್ ನಿಲುಗಡೆಯಾಗಲಿರುವ ಪ್ರದೇಶಗಳು:

ಎಫ್-2 ಎಕ್ಸಿಬಿಷನ್ ಸೆಂಟರ್: ಕೆ.ಆಯ್.ಎ.ಡಿ.ಬಿ ಆಟೋನಗರ 'ಇಂಡಸ್ಟ್ರೀಯಲ್ಏರಿಯಾ,ಕೆ.ಎಸ್.ಐ.ಡಿ.ಬಿ. ಇಂಡಸ್ಟ್ರಿಯಲ್ಏರಿಯಾ ಕೈಗಾರಿಕಾ ಗ್ರಾಹಕರು(ಸಿದ್ದೇಶ್ವರ ಪೌಂಡ್ರಿಸ್, ಟಾಟಾ ಫಾವರ್, ಬರಪ್ಪಾಲ,ಆಶಿಯಾನ ಇಂಡಸ್ಟ್ರೀಯಲ್, ಕೆ.ಆಯ್.ಎ.ಡಿ.ಬಿ ಎಕ್ಸಿಬಿಷನ್ ಸೆಂಟರ್, ಕೆ.ಎಸ್.ಆರ್ಟಿ.ಸಿ. ಡಿಪೋ, ಪೊಲುಶನ್ಸೇಂಟ್ರಲ್ರ, ಯಾದವ ಇಂಡಸ್ಟ್ರೀ.

ಎಫ್-9 ಆಯುರ್ವೇದ ಕಾಲೇಜ್: ಕೆ.ಆಯ್.ಎ.ಡಿ.ಬಿ,ಆಟೋನಗರ ಇಂಡಸ್ಟ್ರೀಯಲ್ ಏರಿಯಾ.

ಎಫ್-3 ಕಣಬರ್ಗಿ: ಕಣಬರ್ಗಿ ನಗರ, ಕೆ.ಹೆಚ್.ಬಿ.ಕಾಲನಿ, ಅಂಬೇಡ್ಕರ ಕಾಲನಿ ಏರಿಯಾ, ಸಾಯಿ ಕಾಲೋನಿ ಸಾಗರ ನಗರ, ಎಫ್-8 ಯಮನಾಪುರ: ಕಾಕತಿ, ಮುತ್ಯಾನಟ್ಟಿ, ಬಸವನಕೊಳ್ಳ ನೀರು ಸರಬರಾಜು ಏರಿಯಾ. ಎಫ್-4 ರಾಮತೀರ್ಥ ನಗರ: ಕೆ ರಾಮತೀರ್ಥ ನಗರ, ಸ್ಕಿಂಮ್ ನಂ.35,4343ಎ, ಗಣೇಶ ಸರ್ಕಲದಿಂದ ಪ್ರತೀಕ್ಷಾ ಹೊಡೇಲ್ವರೆಗೂ ಮತ್ತು ಸ್ಟೇಟ ಬ್ಯಾಂಕ್ ಮೈಸೂರು ಏರಿಯಾ.

ಎಫ್-5 ಶಿವಾಲಯ: ಶಿವಾಲಯ ಎದುರಗಡೆ ಲೈನ್&ಶಿವಾಲಯ ಹಿಂದಗಡೆ ಲೈನ್, ಶೃತಿ ಲೇಔಟ್, ಸುರಭಿ ಹೊಟೇಲ್ ಲೈನ್, ಆಶ್ರಯ ಕಾಲೊನಿ ಲೈನ್, ಕುಲಕರ್ಣಿ ಲೇಔಟ್, ಸೆಕ್ಟರ್ ನಂ.8 & 9 ಏರಿಯಾ.

33ಕೆ.ವ್ಹಿ ಕಾಕತಿ: ಮ್ಯಾರಿಯೋಟ್ ಹೋಟೆಲ್ ಸದರಿ ಸ್ಥಳಗಳಲ್ಲಿ ವಿದ್ಯುತ್ ನೆಲಗಡೆಯಾಗಲಿದೆ ಎಂದು ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾನಪದ ಸಾಂಸ್ಕೃತಿಕ ಉತ್ಸವದ "ಸರ್ವಾಧ್ಯಕ್ಷರಿಗೆ ವಿದ್ಯುಕ್ತ ಆಹ್ವಾನ"

ಬೆಳಗಾವಿ: ತಾಲೂಕಿನ ಹೊಸ ಇದ್ದಲುಹೊಂಡ(ಶಿವಾಪುರ) ಗ್ರಾಮದಲ್ಲಿ ರವಿವಾರ ದಿ:26 ರಂದು ನಡೆಯಲಿರುವ, "ಜಾನಪದ ಸಾಂಸ್ಕೃತಿಕ ಉತ್ಸವದ" ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ದಿಟ್ಟ ಕನ್ನಡ ಹೋರಾಟಗಾರ್ತಿ ಶ್ರೀಮತಿ ಕಸ್ತೂರಿ ಬಾವಿ ಇವರಿಗೆ ನಗರದ ಕನ್ನಡ ಭವನದಲ್ಲಿ ವಿದ್ಯುಕ್ತವಾಗಿ ಆಹ್ವಾನ ನೀಡಲಾಯಿತು. ಕಾರ್ಯಕ್ರಮದಲ್ಲಿ ಬೆಳಗಾವಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷೆ ಶ್ರೀಮತಿ. ಮಂಗಲಾ ಮೆಟಗುಡ್ಡ ಮಾತನಾಡಿ ಜಿಲ್ಲೆಯಲ್ಲಿ ಕನ್ನಡಕ್ಕಾಗಿ ಹೋರಾಡುತ್ತ ಕನ್ನಡ ಭಾಷೆಯ ಸಲುವಾಗಿ ತಮ್ಮ ಜೀವನವನ್ನು ಮುಡುಪಾಗಿಟ್ಟಿರುವ ಶ್ರೀಮತಿ. ಕಸ್ತೂರಿ ಬಾವಿ ಇವರು ಜಾನಪದ ಸಾಂಸ್ಕೃತಿಕ ಉತ್ಸವದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವುದು ಅತ್ಯಂತ ಸೂಕ್ತವಾಗಿದೆ ಎಂದರು. ಬೆಳಗಾವಿ ತಾಲೂಕಿನ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಸುರೇಶ ಹಂಜಿ, ಜಿಲ್ಲಾ ಕಾರ್ಯದರ್ಶಿ ಎಂ ವೈ ಮೆಣಸಿನಕಾಯಿ, ವಿವಿಧ ತಾಲೂಕಾ ಕಸಾಪ ಅಧ್ಯಕ್ಷರುಗಳಾದ ಶ್ರೀಮತಿ. ಭಾರತಿ ಮದಬಾವಿ, ಡಾ.ಸಂಜಯ ಸಿಂದಿಹಟ್ಟಿ, ಶ್ರೀ ಈರಣ್ಣ ಶಿರಗಾವಿ, ಶ್ರೀ ಬಸವಪ್ರಭು ಹಿರೇಮಠ, ಶ್ರೀ ಪ್ರಕಾಶ ಅವಲಕ್ಕಿ, ಡಾ.ಎಸ್.ಬಿ.ದಳವಾಯಿ, ಶ್ರೀ ರವೀಂದ್ರ ಪಾಟೀಲ, ಶ್ರೀ ಪಾಂಡುರಂಗ ಜಟಗನ್ನವರ, ಶ್ರೀ ಎನ್. ಆರ್.ಠಕ್ಕಾಯಿ, ಮಹಿಳಾ ಪ್ರತಿನಿಧಿ ಶ್ರೀಮತಿ ಪ್ರತಿಭಾ ಕಳ್ಳಿಮಠ, ಶ್ರೀ ಚೇತನ ಏಣಗಿಮಠ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಲೋಕಸಭಾ ಚುನಾವಣೆಗೂ ಮುನ್ನ ಬೆಂಗಳೂರಿನಲ್ಲಿ ಅಖಿಲ ಭಾರತ ರೆಡ್ಡಿ ಸಮಾವೇಶ

ಬೆಂಗಳೂರು: ರೆಡ್ಡಿ ಸಮುದಾಯದ ಹಲವು ಬೇಡಿಕೆಗಳನ್ನು ಹಿಂದಿನ ಕಾಂಗ್ರೆಸ್ ಸರ್ಕಾರ ಈಡೇರಿಸಿದ್ದು, ರೆಡ್ಡಿ ಜನಾಂಗದ ಸಮಗ್ರ ಶ್ರೇಯೋಭಿವೃದ್ಧಿಗೆ ಹಾಲಿ ಸರ್ಕಾರ ಬದ್ಧವಾಗಿದೆ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಲಿಂಗಾ ರೆಡ್ಡಿ ಹೇಳಿದ್ದಾರೆ.

ಕೋರಮಂಗಲದ ಕರ್ನಾಟಕ ರೆಡ್ಡಿ ಜನಸಂಘ ಆವರಣದಲ್ಲಿ ಮುಂಬರುವ ಲೋಕಸಭಾ ಚುನಾವಣೆಗೂ ಮುನ್ನ ಅಂದರೆ ಬರುವ ವರ್ಷದ ಫೆಬ್ರವರಿಯಲ್ಲಿ ನಡೆಯಲಿರುವ "ಅಖಿಲ ಭಾರತ ರೆಡ್ಡಿ ಸಮಾವೇಶದ ಪೂರ್ವಭಾವಿ ಸಭೆ"ಯಲ್ಲಿ ಮಾತನಾಡಿದ ಅವರು, ಹಿಂದೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರು ವೇಮನ ಮತ್ತು ಹೇಮರೆಡ್ಡಿ ಮಲ್ಲಮ್ಮ ಜಯಂತಿ ಹಾಗೂ ಅಧ್ಯಯನ ಪೀಠಗಳ ಸ್ಥಾಪನೆಗೆ ಅನುಮೋದನೆ ನೀಡಿದ್ದರು.

ಪ್ರಥಮ ಮುಖ್ಯಮಂತ್ರಿ ಕೆ.ಸಿ. ರೆಡ್ಡಿ ಪ್ರತಿಮೆ ವಿಧಾನಸೌಧ ಆವರಣದಲ್ಲಿ ಸ್ಥಾಪಿಸಿ ಪ್ರಮುಖ 8 ಬೇಡಿಕೆಗಳಲ್ಲಿ 6 ಬೇಡಿಕೆಗಳನ್ನು ಈಡೇರಿಸಲಾಗಿದೆ.

ರಾಷ್ಟ್ರಮಟ್ಟದ ಸಮಾವೇಶದಲ್ಲಿ ರೆಡ್ಡಿ ಜನಾಂಗದ ಉಳಿದ




ಬೇಡಿಕೆಗಳ ಈಡೇರಿಕೆಗಾಗಿ ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ವೇಮನಾನಂದ ಸ್ವಾಮೀಜಿ ಮಾತನಾಡಿ, ರಾಷ್ಟ್ರಮಟ್ಟದ ಸಮಾವೇಶ ಯಶಸ್ಸಿಗೆ ಪ್ರತಿಯೊಬ್ಬರು ಸಹಕಾರ ನೀಡಬೇಕು. ರೆಡ್ಡಿ ಜನಾಂಗದ ಶಕ್ತಿ ಮತ್ತು ಸಾಮರ್ಥ್ಯವನ್ನು ದೇಶಕ್ಕೆ ತೋರಿಸಲು ಇದು ಉತ್ತಮ ಅವಕಾಶವಾಗಿದೆ. ಅಖಿಲ ಭಾರತ ರೆಡ್ಡಿ ಫೆಡರೇಷನ್ ಸ್ಥಾಪನೆ ಮಾಡುವ ಮೂಲಕ ನಮ್ಮ ಜನಾಂಗ ಮತ್ತಷ್ಟು ಸಂಘಟಿತರಾಗಲು ಇದು ಸಕಾಲ. ಎಂದು ಹೇಳಿದರು.

ಕರ್ನಾಟಕ ರೆಡ್ಡಿ ಜನಸಂಘದ ರಾಜ್ಯಾಧ್ಯಕ್ಷ ಎಸ್. ಜಯರಾಮರೆಡ್ಡಿ ಮಾತನಾಡಿ, ರಾಷ್ಟ್ರಮಟ್ಟದ ಸಮಾವೇಶದ ರೂಪರೇಷೆಗಳನ್ನು ಸಿದ್ಧಪಡಿಸುವ ಸಭೆಗೆ ತಮಿಳುನಾಡು, ಕೇರಳ, ಪುದುಚೇರಿ, ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ, ಒಡಿಶಾದಿಂದ ಸಮುದಾಯದ ಮುಖಂಡರು ಆಗಮಿಸಿದ್ದು, ಇದು ಶುಭ ಸೂಚನೆಯಾಗಿದೆ.

ಎಲ್ಲಾ ಕ್ಷೇತ್ರಗಳಲ್ಲಿ ರೆಡ್ಡಿ ಜನಾಂಗವನ್ನು ಮಂಚೂಣಿಗೆ ತರುವುದು ತಮ್ಮ ಪರಮಗುರಿಯಾಗಿದೆ. ಇದೇ ಉದ್ದೇಶಕ್ಕಾಗಿ ರಾಷ್ಟ್ರಮಟ್ಟದ ಸಮಾವೇಶ ಆಯೋಜಿಸಲಾಗುತ್ತಿದೆ ಎಂದರು.

ಪೂರ್ವಭಾವಿ ಸಭೆಯಲ್ಲಿ ಸಂಘದ ಉಪಾಧ್ಯಕ್ಷರಾದ ವಿ. ವೆಂಕಟಶಿವಾ ರೆಡ್ಡಿ, ಕೆ.ಎನ್. ಕೃಷ್ಣಾ ರೆಡ್ಡಿ, ಪ್ರಧಾನ ಕಾರ್ಯದರ್ಶಿ ಪ್ರೊ.ಪಿ. ಸದಾಶಿವ ರೆಡ್ಡಿ, ಮತ್ತಿತರರು ಉಪಸ್ಥಿತರಿದ್ದರು.

# ಗ್ರಾಮೀಣ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ವಿಶೇಷ ಯೋಜನೆ: ಭರವಸೆ

ಬೆಳಗಾವಿ : ಬೆಳಗಾವಿ ಗ್ರಾಮೀಣ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಮುಂದಿನ ದಿನಗಳಲ್ಲಿ ವಿಶೇಷ ಯೋಜನೆಯನ್ನು ತರಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಭರವಸೆ ನೀಡಿದ್ದಾರೆ.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಅಂಬೇವಾಡಿ ಗ್ರಾಮದ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿ ಪ್ರತಿಷ್ಠಾಪನೆಯ ಕಾಲಂ ಪೂಜೆಯನ್ನು ಭಾನುವಾರ ನೆರವೇರಿಸಿ ಅವರು ಮಾತನಾಡಿದರು. ನಾನು ಶಾಸಕಿಯಾಗಿದ್ದ ಅವಧಿಯಲ್ಲಿ ಕ್ಷೇತ್ರಕ್ಕಾಗಿ 1,800 ಕೋಟಿ ರೂ.ಗಳನ್ನು ತಂದು ಅಭಿವೃದ್ಧಿ ಕಾರ್ಯಗಳನ್ನು ಮಾಡಿಸಿದ್ದೇನೆ. 5 ವರ್ಷ ನಿರಂತರವಾಗಿ ಕ್ಷೇತ್ರದ ಮೂಲಭೂತ ಅವಶ್ಯಕತೆಗಳನ್ನು ಪೂರೈಸುವ ಕೆಲಸ ಮಾಡಿದ್ದೇನೆ. ಆಗ ಕೊರೋನಾ, ಪ್ರವಾಹಗಳಿಂದಾಗಿ ಒಂದಿಷ್ಟು ಸಮಸ್ಯೆಯಾಯಿತು. ಆದಾಗ್ಯ ಅಭಿವೃದ್ಧಿಯನ್ನು ಮಾತ್ರ ನಿಲ್ಲಿಸಲಿಲ್ಲ. ಹಾಗಾಗಿಯೇ ಕಳೆದ ಚುನಾವಣೆಯಲ್ಲಿ ನನ್ನನ್ನು ಹಿಂದಿನ ಬಾರಿಗಿಂತ ಹೆಚ್ಚು ಮತಗಳಿಂದ ಗೆಲ್ಲಿಸಿದ್ದೀರಿ. ಇದು ಇನ್ನಷ್ಟು ಕೆಲಸ ಮಾಡಲು ನನಗೆ ಹುಮ್ಮಸ್ಸು ನೀಡಿದೆ. ಅಭಿವೃದ್ಧಿ ಕೆಲಸಗಳ ಮೂಲಕವೇ ನಿಮ್ಮ ಋಣ ತೀರಿಸುತ್ತೇನೆ ಎಂದು ಸಚಿವರು ತಿಳಿಸಿದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಯುವರಾಜ ಕದಂ, ಶಿವಾಜಿರಾವ್ ಅತವಾಡ್ಕರ್, ಯುವ ಕಾಂಗ್ರೆಸ್ ಮುಖಂಡ ಮೃಣಾಲ್ ಹೆಬ್ಬಾಳಕರ್, ಗ್ರಾಮ



ಪಂ. ಅಧ್ಯಕ್ಷೆ ಲಕ್ಷ್ಮೀ ಯಳ್ಳೂರಕರ್, ಮಧುರಾ ತೇರಸೆ, ಸುರೇಶರಾವ್ ರೇಡೆಕರ್, ಕಿಶೋರ್ ಕಾಕಡೆ, ಸಂಜಯ ತೆರಳೆ, ಅಮೂಲ್ ಬಾತ್ಕಂಡೆ, ಬಾಹು ತುಡವೇಕರ್, ರಾಜು ಕೊಚೆರೆ, ಸಂಗೀತಾ ಅಂಬೇಕರ್, ನಾಗೇಶ್ ತೆರಳೆ, ಅಗಸೆಕರ್ ಸರ್, ಅನಂತ ತುಡವೇಕರ್, ಯಲ್ಲಪ್ಪ ಚಿಕ್ಕಲಕರ್, ಬಾಳಕೃಷ್ಣ ತೇರಸೆ, ಮನೋಹರ್ ಬೆಳಗಾಂವ್ಕರ್, ರವೀಂದ್ರ ತೆರಳೆ, ಯಲ್ಲಪ್ಪ ಲೋಹಾರ್ ಹಾಗೂ ಗ್ರಾಮ ಪಂಚಾಯತಿಯ ಸರ್ವ ಸದಸ್ಯರು ಉಪಸ್ಥಿತರಿದ್ದರು.

# ಸಹಕಾರಿ ಸಂಸ್ಥೆಗಳ ಸೇವೆ ಅನನ್ಯ: ಸಿಪಿಐ ಕಲ್ಯಾಣಶೆಟ್ಟಿ

ಹುಕ್ಕೇರಿ : ಬಡ ಹಾಗೂ ಮಧ್ಯಮ ವರ್ಗದ ಜನರ ಆರ್ಥಿಕ ಸದೃಢತೆಗೆ ಸಹಕಾರಿ ಸಂಘ-ಸಂಸ್ಥೆಗಳು ಸಲ್ಲಿಸುತ್ತಿರುವ ಸೇವೆ ಅನನ್ಯವಾಗಿದೆ ಎಂದು ಸಿಪಿಐ ಗುರುರಾಜ ಕಲ್ಯಾಣಶೆಟ್ಟಿ ಹೇಳಿದರು.

ಪಟ್ಟಣದ ಪ್ರತಿಷ್ಠಿತ ಮಹಾವೀರ ಮಲ್ಟಿಪರಪಜ್ ಸೌಹಾರ್ದ ಸಹಕಾರಿ ಸಂಘದ ನೂತನ 16ನೇ ಶಾಖೆಯನ್ನು ಬೆಳಗಾವಿ ನಗರದ ಅನಗೋಳ ರಘುನಾಥ ಪೇಟನ ಹನುಮನ್ನವರ ಗಲ್ಲಿಯಲ್ಲಿ ರವಿವಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಹಾವೀರ ಸಹಕಾರಿಯ ಕಾರ್ಯವ್ಯಾಪ್ತಿ ವಿಸ್ತರಿಸಿ ಎಲ್ಲ ಜನರಿಗೂ ಅನುಕೂಲವಾಗುವ ದಿಸೆಯಲ್ಲಿ ಹೊಸ ಶಾಖೆ ಆರಂಭಿಸಲಾಗುತ್ತಿದೆ. ಇದರಿಂದ ಈ ಭಾಗದಲ್ಲಿ ಎಲ್ಲ ವರ್ಗದ ಜನರಿಗೂ ನೆರವಾಗುವ ಉದ್ದೇಶ ಹೊಂದಲಾಗಿದೆ. ಸಹಕಾರಿ ಸಂಸ್ಥೆಗಳ ಸೇವೆ ಸ್ತುತ್ಯಾರ್ಹವಾಗಿದೆ ಎಂದು ಅವರು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಮಹಾವೀರ ನಿಲಜಗಿ ಮಾತನಾಡಿ, ಕಳೆದ ಎರಡು ದಶಕಕ್ಕೂ ಹೆಚ್ಚು ಕಾಲ ಬೆಳಗಾವಿ, ಧಾರವಾಡ, ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ಸಹಕಾರಿಯೂ ಜನರಿಗೆ ಅನೇಕ ರೀತಿಯಲ್ಲಿ ನೆರವಾಗಿದೆ. ಈಗಾಗಲೇ ಈ ಬ್ಯಾಂಕ್ ಪ್ರಧಾನ ಕಛೇರಿ



ಸೇರಿ 15 ಶಾಖೆಗಳನ್ನು ಹೊಂದಿದ್ದು ನೂರಾರು ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಒದಗಿಸಿದೆ ಎಂದರು.

ರೀಡ್ಸ್ ಸಂಸ್ಥೆ ಅಧ್ಯಕ್ಷ ಅಶೋಕ ಪಾಟೀಲ, ಸಂಜಯ ನಿಲಜಗಿ, ಉಪಾಧ್ಯಕ್ಷ ಕಿರಣ ಸೊಲ್ಲಾಪುರೆ, ನಿರ್ದೇಶಕರಾದ ಬಾಹುಬಲಿ ಸೊಲ್ಲಾಪುರೆ, ರೋಹಿತ ಚೌಗಲಾ, ಸುಕುಮಾರ ಖತಗಲ್ಲಿ, ಭರಮಪ್ಪಾ ಲಠ್ಠೆ, ಅಕ್ಕಪ್ಪಾ ಖತಗಲ್ಲಿ, ಸುಕುಮಾರ ಪಾಟೀಲ, ಅಪ್ಪಾಸಾಹೇಬ ಬಡಿಗೇರ, ಸಿದ್ಧಪ್ಪಾ ಕಂಠಿಕಾರ, ವಿನೋದ ನಿಂಗಪ್ಪಗೋಳ, ಸಂಗೀತಾ ನಿಲಜಗಿ, ಮತ್ತಿತರರು ಉಪಸ್ಥಿತರಿದ್ದರು.

# ಮೂಲ ಭೂತ ವೈದ್ಯಕೀಯ ವಿಧಾನಗಳ ಕೌಶಲ್ಯ ಸಾಮರ್ಥ್ಯ ಕಾರ್ಯಾಗಾರ

ಬೆಳಗಾವಿ: ಕೆಎಲ್ಇ ಫಾರ್ಮಸಿ ಕಾಲೇಜ್, ಬೆಳಗಾವಿಯ, ಫಾರ್ಮಸಿ ಅಭ್ಯಾಸ ವಿಭಾಗವು 20.11.2023 ರಿಂದ 25.11.2023 ರವರೆಗೆ "ಮೂಲವೈದ್ಯಕೀಯ ವಿಧಾನಗಳ ಕೌಶಲ್ಯ ಸಾಮರ್ಥ್ಯ ಕಾರ್ಯಾಗಾರ" ಕುರಿತು ಒಂದು ವಾರದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಿದೆ. ಕಾರ್ಯ ಕ್ರಮವನ್ನು ಪ್ರೊ. ಸಬಿತಾಎಂ, ಪ್ರಾಂಶುಪಾಲರು, ಅಮೃತ ಸ್ಕೂಲ್ ಆಫ್ಫಾರ್ಮಸಿ, ಕೊಚ್ಚಿ ಉದ್ಘಾಟಿಸಿದರು. ಪ್ರೊ. (ಡಾ). ನಿತಿನ್ ಎಂಗಂಗನೆ, ಉಪಕುಲಪತಿ, KAHER, ಪ್ರೊ. (ಡಾ). ಎಂಎಸ ಗಣಾಚಾರಿ, ರಿಜಿಸ್ಟ್ರಾರ್, KAHER, ಬೆಳಗಾವಿ.ಪ್ರೊ. (ಡಾ). ಸುನೀಲ್ ಎಸ್ಜಲಾಲಪುರೆ, ಪ್ರಾಂಶುಪಾಲರು, ಕೆಎಲ್ಇ ಫಾರ್ಮಸಿ ಕಾಲೇಜು, ಬೆಳಗಾವಿ ಮತ್ತು ಬೆಳಗಾವಿಯ ಕೆಎಲ್ಇ ಫಾರ್ಮಸಿ ಕಾಲೇಜಿನ ಉಪಪ್ರಾಂಶುಪಾಲರಾದ ಡಾ.ಎಂ.ಬಿ.ಪಾಟೀಲ್, ಡಾ.ಮಂಜುಳಾಜಿ ಹಾಗೂ ಬೆಳಗಾವಿಯ ಕೆಎಲ್ಇ ಫಾರ್ಮಸಿ ಕಾಲೇಜಿನ ಎಲ್ಲಾ ಅಧ್ಯಾಪಕರು ಉಪಸ್ಥಿತರಿದ್ದರು.

ಪ್ರೊ (ಡಾ.) ಸುನೀಲ್ ಎಸ್ಜಲಾಲಪುರೆ, ಪ್ರಾಂಶುಪಾಲರು, ಕೆಎಲ್ಇ ಫಾರ್ಮಸಿ, ಬೆಳಗಾವಿ, ಎಲ್ಲಾಗಣ್ಯರನ್ನು ಸ್ವಾಗತಿಸಿದರು ಮತ್ತು ಮುಖ್ಯ ಅತಿಥಿಗಳನ್ನು ಪರಿಚಯಿಸಿದರು.

ಎಲ್ಲಾ ಪ್ರತಿನಿಧಿಗಳು ತರಬೇತಿ ಕಾರ್ಯಕ್ರಮದ ಪ್ರಯೋಜನವನ್ನು ಪಡೆದು ಕೊಳ್ಳುವಂತೆ ಅವರು ಒತ್ತಾಯಿಸಿದರು ಮತ್ತು ಸಮುದಾಯಕ್ಕೆ ಉತ್ತಮ ಆರೋಗ್ಯ ಸೇವೆಯನ್ನು ಒದಗಿಸುವ ನಿಟ್ಟಿನಲ್ಲಿ ಭಾಗವಹಿಸುವ ಎಲ್ಲರೂ ತಮ್ಮ ಸೇವೆಗಳನ್ನು ನೀಡಲು ಸಲಹೆ ನೀಡಿದರು.




ಪ್ರೊ. (ಡಾ). ಎಂ.ಎಸ್. ಗಣಾಚಾರಿ ಫಾರ್ಮಸಿ ವಿಭಾಗದ ಡೀನ್ಮತ್ತು ಹೆಡ್, ರಿಜಿಸ್ಟ್ರಾರ್ ಕೆಎಲ್ಇ ಅಕಾಡೆಮಿ ಆಫ್ಹೈಯರ್ ಎಜುಕೇಶನ್ ಅಂಡ್ರಿಸರ್ಚ, ಬೆಳಗಾವಿ. ಕಾರ್ಯಕ್ರಮದ ಅವಲೋಕನ ಮಾಡಿದರು.

ಪ್ರೊ. (ಡಾ). ನಿತಿನ್ ಎಂಗಂಗನೆ, ಉಪಕುಲಪತಿ, ಕೆಎಲ್ಇ ಅಕಾಡೆಮಿ ಆಫ್ಹೈಯರ್ ಎಜುಕೇಶನ್ ಅಂಡ್ರಿಸರ್ಚ, ಬೆಳಗಾವಿ ಅವರು ತಮ್ಮ ಅಧ್ಯಕ್ಷೀಯ ಹೇಳಿಕೆಯಲ್ಲಿ ಇತರ ಆರೋಗ್ಯ ವಿಜ್ಞಾನ ಸಂಸ್ಥೆಗಳೊಂದಿಗೆ ಸಹಯೋಗದ ಮಹತ್ವದ ಕುರಿತು ವಿವರಿಸಿದರು.

ಮುಖ್ಯ ಅತಿಥಿ ಪ್ರೊ.(ಡಾ). ಸಬಿತಾಎಂ, ಪ್ರಾಂಶುಪಾಲರು, ಅಮೃತ ಸ್ಕೂಲ್ ಆಫ್ಫಾರ್ಮಸಿ, ಕೊಚ್ಚಿ ಅವರು ಫಾರ್ಮಸಿ ವೃತ್ತಿಯ ಭವಿಷ್ಯದ ದೃಷ್ಟಿಕೋನದ ಬಗ್ಗೆ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿದರು.

ಅವರು ಇತರ ಆರೋಗ್ಯ ವೃತ್ತಿಪರರೊಂದಿಗೆ ಸಹಯೋಗದ ಪ್ರಾಮುಖ್ಯತೆಯನ್ನು ಒತ್ತಿ ಹೇಳಿದರು.

ಅವರು ಫಾರ್ಮಸಿ ವಿದ್ಯಾರ್ಥಿಗಳಿಗೆ ಸಂಶೋಧನಾ ಯೋಜನೆಗಳಿಗೆ ಒತ್ತು ನೀಡಿದರು ಮತ್ತು ಆರೋಗ್ಯ ಕ್ಷೇತ್ರದಲ್ಲಿ ದೈನಂದಿನ ಚಟುವಟಿಕೆಗಳಲ್ಲಿ ಕೌಶಲ್ಯಗಳ ಕುರಿತು ವಿವರಿಸಿದರು.

ಒಂದು ವಾರದ ಕೌಶಲ್ಯ ಸಾಮರ್ಥ್ಯ ಕಾರ್ಯಾಗಾರವು ವಿವಿಧ ಸಂವಾದಾತ್ಮಕ ಅವಧಿಗಳಾದ ಸುಧಾರಿತ ಜೀವನ ಬೆಂಬಲ, ಮೂಲಭೂತ ಜೀವನ ಬೆಂಬಲ, ಸಿಪಿಆರ್ತರಬೇತಿ, ಎಕ್ಸ್ರೇ ಇಂಟರ್ಪ್ರಿಟೇಶನ್, ಇಸಿಜಿವ್ಯಾಖ್ಯಾನ, ಮೂಲವಾಯು ಮಾರ್ಗನಿರ್ವಹಣಾ ತಂತ್ರಗಳು, ಕ್ಯಾತಿಟರ್ಗಳ ವಿಧಗಳು, ಗಾಯದ ಚಿಕಿತ್ಸೆ ಮತ್ತು ಸಮುದಾಯ ಫಾರ್ಮಸಿ ನಿರ್ವಹಣೆಯ ಕಾರ್ಯಾಗಾರವನ್ನು ಒಳಗೊಂಡಿದೆ. ಆ Pharm, Pharm D, M. Pharm ಮತ್ತು M. Sc ಕ್ಲಿನಿಕಲ ಸಂಶೋಧನಾ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಬಾಗವಹಿಸಿದ್ದರು.

ಭಾರತದಾದ್ಯಂತ ವಿವಿದ ಫಾರ್ಮಸಿ ಸಂಸ್ಥೆಗಳಿಂದ ಸುಮಾರು 200 ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿದರು.

ಡಾ.ಮಂಜುಳಾಜಿ ಸಹಾಯಕ ಪ್ರಾಧ್ಯಾಪಕಿ ಫಾರ್ಮಸಿ ಅಭ್ಯಾಸ ವಿಭಾಗ, ಕೆಎಲ್ಇ ಫಾರ್ಮಸಿ ಕಾಲೇಜ್, ಬೆಳಗಾವಿ ಎಲ್ಲಾ ಉಪಸ್ತಿತರನ್ನು ವಂದಿಸಿದರು.

ಸಂಪುಟ: 4 ಸಂಚಿಕೆ: 244 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089